22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 296 | ನವದೆಹಲಿ | ಬೆಲೆ ₹ 10 | ಮೇ 2, 2025, ಶುಕ್ರವಾರ

## ಒಳಪುಟಗಳಲ್ಲಿ

ರಾಜಕೀಯಕ್ಕೆ ಜಾತಿಗಣತಿ ಬಳಸಬೇಡಿ: ಆರ್‌ಎಸ್‌ಎಸ್– ಪು.4

ಬಳ್ಳಾರಿ ಅಂಚೆ ವಿಭಾಗಕ್ಕೆ 17 ರಾಜ್ಯ ಪ್ರಶಸ್ತಿಗಳ ಮೆರುಗು–ಪಿ. ಚಿದಾನಂದ – ಪು.6

## ಆಯ್ಕೆ ಮಾಡಿದ್ದು 4, ಗುರಿ 1 ದಾಳಿಗೆ ಪಕ್ಕಾ ಯೋಜನೆ ಮಾಡಿದ್ದ ಉಗ್ರರು

**ನವದೆಹಲಿ, ಮೇ 1:** ಪಹಲಮ್‌ನಲ್ಲಿ ಉಗ್ರರ ದಾಳಿ ತನಿಖೆಗಿಳಿದಿರುವ ತನಿಖಾ ಸಂಸ್ಥೆಗಳು ಹಲವಾರು ಅಚ್ಚರಿದಾಯಕ ಅಂಶಗಳನ್ನು ಬಹಿರಂಗಪಡಿಸಿವೆ. ಭಯೋತ್ಪಾದಕರು ಪಹಲ್ಗಾಮ್ ಜೊತೆ ಇನ್ನೂ ಮೂರು ತಾಣಗಳನ್ನು ಟಾರ್ಗೆಟ್ ಮಾಡಿದ್ದರು ಎಂಬುದು ತನಿಖೆಯಿಂದ ಗೊತ್ತಾಗಿದೆ.

ಏಪ್ರಿಲ್ 22 ರಂದು 26 ಜನರ ಸಾವಿಗೆ ಕಾರಣವಾದ ಪಹಲ್ಗಾಮ್ ದಾಳಿಯನ್ನು ನಡೆಸಿದ ಭಯೋತ್ಪಾದಕರು ಘಟನೆಗೆ ಎರಡು ದಿನಗಳ ಮೊದಲೇ ಬೈಸರನ್ ಕಣಿವೆಯಲ್ಲಿ ಇದ್ದರು ಎಂದು ಮೂಲಗಳು ತಿಳಿಸಿವೆ. ಬೈಸರನ್ ವ್ಯಾಲಿಯಲ್ಲಿ ದಾಳಿಗೂ ಮುನ್ನ ಉಗ್ರರು ಪರಿಶೀಲನೆ ನಡೆಸಿದ್ದರು. ದಾಳಿಗೆ ಪಕ್ಕಾ ಪ್ಲ್ಯಾನ್ ಮಾಡಿದ್ದರು ಎಂಬ ವಿಚಾರವನ್ನು ದಾಳಿಗೆ ಸಂಬಂಧಿಸಿದಂತೆ ಬಂಧಿತ ಓವರ್ ಗ್ರೌಂಡ್ ವರ್ಕರ್‌ಗಳಲ್ಲಿ ಒಬ್ಬನಾದ ಸ್ಥಳೀಯ ವ್ಯಕ್ತಿ ಬಾಯ್ಬಿಟ್ಟಿದ್ದಾನೆ. ಈತ ಉಗ್ರರಿಗೆ ಸಹಾಯ ಮಾಡಿದ್ದ.

ಆಯ್ಕೆ 4, ಟಾರ್ಗೆಟ್ 1 ಉಗ್ರರು ಪಹಲ್ಗಾಮ್ ಬೈಸರನ್ ವ್ಯಾಲಿ ಜೊತೆಗೆ ಅರು ವ್ಯಾಲಿ, ಸ್ಥಳೀಯ ಅಮ್ಯೂಸ್ ಮೆಂಟ್ ಪಾರ್ಕ್, ಬೇತಾಬ್ ವ್ಯಾಲಿ (ಪುಣೆ ವ್ಯಕ್ತಿಯ ಮಗಳು ರೀಲ್ಸ್ ಮಾಡಿದ್ದ ಜಾಗ)ಯನ್ನೂ ದಾಳಿಗೆ ಗುರಿಯಾಗಿಸಿದ್ದರು. ಆದರೆ, ಕೊನೆಗೆ ಪಹಲಾಮ್‌ನಲ್ಲಿ ದಾಳಿ ನಡೆಸಿದ್ದಾರೆ.

ಪಹಲ್ಗಾಮ್ ಹೊರತುಪಡಿಸಿ ಉಳಿದ ಎಲ್ಲ ಕಡೆ ಬಿಗಿ ಭದ್ರತೆ ಇತ್ತು. ಹೀಗಾಗಿ, ಕೊನೆಗೆ ಬೈಸರನ್ ವ್ಯಾಲಿಯಲ್ಲಿ ದಾಳಿ ನಡೆಸುವ ಪ್ಲ್ಯಾನ್ ಅನ್ನು ಉಗ್ರರು ಫೈನಲ್ ಮಾಡಿದ್ದರು. ನಾಲ್ವರು ಸ್ಥಳೀಯರಿಂದ ಉಗ್ರರಿಗೆ ಸಹಾಯ ಸಿಕ್ಕಿತ್ತು. ಲಾಜಿಸ್ಟಿಕ್ ವ್ಯವಸ್ಥೆ ಮಾಡಿಕೊಡಲಾಗಿತ್ತು.

ಸ್ಥಳೀಯ 20 ಮಂದಿಯು ಉಗ್ರರಿಗೆ ಸಹಾಯ ಮಾಡಿದ್ದಾರೆ. ಇವರಲ್ಲಿ ಕೆಲವರನ್ನು ಬಂಧಿಸಿರುವ ಎನ್‌ಐಎ ಇನ್ನೂ ಕೆಲ ಶಂಕಿತರ ಮೇಲೆ ಕಣ್ಣಾವಲು ಇರಿಸಿದೆ. ದಾಳಿಗೂ ಮುನ್ನ ಈ ಏರಿಯಾದಲ್ಲಿ ಮೂರು ಸ್ಯಾಟಲೈಟ್ ಫೋನ್‌ಗಳ ಬಳಕೆಯಾಗಿವೆ. ಇದರಲ್ಲಿ 2 ಫೋನ್‌ಗಳ ಸಿಗ್ನಲ್ ಟ್ರೇಸ್ ಮಾಡುವಲ್ಲಿ ತನಿಖಾ ತಂಡ ಯಶಸ್ವಿಯಾಗಿದೆ. ಇದುವರೆಗೆ 2,500 ಜನರ ವಿಚಾರಣೆ ನಡೆಸಲಾಗಿದೆ. 186 ಮಂದಿಯನ್ನು ತನಿಖಾ ತಂಡ ವಶಕ್ಕೆ ತೆಗೆದುಕೊಂಡಿದೆ.

## ಭಾರತ ತನ್ನನ್ನು ರಕ್ಷಿಸಿಕೊಳ್ಳುವ ಹಕ್ಕಿಗೆ ಅಮೆರಿಕದ ಬೆಂಬಲ ರಾಜನಾಥ್ ಸಿಂಗ್‌ಗೆ ರಕ್ಷಣಾ ಕಾರ್ಯದರ್ಶಿ ಸಂದೇಶ



**ನವದೆಹಲಿ, ಮೇ 1 :** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ಭಯೋತ್ಪಾದಕರು ನಡೆಸಿದ ಭೀಕರ ದಾಳಿಯಲ್ಲಿ ಅಮಾಯಕ ನಾಗರಿಕರ ದುರಂತ ನಷ್ಟಕ್ಕೆ ಅಮೆರಿಕ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಗುರುವಾರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಕರೆ ಮಾಡಿ ಸಂತಾಪ ಸೂಚಿಸಿದ್ದಾರೆ. ಭಯೋತ್ಪಾದನೆಯ ವಿರುದ್ಧದ ಭಾರತದ ಹೋರಾಟದಲ್ಲಿ ಅಮೆರಿಕ ಸರ್ಕಾರದ ಸಂಪೂರ್ಣ ಬೆಂಬಲವನ್ನು ಅಮೆರಿಕ ರಕ್ಷಣಾ ಕಾರ್ಯದರ್ಶಿ ಪುನರುಚ್ಚರಿಸಿದ್ದಾರೆ. ಅಮೆರಿಕ ಭಾರತದೊಂದಿಗೆ ಒಗ್ಗಟ್ಟಿನಲ್ಲಿ ನಿಲ್ಲುತ್ತದೆ ಮತ್ತು ಭಾರತದ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಬೆಂಬಲಿಸುತ್ತದೆ ಎಂದು ರಕ್ಷಣಾ ಸಚಿವಾಲಯದ ಹೇಳಿಕೆ ತಿಳಿಸಿದೆ. ಸಂಭಾಷಣೆಯ ಸಮಯದಲ್ಲಿ, ಪಾಕಿಸ್ತಾನವು ಭಯೋತ್ಪಾದಕ ಸಂಘಟನೆಗಳನ್ನು ಬೆಂಬಲಿಸುವ, ತರಬೇತಿ ನೀಡುವ ಮತ್ತು ಹಣಕಾಸು ಒದಗಿಸುವ ಇತಿಹಾಸವನ್ನು ಹೊಂದಿದೆ ಎಂದು ರಾಜನಾಥ್ ಪೀಟ್ ಹೆಗ್ಸೆತ್‌ಗೆ ತಿಳಿಸಿದರು. ಪಾಕಿಸ್ತಾನವು ಒಂದು ರಾಕ್ಷಸ ರಾಷ್ಟ್ರ ಎಂದು ಬಹಿರಂಗಗೊಂಡಿದೆ, ಜಾಗತಿಕ ಭಯೋತ್ಪಾದನೆಯನ್ನು ಉತ್ತೇಜಿಸುತ್ತದೆ ಮತ್ತು ಪ್ರದೇಶವನ್ನು ಅಸ್ಥಿರಗೊಳಿಸುತ್ತದೆ. ಭಯೋತ್ಪಾದನೆಯತ್ತ ಜಗತ್ತು ಇನ್ನು ಮುಂದೆ ಕಣ್ಣು ಮುಚ್ಚಲು ಸಾಧ್ಯವಿಲ್ಲ" ಎಂದು ರಾಜನಾಥ್ ಹೇಳಿದರು. ಜಾಗತಿಕ ಸಮುದಾಯವು ಇಂತಹ ಘೋರ ಭಯೋತ್ಪಾದನಾ ಕೃತ್ಯಗಳನ್ನು ಸ್ಪಷ್ಟವಾಗಿ ಮತ್ತು ನಿಸ್ಸಂದಿಗ್ಧವಾಗಿ ಖಂಡಿಸುವುದು ಮತ್ತು ಕರೆ ನೀಡುವುದು ಮುಖ್ಯ ಎಂದು ಅವರು ಹೇಳಿದರು. ಗಮನಾರ್ಹವಾಗಿ, ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಪ್ರವಾಸಿಗರು ಸಾವನ್ನಪ್ಪಿದರು. ಈ ಹೇಯ ಕೃತ್ಯದ ನಂತರ, ಭಾರತವು ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳುತ್ತದೆ, ಇದರಲ್ಲಿ ಸಿಂಧೂ ನದಿ ನೀರು ಒಪ್ಪಂದವನ್ನು ಸ್ಥಗಿತಗೊಳಿಸುವುದು ಮತ್ತು ಅಟ್ಟಾರಿ ಇಂಟಿಗ್ರೇಟೆಡ್ ಚೆಕ್ ಪೋಸ್ಟ್ ಮುಚ್ಚುವುದು ಸೇರಿವೆ.

## ನ್ಯಾಯಕ್ಕೆ ಜಾತಿ ದತ್ತಾಂಶ ಮುಖ್ಯ



**ಬೆಂಗಳೂರು, ಮೇ 1:** ಸಾಮಾಜಿಕ ನ್ಯಾಯ ಮತ್ತು ಹಕ್ಕುಗಳ ಸಮಾನ ವಿತರಣೆಯನ್ನು ಖಚಿತಪಡಿಸಿಕೊಳ್ಳಲು ಜಾತಿ ಆಧಾರಿತ ದತ್ತಾಂಶದ ಪ್ರವೇಶ ಅತ್ಯಗತ್ಯ ಎಂದು ಕರ್ನಾಟಕ ಉಪಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಗುರುವಾರ ಕೇಂದ್ರ ಸರ್ಕಾರವು ಜಾತಿ ಜನಗಣತಿ ನಡೆಸುವ ನಿರ್ಧಾರವನ್ನು ಸ್ವಾಗತಿಸುತ್ತಾ ಹೇಳಿದರು.

**ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಅವರು ಜಾತಿ ಗಣತಿ ನಡೆಸುವುದು ಕೇಂದ್ರದ ಜವಾಬ್ದಾರಿ ಎಂದು ಹೇಳಿದರು. ರಾಹುಲ್ ಗಾಂಧಿಯವರ ಒತ್ತಾಯಕ್ಕೆ ಮಣಿದು ಕೇಂದ್ರ ಸರ್ಕಾರ ಜಾತಿಗಣತಿಗೆ ಮುಂದಾಗಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.**

"ಜಾತಿ ಅಥವಾ ಸಮುದಾಯವನ್ನು ಲೆಕ್ಕಿಸದೆ ಸಮಾಜದ ಪ್ರತಿಯೊಂದು ವರ್ಗವು ತಮ್ಮ ಹಕ್ಕುಗಳ ಬಗ್ಗೆ ದತ್ತಾಂಶದ ಪ್ರವೇಶವನ್ನು ಹೊಂದಿರಬೇಕು" ಎಂದು ಶಿವಕುಮಾರ್ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು. "ಈ ದತ್ತಾಂಶವನ್ನು ಸಾರ್ವಜನಿಕಗೊಳಿಸುವುದು ಮತ್ತು ಅವರ ಸರಿಯಾದ ಹಕ್ಕುಗಳನ್ನು ವ್ಯವಸ್ಥಿತವಾಗಿ ಸ್ಥಾಪಿಸಲು ಮತ್ತು ಖಚಿತಪಡಿಸಿಕೊಳ್ಳಲು ಬಳಸುವುದು ಅತ್ಯಗತ್ಯ. ಕಾಂಗ್ರೆಸ್ ಪಕ್ಷವು ಬಹಳ ಹಿಂದಿನಿಂದಲೂ ಜಾತಿ ಜನಗಣತಿಯನ್ನು ಪ್ರತಿಪಾದಿಸುತ್ತಿದೆ ಮತ್ತು ಅದರ ಅನುಷ್ಠಾನಕ್ಕೆ ಸ್ಪಷ್ಟವಾದ ಸಮಯದ ಚೌಕಟ್ಟನ್ನು ಒತ್ತಾಯಿಸಿದೆ ಎಂದು ಅವರು ಹೇಳಿದರು. "ನಮ್ಮ ನಾಯಕ ರಾಹುಲ್ ಗಾಂಧಿ ಈಗಾಗಲೇ ಕೇಂದ್ರದ ನಿರ್ಧಾರವನ್ನು ಸ್ವಾಗತಿಸಿದ್ದಾರೆ. ಸಾಮಾಜಿಕ ನ್ಯಾಯದ ತತ್ವಗಳಿಗೆ ಕಾಂಗ್ರೆಸ್ ಸಂಪೂರ್ಣವಾಗಿ ಬದ್ಧವಾಗಿದೆ" ಎಂದು ಅವರು ಹೇಳಿದರು. ಸಮಾಜದ ಎಲ್ಲಾ ಸಮುದಾಯಗಳಿಗೆ ನ್ಯಾಯ ಸಿಗಬೇಕು ಎಂದರೆ ಜನಸಂಖ್ಯೆಯ ಆಧಾರದ ಮೇಲೆ ದೇಶದ ಜನರಿಗೆ ಸೌಲಭ್ಯಗಳನ್ನು ನೀಡಲಾಗಿದೆ ಕಾಂಗ್ರೆಸ್ ಪಕ್ಷದ ಮೂಲ ಆಶಯ, ಸಿದ್ಧಾಂತ, ಬೇಡಿಕೆಯಾಗಿದೆ.

# ರಾಜ್ಯದಲ್ಲಿ ಪೌರ ಕಾರ್ಮಿಕರ ಸೇವೆ ಕಾಯಮಾತಿಗೆ ಕಾಂಗ್ರೆಸ್ ಸರ್ಕಾರ ಬದ್ಧ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು, ಮೇ 1:** ಪೌರಕಾರ್ಮಿಕರು ಪ್ರಸ್ತುತ ಕಾಯಂ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಸುಮಾರು 9000 ಸಂಖ್ಯೆಯಷ್ಟಿರುವ ವಾಹನಚಾಲಕರು, ಸಹಾಯಕರು ಹಾಗೂ ಆಪರೇಟರ್ಸ್‌ಗಳನ್ನೂ ಕೂಡ ಕಾಯಂ ಮಾಡಲಾಗುವುದು. ಶುಚಿತ್ವದ ಕಾಯಕದಲ್ಲಿ ತೊಡಗಿರುವವರನ್ನು ಕಾಯಂ ನೇಮಕಾತಿ ಮಾಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಇಂದು ಬಿಬಿಎಂಪಿ ವತಿಯಿಂದ ಆಯೋಜಿಸಲಾಗಿದ್ದ ಪೌರ ಕಾರ್ಮಿಕರ ದಿನಾಚರಣೆ ಹಾಗೂ ಪೌರ ಕಾರ್ಮಿಕರಿಗೆ ನೇಮಕಾತಿ ಪತ್ರ ವಿತರಣಾ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಪೌರ ಕಾರ್ಮಿಕರಿಗೆ ನೇಮಕಾತಿ ಪತ್ರ ವಿತರಿಸಿನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು

**ಮದ್ಯವರ್ತಿಗಳ ಹಾವಳಿಯಿಂದ ಪೌರ ಕಾರ್ಮಿಕರು ಮುಕ್ತ**

ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ, ಪೌರಕಾರ್ಮಿಕರನ್ನು ಗುತ್ತಿಗೆದಾರರು ಶೋಷಣೆ ಮಾಡುತ್ತಿದ್ದು, ನ್ಯಾಯಯುತವಾದ ಸಂಬಳ ಕೊಡದೇ ಇದ್ದುದ್ದನ್ನು ಗಮನಿಸಿದ್ದೆ. ಅದಕ್ಕಾಗಿ ಶೋಷಣೆಗೊಳಗಾದ ಪೌರಕಾರ್ಮಿಕರ ಸಹಾಯಕ್ಕಾಗಿ ಕನಿಷ್ಟ ವೇತನ ಕಾಯ್ದೆ ಪ್ರಕಾರ ದೊರೆಯಬೇಕಾದ ಕನಿಷ್ಟ ಸಂಬಳವನ್ನು ಕಡ್ಡಾಯವಾಗಿ ದೊರೆಯುವ ವ್ಯವಸ್ಥೆಯನ್ನು ಮಾಡಿದೆ. ಮೊದಲು 7000 ರೂ. ದೊರೆಯುತ್ತಿದ್ದ ಸಂಬಳವನ್ನು 17000 ಕ್ಕೆ ಹೆಚ್ಚಿಸಿ, ನೇರವಾಗಿ ಬ್ಯಾಂಕ್ ಖಾತೆಗೆ ಪಾವತಿಯಾಗುವ ವ್ಯವಸ್ಥೆಯನ್ನು ಮಾಡಲಾಯಿತು. ಈ ರೀತಿ ಪೌರಕಾರ್ಮಿಕರಿಗೆ ಮದ್ಯವರ್ತಿಗಳ ಹಾವಳಿಯಿಂದ ಮುಕ್ತಗೊಳಿಸ ಲಾಯಿತು ಎಂದರು.




**ಪೌರಕಾರ್ಮಿಕರ ಬೇಡಿಕೆ ಈಡೇರಿಸಿದ್ದು ಕಾಂಗ್ರೆಸ್ ಸರ್ಕಾರ:**

ವಿರೋಧ ಪಕ್ಷದ ನಾಯಕನಾಗಿದ್ದ ಸಂದರ್ಭದಲ್ಲಿ ಪೌರಕಾರ್ಮಿಕರ ಬಹುದಿನಗಳ ಬೇಡಿಕೆಯಾಗಿದ್ದ ಕಾಯಂ ನೇಮಕಾತಿಯನ್ನು ಬೆಂಬಲಿಸಿ, ಆಗಿನ ಸರ್ಕಾರ ಕಾಯಂ ನೇಮಕಾತಿ ಬೇಡಿಕೆಯನ್ನು ಈಡೇರಿಸದಿದ್ದಲ್ಲಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಪೌರ ಕಾರ್ಮಿಕರ ಈ ಬೇಡಿಕೆಯನ್ನು ಪೂರೈಸುವುದಾಗಿ ನೀಡಲಾಗಿದ್ದ ಭರವಸೆಯನ್ನು ಇಂದು ಈಡೇರಿಸಲಾಗಿದೆ. ಇದರಿಂದ 4ನೇ ದರ್ಜೆಯ ಪೌರಕಾರ್ಮಿಕನ ವೇತನ , ಅವರ ಖಾತೆಗೆ ನೇರವಾಗಿ 39000 ರೂ.ಗಳು ಪಾವತಿಯಾಗಲಿದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು.

**ಕಾಯಕದಲ್ಲಿ ಮೇಲು–ಕೀಳು ಇಲ್ಲ:**

ಶುಚಿತ್ವದಲ್ಲಿ ದೈವತ್ವವನ್ನು ಕಾಣಬೇಕು ಎಂದು ಮಹಾತ್ಮಾಗಾಂಧೀಜಿಯವರು ನುಡಿದಿದ್ದರು. ಪರಿಸರದ ಸ್ವಚ್ಛತೆಯನ್ನು ಕಾಪಾಡುವುದು ಶ್ರೇಷ್ಠವಾದ ಕೆಲಸ. ಬಸವಣ್ಣನವರು ಕಾಯಕವೇ ಕೈಲಾಸ ಎಂದು ತಿಳಿಸಿದ್ದು, ಯಾವುದೇ ಕೆಲಸದಲ್ಲಿ ಮೇಲು ಕೀಳೆಂಬುದು ಇಲ್ಲ ಎಂದರು. ಪೌರಕಾರ್ಮಿಕರ ಮಕ್ಕಳು ವಿದ್ಯಾವಂತರಾಗಿ ಸಮಾಜದ ಮುಖ್ಯವಾಹಿನಿಗೆ ಬರುವಂತಾಬೇಕು.

1000 ಪೌರಕಾರ್ಮಿಕರನ್ನು ವಿದೇಶಕ್ಕೆ ಕಳಿಸುವ ಯೋಜನೆ ಸೇರಿದಂತೆ ಹಲವಾರು ಕಲ್ಯಾಣ ಯೋಜನೆಗಳನ್ನು ಪೌರಕಾರ್ಮಿಕರಿಗಾಗಿ ಹಮ್ಮಿಕೊಳ್ಳಲಾಗಿದೆ.

ಪೌರಕಾರ್ಮಿಕರು , ಅವರ ಕುಟುಂಬದವರೂ ಮುಖ್ಯವಾಹಿನಿಗೆ ಬರಬೇಕು, ತನ್ಮೂಲಕ ಸಮಸಮಾಜವನ್ನು ನಿರ್ಮಿಸುವ ಉದ್ದೇಶ ಸರ್ಕಾರದ್ದಾಗಿದೆ.

ರಾಜ್ಯದ ಎಲ್ಲ ವರ್ಗದ ಜನರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮಾನತೆ ದೊರೆಯುವಂತಾಗಬೇಕು. ಪೌರಕಾರ್ಮಿಕ ವರ್ಗದ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸರ್ಕಾರಕ್ಕೆ ಬೆಂಬಲವಾಗಿ ನಿಲ್ಲಬೇಕೆಂದು ಕೋರಿದರು. ಪೌರಕಾರ್ಮಿಕರ ಮಕ್ಕಳು ವಿದ್ಯಾವಂತರಾಗಿ ಸಮಾಜದ ಮುಖ್ಯವಾಹಿನಿಗೆ ಬರುವಂತಾಬೇಕು. ಸಾರ್ವಜನಿಕರೂ ತಮ್ಮ ಪರಿಸರದ ಸ್ವಚ್ಛತೆ ಬಗ್ಗೆ ಸ್ವಯಂಪ್ರೇರಣೆಯಿಂದ ಗಮನಹರಿಸಬೇಕು ಎಂದು ತಿಳಿಸಿದರು.

## ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ಪದ್ಧತಿ ಜಾರಿಗೆ ತರಲು ಕಾನೂನು ರೂಪಿಸಿ: ಖರ್ಗೆ ಸೂಚನೆ



**ಬೆಂಗಳೂರು, ಮೇ 1:** ಕೇಂದ್ರ ಸರ್ಕಾರ ಜಾತಿ ಜನಗಣತಿ ಮಾಡುವುದಾಗಿ ಘೋಷಣೆ ಮಾಡಿರುವುದನ್ನು ಸ್ವಾಗತಿಸುವುದಾಗಿ ಹೇಳಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ಪದ್ಧತಿಯನ್ನು ಜಾರಿಗೆ ತರಲು ಕಾನೂನು ರೂಪಿಸುವಂತೆ ಆಗ್ರಹಿಸಿದ್ದಾರೆ.

ಮೀಸಲಾತಿ ಪ್ರಮಾಣ ಶೇ. 50 ರಷ್ಟು ಮೀರಬಾರದು ಎಂಬ ಮಿತಿಯನ್ನು ತೆಗೆದು ಅಹಿಂದ ವರ್ಗಕ್ಕೆ ಹೆಚ್ಚಿನ ಮೀಸಲಾತಿ ನೀಡುವ ಅಗತ್ಯವಿದೆ ಹೇಳಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿಂದು ಪೌರ ಕಾರ್ಮಿಕರಿಗೆ ನೇಮಕಾತಿ ಪತ್ರಗಳನ್ನು ವಿತರಿಸಿ ಮಾತನಾಡಿದ ಅವರು, ಹಿಂದುಳಿದ ವರ್ಗಗಳಿಗೆ ನ್ಯಾಯ ಒದಗಿಸಬೇಕು ಎಂದು ಜಾತಿ ಗಣತಿಗೆ ಕಾಂಗ್ರೆಸ್ ಒತ್ತಾಯಿಸಿತ್ತು. ನಾವು ಹೇಳಿದಾಗ ಜಾತಿ ಗಣತಿ ಮಾಡದೆ ಈಗ ಕೇಂದ್ರ ಸರ್ಕಾರ ಜಾತಿ ಗಣತಿ ಘೋಷಣೆ ಮಾಡಿ ಕ್ರೆಡಿಟ್ ಪಡೆಯಲು ಹೊರಟಿದೆ ಎಂದು ಹೇಳಿದರು. ಅಹಿಂದ ವರ್ಗಕ್ಕೆ ಅವರ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಒದಗಿಸಲು ಈಗಿರುವ ಶೇ. 50 ಮೀಸಲಾತಿ ಮಿತಿಯನ್ನು ತೆಗೆಯುವ ಅವಶ್ಯಕತೆ ಇದೆ ಎಂದು ಹೇಳಿದ ಅವರು, ಈ ಕೆಲಸ ಮಾಡದೇ ಹೋದರೆ ಜನ ಬೀದಿಗೆ ಬಂದು ತಮ್ಮ ಹಕ್ಕನ್ನು ಪಡೆದುಕೊಳ್ಳುವ ಕಾಲ ಬರುತ್ತದೆ ಎಂದರು. ಖಾಸಗಿ ವಲಯದಲ್ಲೂ ಮೀಸಲಾತಿ ಜಾರಿ ಮಾಡುವ ಕಾನೂನು ಅಗತ್ಯವಿದೆ ಎಂದು ಅವರು ಹೇಳಿದರು. ಈ ಹಿಂದೆ ಯುಪಿಎ ಸರ್ಕಾರ ಇದ್ದಾಗ 2010ರ ಸಪ್ಟೆಂಬರ್‌ನಲ್ಲಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯನ್ನು ಆರಂಭಿಸಲಾಗಿತ್ತು. ಆಗ ನಾನು ಕೇಂದ್ರದಲ್ಲಿ ಕಾರ್ಮಿಕ ಹಾಗೂ ಸಮಾಜ ಕಲ್ಯಾಣ ಸಚಿವನಾಗಿದ್ದೆ. 2016 ರಲ್ಲಿ ಈ ಸಮೀಕ್ಷೆ ಮುಗಿದಿದೆ. ಆದರೆ ಬಿಜೆಪಿ ಸರ್ಕಾರ ಈ ವರದಿಯನ್ನು ಇದುವರೆಗೂ ಬಹಿರಂಗಪಡಿಸಿಲ್ಲ ಮತ್ತು ಜಾರಿಗೆ ತಂದಿಲ್ಲ ಎಂದು ದೂರಿದರು. ಒಳ್ಳೆಯ ಕೆಲಸಗಳ ಕೀರ್ತಿ ಕಾಂಗ್ರೆಸ್ಗೆ ಸಲ್ಲಬಾರದು ಎಂಬ ಕಾರಣಕ್ಕೆ ಈ ವರದಿಯನ್ನು ಜಾರಿ ಮಾಡಿಲ್ಲ. ನಾವು 2 ವರ್ಷಗಳ ಹಿಂದೆಯೇ ಜನಗಣತಿಯಲ್ಲಿ ಜಾತಿಗಣತಿ ಸೇರಿಸಬೇಕು ಎಂದು ಒತ್ತಾಯಿಸಿದ್ದೆವು. ಎರಡು ವರ್ಷದಿಂದ ಕೇಂದ್ರ ಏನೂ ಮಾಡಲಿಲ್ಲ. ಅವರಿಗೆ ಬೇಕಾದಾಗ ಅವರು ನಿರ್ಧಾರ ತೆಗೆದುಕೊಳ್ಳುತ್ತಾರೆ. ಕಾಂಗ್ರೆಸ್ಗೆ ಹೆಸರು ಬರುತ್ತದೆ ಎಂಬುದು ಅವರ ಧೋರಣೆ. ಹಾಗಾಗಿಯೇ ನಮಗೆ ಮಾತ್ರ ಹೆಸರು ಬರಬೇಕು ಎನ್ನುವ ಹುನ್ನಾರ ಬಿಜೆಪಿಯವರದ್ದು ಎಂದು ದೂರಿದರು. ಈ ಹಿಂದೆ ಅಂಬೇಡ್ಕರ್ ವಿರುದ್ದ ಕಾಂಗ್ರೆಸ್ ಇದೆ ಎಂದು ಅಪಪ್ರಚಾರ ನಡೆಸಿದ್ದರು. ಅದೇ ರೀತಿಯ ಜಾತಿ ಗಣತಿಗೆ ನೆಹರು ವಿರೋಧವಾಗಿದ್ದರು ಎಂದು ಹೇಳಿದ್ದಾರೆ. ಡಾ. ಅಂಬೇಡ್ಕರ್ ರೂಪಿಸಿದ್ದ ಹಿಂದೂ ಕೋಡ್ ಬಿಲ್ನ್ನ ನೆಹರುರವರು ಜಾರಿ ಮಾಡಿದ್ದರು. ಕಾಂಗ್ರೆಸ್ ಮಾಡಿದಷ್ಟು ಒಳ್ಳೆಯ ಕೆಲಸವನ್ನು ಬಿಜೆಪಿಯಿಂದ ಮಾಡಲು ಸಾಧ್ಯವಿಲ್ಲ ಎಂದು ಅವರು ಹೇಳಿದರು. ಬಿಜೆಪಿ ಎಂದೂ ಕಾರ್ಮಿಕರ ಪರ ಕಾನೂನು ಮಾಡಲ್ಲ. ಶ್ರೀಮಂತರಿಗೆ, ಕಾರ್ಪೊರೇಟ್ ಕಂಪೆನಿಗಳಿಗೆ ಮಾತ್ರ ಸಹಕಾರ ಕೊಡುತ್ತಾರೆ. ಪೌರ ಕಾರ್ಮಿಕರು ನಿಮ್ಮ ಮಕ್ಕಳಿಗೆ ವಿದ್ಯಾಭ್ಯಾಸ ಕೊಡಿಸಿ ಬುದ್ಧಿವಂತರನ್ನಾಗಿ ಮಾಡಿ. ಶಿಕ್ಷಣ, ಸಂಘಟನೆ, ಸ್ವಾಭಿಮಾನ ಇವುಗಳನ್ನು ನಿಮ್ಮ ಮಕ್ಕಳಿಗೆ ನೀಡಿ ಎಂದರು. ದೇಶದ ಇತಿಹಾಸದಲ್ಲೇ ಇಷ್ಟು ದೊಡ್ಡ ಪ್ರಮಾಣದಲ್ಲಿ ಪೌರ ಕಾರ್ಮಿಕರ ನೇಮಕಾತಿ ಆಗುತ್ತಿರುವುದು ಇದೇ ಮೊದಲು. ನಾವು ನಮ್ಮ ಪ್ರಣಾಳಿಕೆಯಲ್ಲಿ ಏನೇನು ಕೊಟ್ಟಿದ್ದೇವೆಯೋ ಅದನ್ನೆಲ್ಲಾ ಜಾರಿ ಮಾಡುತ್ತೇವೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಸಚಿವರು, ಶಾಸಕರು ಉಪಸ್ಥಿತರಿದ್ದರು.



ಮುಂಬೈನಲ್ಲಿ ನಡೆದ ವಿಶ್ವ ಆಡಿಯೋ ದೃಶ್ಯ ಮತ್ತು ಮನರಂಜನಾ ಶೃಂಗಸಭೆಯ ಉದ್ಘಾಟನಾ ಸಮಾರಂಭದಲ್ಲಿ ಪ್ರಧಾನಮಂತ್ರಿ ಭಾಗವಹಿಸಿದ್ದರು.

# ಮೇ 9ಕ್ಕೆ ಸಚಿವ ಸಂಪುಟ ಸಭೆ

**ಬೆಂಗಳೂರು, ಮೇ 1:** ರಾಜ್ಯ ಸರ್ಕಾರದಿಂದ ನಡೆಸಲಾಯಿತು ಸಾಮಾಜಿಕ , ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷಾ ವರದಿ ಕುರಿತು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಧಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.

**ಸಚಿವರು ಅಂತಿಮ ಅಭಿಪ್ರಾಯ ಕೊಟ್ಟ ನಂತರ ತೀರ್ಮಾನ:**

ಸಚಿವರ ಅಭಿಪ್ರಾಯ ಕೇಳಿದ್ದೇವೆ , ಸಚಿವರ ವರದಿಯನ್ನು ಮೇ 9 ರಂದು ನಡೆಯುವ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. ಸಚಿವರು ಅಂತಿಮ ಅಭಿಪ್ರಾಯ ಕೊಟ್ಟ ನಂತರ ತೀರ್ಮಾನ ತೆಗೆದುಕೊಳ್ಳಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿ ಏರಿಕೆಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ತಿಳಿಸಿದರು. ಮೀಸಲಾತಿ ಏರಿಕೆಯಾಗಬೇಕಾದರೆ ಸಂವಿಧಾನಕ್ಕೆ ಕೇಂದ್ರ ಸರ್ಕಾರ ತಿದ್ದುಪಡಿ ಮಾಡಬೇಕು. ರಾಜ್ಯ ಸರ್ಕಾರ ಕೇಂದ್ರಕ್ಕೆ ಎಷ್ಟು ಪ್ರಮಾಣದಲ್ಲಿ ಏರಿಕೆ ಮಾಡಬೇಕೆಂದು ತಿಳಿಸಬಹುದು. ಆಗ ಸಂವಿಧಾನ ತಿದ್ದುಪಡಿ ಮಾಡಿ ಏರಿಕೆ ಮಾಡಬಹುದು ಎಂದರು.

**ಶೇ93% ಜನಸಂಖ್ಯೆ ಸಮೀಕ್ಷೆಗೆ ಒಳಪಟ್ಟಿದ್ದಾರೆ:**

ರಾಜ್ಯ ಸರ್ಕಾರ ನಡೆಸಿದ ಸಮೀಕ್ಷೆಯಲ್ಲಿ 5.90 ಕೋಟಿ ಜನರನ್ನು ಒಳಪಡಿಸಲಾಗಿದೆ. ಶೇ 93% ಜನಸಂಖ್ಯೆ ಸಮೀಕ್ಷೆಗೆ ಒಳಪಟ್ಟಿದ್ದು, ಶೆ 100% ಸಮೀಕ್ಷೆ ನಡೆಸಲು ಸಾಧ್ಯವಿಲ್ಲ ಎಂದರು. ಮುಂದಿನ ಸಚಿವ ಸಂಪುಟದಲ್ಲಿ ಅಭಿಪ್ರಾಯ ಪಡೆದು ಚರ್ಚೆ ಮಾಡಿ, ನಮ್ಮ ತೀರ್ಮಾನವನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುವುದು. ಬಜೆಟ್ ರೂಪಿಸುವಾಗ ಇದನ್ನು ಆಧಾರವಾಗಿಟ್ಟುಕೊಂಡು ಮಾಡಲಾಗು ವುದು ಎಂದರು. ಕೇಂದ್ರದ ಜಾತಿ ಗಣಿತದಿಂದ ನಮ್ಮ ವರದಿಯ ಪಾವಿತ್ರ್ಯತೆ ಕಡಿಮೆಯಾಗುವುದಿಲ್ಲ. 6 ಕೋಟಿ ಜನರಿದ್ದರು , ಶೇ. 95 ರಷ್ಟು ಸಮೀಕ್ಷೆಯಾಗಿದೆ. ಯಾವುದೇ ಸಮೀಕ್ಷೆ. 100 ರಷ್ಟು ನಡೆಯಲು ಸಾಧ್ಯವಿಲ್ಲ ಎಂದರು.

**ಬಿಜೆಪಿ ಸಾಮಾಜಿಕ ನ್ಯಾಯದ ಪರ ಎಂದಿಗೂ ಇಲ್ಲ**


ಕೇವಲ ಘೋಷಣೆ ಮಾಡಿದರೆ ಸಾಲದು, ಅದನ್ನು ಜಾರಿಗೆ ತರಬೇಕು. 73–74 ರ ತಿದ್ದುಪಡಿ ಗಳನ್ನು ಬಿಜೆಪಿ ವಿರೋದಿಸಿತ್ತು. ಇತಿಹಾಸ ನೋಡಿದರೆ ಬಿಜೆಪಿ ಸಾಮಾಜಿಕ ನ್ಯಾಯದ ಪರ ಎಂದಿಗೂ ಇಲ್ಲ. ಕೂಡಲೇ ಯಾವ ದಿನಾಂಕದಿಂದ ಜನಗಣತಿ, ಜಾತಿಗಣತಿ ಮಾಡುತ್ತಾರೆ ಎಂದು ತಿಳಿಸಬೇಕು. ಜಾತಿಗಣತಿ ಮಾಡುವಾಗ ಸಾಮಾಜಿಕ, ಆರ್ಥಿಕ ಸಮೀಕ್ಷೆ ಕೂಡ ಆಗಬೇಕು. ಇಲ್ಲಿಯವರೆಗೂ ಇದನ್ನು ವಿರೋಧಿಸುತ್ತಿದ್ದವರು ಈಗ ಸಮೀಕ್ಷೆ ನಡೆಸುವ ಘೋಷಣೆ ಮಾಡಿದ್ದಾರೆ ಎಂದರು. ಕೇವಲ ಘೋಷಣೆ ಮಾಡಿದರೆ ಸಾಲದು, ಅದನ್ನು ಜಾರಿಗೆ ತರಬೇಕು.

**ಗಣತಿ ಮಾಡುವುದರಿಂದ ಕಾಂತರಾಜು ವರದಿ ಮೇಲಿನ ಪರಿಣಾಮದ ಬಗ್ಗೆ ಮುಂದಿನ ಸಂಪುಟದಲ್ಲಿ ಸರ್ಕಾರವು ಚರ್ಚೆ ಮಾಡುತ್ತದೆ. ಎಲ್ಲಾ ಸಚಿವರಿಂದಲೂ ಲಿಖಿತ ಅಭಿಪ್ರಾಯ ಕೇಳಿದ್ದೇವೆ. ಅದನ್ನು ಪಡೆದ ನಂತರ ಸೂಕ್ತ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಹೇಳಿದರು.**

**ಕುಮಾರಸ್ವಾಮಿ ಸಚಿವರನ್ನು ಹೆದರಿಸಿ ವರದಿ ಪಡೆಯಲಿಲ್ಲ**

ಕೇಂದ್ರ ಸಚಿವ ಎಚ್.ಡಿ. ಕುಮಾರ ಸ್ವಾಮಿಯವರು ಜಾತಿ ಗಣತಿ ಹಾಗೂ ಜನಗಣತಿ ನಡೆಸುವ ಕೇಂದ್ರ ಸರ್ಕಾರದ ನಿರ್ಧಾರ ವನ್ನು ಹಾಡಿ ಹೊಗಳಿದ್ದು, ರಾಜ್ಯ ಸರ್ಕಾರದ ಸಮೀಕ್ಷೆಗೆ ಯಾವುದೇ ಪಾವಿತ್ರ್ಯತೆ ಇಲ್ಲ ಏನು ಹೇಳಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಸಮ್ಮಿಶ್ರ ಸರ್ಕಾರದಲ್ಲಿ ಪುಟ್ಟರಂಗಶೆಟ್ಟಿ ಹಿಂದುಳಿದ ವರ್ಗಗಳ ಸಚಿವರಾಗಿದ್ದಾಗ ಜಾತಿಗಣತಿ ವರದಿ ಪಡೆಯಲು ದಿನಾಂಕ ನಿಗದಿ ಮಾಡಿದಾಗ ಅವರನ್ನು ಅಮಾನತು ಮಾಡುವುದಾಗಿ ಹೆದರಿಸಿ ವರದಿಯನ್ನು ಪಡೆಯಲಿಲ್ಲ ಎಂದರು.

## ನಿತ್ಯ ಪಂಚಾಂಗ 2.05.2025 ಶುಕ್ರವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ವೈಶಾಖ ಶುದ್ಧ

ಪಂಚಮಿ, ಆರ್ದ್ರಾ ನಕ್ಷತ್ರ, ಶಂಕರ/ರಾಮಾನುಜಾಚಾರ್ಯ ಜಯಂತಿ, ಲಾವಣ್ಯಗೌರೀ ವ್ರತ, ಗಾಯತ್ರಿ ಜಯಂತಿ, ಕುಂತಿಕಾನ ಜಾತ್ರೆ.

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಕಾಂಗ್ರೆಸ್ ಜನತಾ ಸಮಾವೇಶ: ಕೇಂದ್ರ ಸರ್ಕಾರದ ವಿರುದ್ಧ ಮುಖ್ಯಮಂತ್ರಿ ವಾಗ್ದಾಳಿ



**ಹುಬ್ಬಳ್ಳಿ, ಮೇ 1:** ನಿರಂತರ ಬೆಲೆ ಏರಿಕೆ ಮೂಲಕ ಬಡವರ, ಮಧ್ಯಮ ವರ್ಗದ ದ್ವೇಷಿ ಆಗಿರುವ ಮೋದಿ ಸರ್ಕಾರ, ಜಾತಿಗಳ ನಡುವೆ–ಧರ್ಮಗಳ ನಡುವೆ ದ್ವೇಷದ ಬೆಂಕಿ ಹಚ್ಚಿ ತನ್ನ ವೈಫಲ್ಯ ಮುಚ್ಚಿಕೊಳ್ಳುತ್ತಿದೆ ಎಂದು ಸಿ.ಎಂ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು. ಕೇಂದ್ರ ಸರ್ಕಾರದ ದೇಶ ವಿರೋಧಿ ವರ್ತನೆ, ಜನ ವಿರೋಧಿ ಆಡಳಿತ ಮತ್ತು ಬೆಲೆ ಏರಿಕೆಯ ಜನದ್ರೋಹವನ್ನು ಖಂಡಿಸಿ ನಡೆದ ಜನತಾ ಸಮಾವೇಶದಲ್ಲಿ ಮಾತನಾಡಿದರು.

ನರೇಂದ್ರ ಮೋದಿ ಪ್ರಧಾನಿ ಆದ ಬಳಿಕ ಅಕ್ಕಿಯಿಂದ ಚಿನ್ನದವರೆಗೂ ಎಲ್ಲದರ ಬೆಲೆ ಆಕಾಶಕ್ಕೆ ಏರಿದೆ. ದೇಶದ, ರಾಜ್ಯದ ಜನರಿಗೆ ಬಿಜೆಪಿ ಪರಿವಾರದ ಈ ಜನದ್ರೋಹ ಅರ್ಥವಾಗಿದೆ. ಇದನ್ನು ಮರೆ ಮಾಚಲು ತಮ್ಮ ಜನದ್ರೋಹವನ್ನು ಮುಚ್ಚಿಕೊಳ್ಳಲು ದೇಶದ ಜನರ ಗಮನವನ್ನು ಬೇರೆಡೆಗೆ ಸೆಳೆಯುವ ಷಡ್ಯಂತ್ರ ನಡೆಸುತ್ತಿದ್ದಾರೆ ಎಂದರು. ಉಪ್ಪು, ಸಕ್ಕರೆ, ಟೀ, ಕಾಫಿ, ಅಕ್ಕಿ, ಬೇಳೆ, ಎಣ್ಣೆ, ಕಾಳು, ಚಿನ್ನ, ಬೆಳ್ಳಿ, ರಸಗೊಬ್ಬರ, ಔಷಧ, ಡೀಸೆಲ್, ಪೆಟ್ರೋಲ್, ಅಡುಗೆ ಅನಿಲ ಸೇರಿ ಎಲ್ಲದರ ಬೆಲೆ ಆಕಾಶಕ್ಕೆ ಏರಿಸಿರುವ ಮೋದಿಯವರೇ ನೀವು ಯಾವುದನ್ನು ತಾನೆ ಬಿಟ್ಟಿದ್ದೀರಿ ಎಂದರು.ಡಾಲರ್ ಬೆಲೆ 2014 ರಲ್ಲಿ 59 ರೂಪಾಯಿ ಇತ್ತು. ಇವತ್ತು 86 ರೂಪಾಯಿ ಆಗಿದೆ. ಇದಕ್ಕೆ ಯಾರು ಕಾರಣರು ಮೋದಿಯವರೇ? ಇದೇನಾ ನಿಮ್ಮ ಅಚ್ಛೆ ದಿನ್ ಎಂದು ವ್ಯಂಗ್ಯವಾಡಿದರು. 50 ಕೆಜಿ ಸಿಮೆಂಟ್ ಬೆಲೆ 2014 ರಲ್ಲಿ 200 ಇದ್ದದ್ದು ಈಗ 450 ರೂ ಆಗಿದೆ. ಮನಮೋಹನ್ ಸಿಂಗ್ ಅವರ ಅವಧಿಯಲ್ಲಿ ಗ್ಯಾಸ್ ಸಿಲಿಂಡರ್ ಬೆಲೆ 425 ಇದ್ದದ್ದು ಇಂದು 850 ದಾಟಿದೆ. ಶೇ.100 ರಷ್ಟು ಬೆಲೆ ಏರಿಕೆ ಮಾಡಿದ್ದೀರಿ. ಜನದ್ರೋಹದ ಪರಮಾವಧಿ ಮುಂದುವರೆಸಿ ಸಿಲಿಂಡರ್ ಸಬ್ಸಿಡಿ ತೆಗೆದು ಹಾಕಿ ಬಡವರ ಮತ್ತು ಮಧ್ಯಮ ವರ್ಗದವರ ವಿರೋಧಿ ಆಗಿರುವ ಮೋದಿಯವರೇ ನಿಮ್ಮ ವಂಚನೆಗೆ ಕೊನೆಯೇ ಇಲ್ಲವೇ ಎಂದು ಪ್ರಶ್ನಿಸಿದರು. ಪ್ರಹ್ಲಾದ್ ಜೋಶಿಯವರೇ ನೀವು ಮತ್ತು ಮೋದಿಯವರು ನಿರಂತರವಾಗಿ ಬೆಲೆ ಏರಿಕೆ ಮಾಡುತ್ತಲೇ ಇದ್ದೀರಿ. ಆದರೆ, ನಿಮ್ಮ ಚಾಳಿಯನ್ನು ನಮ್ಮ ಮೇಲೆ ಹೊರಿಸಲು ಯತ್ನಿಸುತ್ತಿದ್ದೀರಿ. ನಿಮಗೆ ನಾಚಿಕೆ ಆಗುವುದಿಲ್ಲವೇ ಎಂದು ಪ್ರಶ್ನಿಸಿದರು.

ರಾಜ್ಯ ಸರ್ಕಾರ ಹಾಲಿನ ದರ 4ರೂ ಹೆಚ್ಚಿಸಿ ಇಷ್ಟೂ ಹಣವನ್ನೂ ರೈತರಿಗೆ ವರ್ಗಾಯಿಸಿದ್ದೀವಿ. ಇದರಲ್ಲಿ ಹತ್ತು ಪೈಸೆ ಕೂಡ ಸರ್ಕಾರಕ್ಕೆ ಬರುವುದಿಲ್ಲ. ಆದರೆ, ನೀವು ಹೆಚ್ಚಿಸಿದ ಬೆಲೆ ಏರಿಕೆ ಯಾವ ಭಾರತೀಯರಿಗೆ ಸಿಗುತ್ತಿದೆ ಹೇಳಿ ಎಂದರು. ಸಂವಿಧಾನ ಜಾರಿಯಾಗಿ 75 ವರ್ಷ ಕಳೆದರೂ ಅಸಮಾನತೆ, ತಾರತಮ್ಯ ಹೋಗಿಲ್ಲ ಎಂದರು. ಆದ್ದರಿಂದ ನಾವು ನಮ್ಮ ಪ್ರಣಾಳಿಕೆಯಲ್ಲಿ ಆರ್ಥಿಕ, ಸಾಮಾಜಿಕ, ಜಾತಿ ಗಣತೆ ಬಗ್ಗೆ ಭರವಸೆ ಕೊಟ್ಟಿದ್ದೆವು.

ನಾವು ಮಾಡಿದ ಘೋಷಣೆಯಂತೆ ನಮ್ಮ ನಾಯಕರಾದ ಮಲ್ಲಿಕಾರ್ಜುನ ಖರ್ಗೆಯವರು ಮತ್ತು ರಾಹುಲ್ ಗಾಂಧಿಯವರು ಪಾರ್ಲಿಮೆಂಟಿನಲ್ಲಿ ನಿರಂತರ ಧ್ವನಿ ಎತ್ತಿ ಹೋರಾಟ ನಡೆಸಿದ್ದರು. ಇದರ ಪರಿಣಾಮ ಈಗ ಕೇಂದ್ರ ಸರ್ಕಾರ ನಮ್ಮ ಹೋರಾಟಕ್ಕೆ ಮಣಿದಿದೆ. ಇದು ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆಯವರ ಸೈದ್ಧಾಂತಿಕ ಬದ್ಧತೆಗೆ ಸಿಕ್ಕ ಗೆಲುವು ಎಂದರು.

# ಡಾ.ಲತಾ ಟಿ.ಎಸ್ ಭಾರತೀಯ ಸಾರ್ವಜನಿಕ ಸಂಪರ್ಕ ಮಂಡಳಿಗೆ ಹಿರಿಯ ಕಾರ್ಯನಿರ್ವಾಹಕ ಉಪಾಧ್ಯಕ್ಷೆ



**ಬೆಂಗಳೂರು, ಮೇ 1:** ಕೆಎಸ್‌ಆರ್‌ಟಿಸಿ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಲತಾ ಟಿ.ಎಸ್ ಅವರನ್ನು ಭಾರತೀಯ ಸಾರ್ವಜನಿಕ ಸಂಪರ್ಕ ಮಂಡಳಿಗೆ ಹಿರಿಯ ಕಾರ್ಯನಿರ್ವಾಹಕ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿದೆ ಎಂದು ಭಾರತೀಯ ಸಾರ್ವಜನಿಕ ಸಂಪರ್ಕ ಮಂಡಳಿಯ ಗೌರವಾಧ್ಯಕ್ಷ ಹಾಗೂ ಮುಖ್ಯಸ್ಥ ಎಂ.ಬಿ.ಜಯರಾಂ, ಭಾರತೀಯ ಸಾರ್ವಜನಿಕ ಸಂಪರ್ಕ ಮಂಡಳಿಯ ರಾಷ್ಟ್ರೀಯ ಕಾರ್ಯಕಾರಿಣಿ ಅಧ್ಯಕ್ಷೆ ಗೀತಾ ಶಂಕರ್ ತಿಳಿಸಿದ್ದಾರೆ.

ಭಾರತೀಯ ಸಾರ್ವಜನಿಕ ಸಂಪರ್ಕ ಮಂಡಳಿಯು ದೇಶದ್ಯಾಂತ ಹಾಗೂ ಸಿಂಗಾಪುರ, ಲಂಡನ್, ಶ್ರೀಲಂಕಾ, ದುಬೈ, ನೇಪಾಳ, ಆಸ್ಟ್ರೇಲಿಯಾ, ಅಮೆರಿಕಗಳಲ್ಲಿ 85 ಶಾಖೆಗಳನ್ನು ಹೊಂದಿದೆ. ಇದಲ್ಲದೆ YCC Young Communicators Club of PRCI ದೇಶದ್ಯಾಂತ 70ಕ್ಕೂ ಹೆಚ್ಚು ಕಾಲೇಜುಗಳಲ್ಲಿ ತನ್ನ ವ್ಯಾಪ್ತಿಯನ್ನು ವಿಸ್ತರಿಸಿದೆ.

# ಸುಸಂಸ್ಕೃತರಲ್ಲದವರೇ ಗಾಯಬ್ ಪೋಸ್ಟ್ ಹಾಕಿ ನರ್ತಿಸುವುದು: ಕಾಂಗ್ರೆಸ್ ವಿರುದ್ಧ ಸಚಿವ ಸೋಮಣ್ಣ ಕಿಡಿ



**ತುಮಕೂರು, ಮೇ 1:** ರಾಜ್ಯ ಸರ್ಕಾರ ಗಾಳಿಯಲ್ಲಿ ಗುಂಡು ಹೊಡೆಯೋದನ್ನು ಬಿಟ್ಟು, ರಾಜ್ಯದ ಅಭಿವೃದ್ಧಿಗೆ ಶ್ರಮಿಸೋದು ಉತ್ತಮ ಎಂದು ಕೇಂದ್ರ ಸಚಿವ ವಿ ಸೋಮಣ್ಣ ಹೇಳಿಕೆ ನೀಡಿದ್ದಾರೆ. ತುಮಕೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಒನ್ ನೇಷನ್, ಒನ್ ಎಲೆಕ್ಷನ್ ಮಹಿಳಾ ಮೀಸಲಾತಿ ಬಿಲ್, ಜಾತಿಗಣತಿ ಇವೆಲ್ಲಾ ಕೇಂದ್ರ ಸರ್ಕಾರದ, ಮೋದಿ ಅವರ ದೂರದೃಷ್ಟಿಯ ಚಿಂತನೆ. ಪ್ರಧಾನಿ ಮೋದಿ ಅವರ ಯಾವುದೇ ಕಾರ್ಯಕ್ರಮಗಳು ದೂರದೃಷ್ಟಿಯಿಂದ ತುಂಬಿದೆ. ಮತ್ತೆ ದೇಶದ ಅಭಿವೃದ್ಧಿಗೆ ಪೂರಕವಾಗಿದೆ. ಜಾತಿ ಗಣತಿ ಮಾಡೋದ್ರಿಂದ ಎಲ್ಲರಿಗೂ ಒಂದು ಸಂದೇಶ ತಲುಪುತ್ತದೆ. ಈ ದೇಶ ಜಾತ್ಯತೀತ ರಾಷ್ಟ್ರ, ಸುಮಾರು ವರ್ಷಗಳಿಂದ ಜಾತಿಗಣತಿ ಮಾಡಬೇಕು ಅಂತಿತ್ತು ಹಾಗಾಗಿ ಮಾಡ್ತಿದ್ದೇವೆ ಎಂದು ಹೇಳಿದರು.ಕಾಂಗ್ರೆಸ್‌ನವರು ಇಷ್ಟು ವರ್ಷ ಇದ್ದರಲ್ಲ, ಅವರು ಯಾಕೆ ಜಾತಿಗಣತಿ ಮಾಡಲಿಲ್ಲ? ದೇಶದ ಜ್ವಲಂತ ಸಮಸ್ಯೆಗಳಿಗೆ ಮೋದಿ ಅವರು ಪರಿಹಾರ ಕಂಡುಕೊಂಡಿದ್ದಾರೆ. 25 ಕೋಟಿ ಕುಟುಂಬವನ್ನು ಮೇಲಕ್ಕೆ ತಂದಿದ್ದಾರೆ. ರಾಜ್ಯ ಸರ್ಕಾರದ ಜಾತಿಗಣತಿಗೆ ಬೆಲೆ ಇಲ್ಲ. ಅದು ಹೊರಟು ಹೋಗಿದೆ. ಜಾತಿಗಣತಿ ಮಾಡೋ ಪವರ್ ಇರೋದು ಕೇಂದ್ರ ಸರ್ಕಾರಕ್ಕೆ ಮಾತ್ರ. ರಾಜ್ಯ ಸರ್ಕಾರದ ವರದಿ ಅದು ತನ್ನಿಂದ ತಾನಾಗಿಯೇ ನಿಷ್ಕ್ರಿಯವಾಗುತ್ತದೆ ಎಂದರು. ಕಾಂಗ್ರೆಸ್‌ನಿಂದ ಮೋದಿ ವಿರುದ್ಧದ ಗಾಯಬ್ ಪೋಸ್ಟ್ ವಿಚಾರವಾಗಿ ಕಿಡಿಕಾರಿದ ಸೋಮಣ್ಣ, ಕಾಂಗ್ರೆಸ್‌ನವರು ಸಂಸ್ಕೃತಿ ಇಲ್ಲದವರು. ಹೀಗಾಗಿ ಅಂತಹ ಪೋಸ್ಟ್ ಮಾಡಿದ್ದಾರೆ. ದೇಶದ ಅರಿವಿಲ್ಲದವರಿಗೆ, ಇಂತಹ ಹುಚ್ಚರನ್ನು ಕಟ್ಟಿಕೊಂಡು ನಾವೇನು ಮಾಡೋಕೆ ಆಗಲ್ಲ. ಹುಚ್ಚು ಆಸ್ಪತ್ರೆಯಲ್ಲಿದ್ದಾವರಾದರೂ ಮೇಲು. ಅದಕ್ಕಿಂತ ಕೀಳಾಗಿ ಕಾಂಗ್ರೆಸ್‌ನವರು ನಡೆದುಕೊಂಡಿದ್ದಾರೆ. ಅಂತಹ ಮೇರು ನಾಯಕನನ್ನು ಕಾಂಗ್ರೆಸ್‌ನವರು ಈ ರೀತಿ ಅಪಮಾನ ಮಾಡೋದು ಸರಿಯಲ್ಲ. ಕಾಂಗ್ರೆಸ್‌ನಲ್ಲಿ ಕೀಳರಿಮೆ ಹೋಗುವ ತನಕ ಅವರು ಉದ್ಧಾರ ಆಗಲ್ಲ ಎಂದು ವಾಗ್ದಾಳಿ ನಡೆಸಿದರು.

# ಬೆಂಬಲ ಬೆಲೆಗೆ ತೊಗರಿ ಖರೀದಿ ಅವಧಿ ಮೇ ಅಂತ್ಯದವರೆಗೆ ವಿಸ್ತರಣೆ



**ಬೆಂಗಳೂರು. ಮೇ 1:**ಬೆಂಬಲ ಬೆಲೆ ತೊಗರಿ ಖರೀದಿ ಅವಧಿಯನ್ನು ವಿಸ್ತರಣೆ ಮಾಡಲಾಗಿದ್ದು, ಮೇ ತಿಂಗಳ ಅಂತ್ಯದವರೆಗೆ ಖರೀದಿ ಮಾಡಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಖರೀದಿ ಅವಧಿ ಮೇ1ಕ್ಕೆ (ಇಂದು) ಅಂತ್ಯವಾಗಲಿದ್ದು, ನಿಗದಿತ ಖರೀದಿ ಪ್ರಮಾಣ ಇನ್ನೂ ಆಗದ ಕಾರಣ ಖರೀದಿ ಅವಧಿ ವಿಸ್ತರಣೆ ಮಾಡಲು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದ್ದು, ಒಂದು ತಿಂಗಳು ವಿಸ್ತರಣೆ ಮಾಡಲಾಗಿದೆ.

ಕೇಂದ್ರ ಸರ್ಕಾರ ಕನಿಷ್ಠ ಬೆಂಬಲ ಬೆಲೆಯಲ್ಲಿ 3.06 ಲಕ್ಷ ಮೆಟ್ರಿಕ್ ಟನ್ ತೊಗರಿ ಖರೀದಿಗೆ ಅನುಮತಿ ನೀಡಿದ್ದು, ಇದುವರೆಗೆ ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ 1.83 ಲಕ್ಷ ಮೆಟ್ರಿಕ್ ಟನ್ ಖರೀದಿ ಮಾಡಲಾಗಿದೆ. ಇನ್ನೂ 2.70 ಲಕ್ಷ ಮೆಟ್ರಿಕ್ ಟನ್ ಪ್ರಮಾಣದಷ್ಟು ತೊಗರಿಯನ್ನು ರೈತರು ನೋಂದಣಿ ಮಾಡಿಸಿಕೊಂಡಿದ್ದು, ಇನ್ನೂ ಸುಮಾರು 93 ಸಾವಿರ ಮೆಟ್ರಿಕ್ ಟನ್ ಖರೀದಿ ಮಾಡಬೇಕಾಗಿದೆ" ಎಂದು ಸಚಿವರು ಮಾಹಿತಿ ನೀಡಿದ್ದಾರೆ."ಕೇಂದ್ರ ಸರ್ಕಾರ ಪ್ರತಿ ಟನ್ಗೆ 7,550 ರೂ. ನಿಗದಿಪಡಿಸಿದ್ದು, ಈ ಬೆಲೆ ಕಡಿಮೆಯಾಗಿದೆ. ಹೆಚ್ಚಳ ಮಾಡಬೇಕು ಎಂದು ರೈತರು ಬೇಡಿಕೆ ಇಟ್ಟಿದ್ದರು. ರೈತರ ಬೇಡಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನಕ್ಕೆ ತಂದು ಪ್ರೋತ್ಸಾಹ ಧನ ಘೋಷಣೆ ಮಾಡಲು ಮನವಿ ಮಾಡಿದಾಗ ಬೇಡಿಕೆಗೆ ಸ್ಪಂದಿಸಿ ಪ್ರತಿ ಕ್ವಿಂಟಾಲ್ಗೆ ರೂ. 450 ಪ್ರೋತ್ಸಾಹ ಧನ ಘೋಷಣೆ ಮಾಡಿದ್ದು, ಒಟ್ಟು ಪ್ರತಿ ಕ್ವಿಂಟಾಲ್ಗೆ 8000 ರೂ.ಗಳಂತೆ ಖರೀದಿ ಮಾಡಲಾಗುತ್ತಿದೆ. ರೈತರು ಈ ಅವಕಾಶ ಬಳಕೆ ಮಾಡಿಕೊಂಡು ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ ತೊಗರಿ ಮಾರಾಟ ಮಾಡಬಹುದು ಎಂದು ಸಚಿವ ಶಿವಾನಂದ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜೀವ್ ಗಾಂಧಿ ವಿ.ವಿ ಚುನಾವಣೆ ಅಕ್ರಮ ಸಾಧ್ಯತೆ: ತನಿಖೆಗೆ ರಾಜ್ಯಪಾಲರ ಸೂಚನೆ

**ಬೆಂಗಳೂರು, ಮೇ 1:** ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಯಯ ಸೆನೆಟ್ ಸದಸ್ಯರ ಆಯ್ಕೆ ಸಂಬಂಧ ನಡೆದ ಚುನಾವಣೆಯಲ್ಲಿ ಮೇಲ್ನೋಟಕ್ಕೆ ಅಕ್ರಮ ನಡೆದಿರುವ ಸಾಧ್ಯತೆಯ ತನಿಖೆ ನಡೆಸಲು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಸೂಚಿಸಿದ್ದಾರೆ. ಮತದಾರರ ಪಟ್ಟಿಯಲ್ಲಿ ಲೋಪ ಉಂಟಾಗಿದ್ದು ಇದರ ಬಗ್ಗೆ ದೂರುಗಳು ಬಂದ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳು ಆದ ರಾಜ್ಯಪಾಲರು ತನಿಖೆ ನಡೆಸಿ ಬರುವವರೆಗೂ ಚುನಾಯಿತ ಸದಸ್ಯರು ಯಾವುದೇ ಅಧಿಕಾರವನ್ನು ಚಲಾಯಿಸಿದ್ದಾರೆ, ವಿವಿ ಆಡಳಿತದಲ್ಲಿ ಮುಂದಿನ ಆದೇಶದವರೆಗೂ ಹಸ್ತಕ್ಷೇಪ ಮಾಡಿದೆ, ಸೆನೆಟ್‌ಗೆ ಆಯ್ಕೆಯಾದ ಡಾ. ಶ್ರೀನಿವಾಸ್, ಡಾ. ಕೋನರಡ್ಡಿ, ಡಾ. ನವೀನ್, ವೈಶಾಲಿ ಶ್ರೀಜಿತ್, ಡಾ. ಶಶಿಕುಮಾರ್ ಅವರಿಗೆ ಸದ್ಯದ ಯಾವುದೇ ಕರ್ತವ್ಯಗಳು, ಜವಾಬ್ದಾರಿಗಳನ್ನು ನಿರ್ವಹಿಸುವುದರಿಂದ ನಿರ್ಬಂಧಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. 10ನೇ ಸೆನೆಟ್‌ಗೆ 2024–27ರವರೆಗೆ ಸದಸ್ಯರ ಆಯ್ಕೆಗೆ ಕಳೆದ 2024 ಡಿ. 10 ರಂದು ಚುನಾವಣೆ ನಡೆದಿತ್ತು.



ಸಂಸದ ಬಿ.ವೈ.ರಾಘವೇಂದ್ರ ಅವರ ಪುತ್ರನ ಮದುವೆ ನಿಶ್ಚಯವಾದ ಹಿನ್ನೆಲೆಯಲ್ಲಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಕುಟುಂಬ ಸಮೇತರಾಗಿ ಗುರುವಾರ ಮಂತ್ರಾಲಯಕ್ಕೆ ಭೇಟಿ ನೀಡಿ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದರು.ಬಿ.ಎಸ್.ಯಡಿಯೂರಪ್ಪ ಅವರೊಂದಿಗೆ ಬಿ.ವೈ.ರಾಘವೇಂದ್ರ ಅವರ ಪತ್ನಿ ಮತ್ತು ಶೀಘ್ರದಲ್ಲೇ ದಾಂಪತ್ಯ ಜೀವನಕ್ಕೆ ಕಾಲಿಡಲಿರುವ ನವ ವಧುವರರು ಸೇರಿದಂತೆ ಕುಟುಂಬ ಸದಸ್ಯರು ಶ್ರೀಗುರುರಾಯರ ವಿಶೇಷ ಪೂಜೆ ಸಲ್ಲಿಸಿದರು. ನಂತರ ಶ್ರೀಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರು ಬಿಎಸ್‌ವೈ ಕುಟುಂಬವನ್ನು ಶ್ರೀಗಳು ಆಶೀರ್ವದಿಸಿದರು.

# ಪೌರ ಕಾರ್ಮಿಕರ ಮಕ್ಕಳು ಕೂಡ ಐಎಎಸ್, ಐಪಿಎಸ್, ಮಂತ್ರಿಗಳಾಗಬೇಕೆಂಬುದೇ ನಮ್ಮ ಗುರಿ




**ಬೆಂಗಳೂರು, ಮೇ 1:** ಇಡೀ ವಿಶ್ವಕ್ಕೆ ಸೇವೆ ಸಲ್ಲಿಸುವ ಕಾರ್ಮಿಕ ದಿನಾಚರಣೆ ಇಂದು. ಕಾರ್ಮಿಕ, ಕೃಷಿಕ, ಶಿಕ್ಷಕ, ಸೈನಿಕ ಪ್ರಜಾಪ್ರಭುತ್ವದ ಆಧಾರ ಸ್ತಂಭಗಳು. ಪೌರ ಕಾರ್ಮಿಕರು ಸ್ವಚ್ಛತಾ ರಾಯಭಾರಿಗಳು. ಸ್ವಚ್ಛತೆ ಕಾಪಾಡಿ ಬೆಂಗಳೂರಿಗೆ ವಿಶ್ವ ಮಾನ್ಯತೆ ಕೊಡುತ್ತಿರುವವರು ನೀವು.ನಾವು ವಿರೋಧ ಪಕ್ಷದಲ್ಲಿ ಇದ್ದಾಗ ಮಾತು ಕೊಟ್ಟಿದ್ದೇವು. ಈಗ ಅದಕ್ಕೆ ಹೊಸ ರೂಪ ಕೊಡುತ್ತಿದ್ದೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ನಗರದ ಅರಮನೆ ಮೈದಾನದಲ್ಲಿ ನಡೆದ ಕಾರ್ಮಿಕ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಮಾತಿಗೆ ಬದ್ಧರಾಗಿ ನಾವು ನಡೆದುಕೊಂಡಿದ್ದೇವೆ. ಈಗ ಅದಕ್ಕೆ ಹೊಸ ರೂಪ ಕೊಡುತ್ತಿದ್ದೇವೆ. ಮಲ್ಲಿಕಾರ್ಜುನ್ ಖರ್ಗೆ ಅವರು ಸಾಕಷ್ಟು ಕೆಲಸಗಳನ್ನು ಮಾಡಿದ್ದಾರೆ. ಅವರ ಕಾರ್ಯಗಳು ಇತಿಹಾಸ ಪುಟ ಸೇರುತ್ತವೆ ಎಂದಿದ್ದಾರೆ.

ಪೌರ ಕಾರ್ಮಿಕರ ಮಕ್ಕಳು ಕೂಡ ಐಎಎಸ್, ಐಪಿಎಸ್, ಮಂತ್ರಿಗಳಾಗಬೇಕು ಎಂಬುವುದು ನಮ್ಮ ಸರ್ಕಾರದ ಉದ್ದೇಶ. ಕುವೆಂಪು ಅವರು ಪೌರಕಾರ್ಮಿಕರನ್ನು ಶಿವನಿಗೆ ಹೋಲಿಸಿದ್ದಾರೆ. ಬೀದಿ ಗುಡಿಸುವ ಕಾರ್ಮಿಕರಲ್ಲಿ ನಾನಿದ್ದೀನೆ. ಉಳುಮೆ ಮಾಡುವ ಒಕ್ಕಲಿಗರಲ್ಲಿ ನಾವಿದ್ದೇವೆ ಅಂದಿದ್ದರು. ಇಂದು ನೀವು ಸರ್ಕಾರದ ಕಾರ್ಮಿಕರಾಗಿ ನೇಮಕ ಆಗಿದ್ದೀರಿ. ಇವತ್ತು ಸೋನಿಯಾಗಾಂಧಿಯವರಿದ್ದ ಜಾಗದಲ್ಲಿ ನಮ್ಮ ಮಲ್ಲಿಕಾರ್ಜುನ ಖರ್ಗೆ ಇದ್ದಾರೆ. ಕಾರ್ಮಿಕ ಸಚಿವರಾಗಿ ಅವರು ಮಾಡಿದ ಕೆಲಸ ಬಹು ದೊಡ್ಡದು.

ಕಾರ್ಮಿಕರಿಗಾಗಿ ಹಲವು ಕೆಲಸ ಮಾಡಿ ಇತಿಹಾಸದ ಪುಟ ಸೇರಿದ್ದಾರೆ. ಹೀಗಾಗಿಯೇ ಇವತ್ತು ಅವರ ಕೈಯಿಂದಲೇ ಜ್ಯೋತಿ ಬೆಳಗಿಸುವ ಕಾರ್ಯ ಮಾಡುತ್ತಿದ್ದೇವೆ ಎಂದಿದ್ದಾರೆ. ಪೌರ ಕಾರ್ಮಿಕರಿಗಾಗಿ 600 ಕೋಟಿ ರೂ. ಹಣವನ್ನು ಮೀಸಲಿಟ್ಟಿದ್ದೇವೆ. ಒಂದು ರೂಪಾಯಿ ಲಂಚ ಇಲ್ಲದೇ ನಿಮ್ಮನ್ನು ನೇಮಕ ಮಾಡಿದ್ದೀವೆ. ನ್ಯಾಯ ಒದಗಿಸುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ. ನಮ್ಮ ಹಿರಿಯರಾದ ಬಸವಲಿಂಗಪ್ಪ, ಸಾಲಪ್ಪರನ್ನ ನೆನೆಯಬೇಕು ಎಂದಿದ್ದಾರೆ. ಐಪಿಡಿ ಸಾಲಪ್ಪ ವರದಿ ಜಾರಿಗೆ ಹಂತ ಹಂತವಾಗಿ ಪ್ರಯತ್ನ ಮಾಡುತ್ತಿದ್ದೇವೆ. ನಿಮ್ಮ ಮಕ್ಕಳ ಭವಿಷ್ಯಕ್ಕೆ ಹಲವು ಕಾರ್ಯಕ್ರಮ ರೂಪಿಸಿದ್ದೇವೆ. ಅದಕ್ಕಾಗಿ 700 ಕೋಟಿ ರೂ. ಮೀಸಲಿಟ್ಟಿದ್ದೇವೆ. ನಿವೃತಿಯಾದ ತಕ್ಷಣ 10 ಲಕ್ಷ ರೂ. ಡೆಪಾಸಿಟ್, 6 ಸಾವಿರ ರೂ. ಪಿಂಚಣಿ ನೀಡುವ ಕಾರ್ಯಕ್ರಮ ರೂಪಿಸಿದ್ದೇವೆ ಎಂದಿದ್ದಾರೆ.

AICC ಪ್ರಧಾನ ಕಾರ್ಯದರ್ಶಿ ರಂದೀಪ್ ಸುರ್ಜೆವಾಲ, ಸಚಿವರಾದ ರಾಮಲಿಂಗ ರೆಡ್ಡಿ, ಎಚ್.ಸಿ. ಮಹದೇವಪ್ಪ, ಭೈರತಿ ಸುರೇಶ್, ರಹೀಂ ಖಾನ್, ಶಾಸಕರಾದ ಎಸ್.ಟಿ. ಸೋಮಶೇಖರ್, ರಿಜ್ವಾನ್ ಅರ್ಷದ್ ಸೇರಿದಂತೆ ಹಲವರು ಭಾಗಿಯಾಗಿದ್ದರು.

# ಇ.ಎಸ್.ಐ.ಸಿ ವೈದ್ಯಕೀಯ ಕಾಲೇಜಿನಲ್ಲಿ ಮೊಣಕಾಲು ಬದಲಿ ಶಸ್ತ್ರಚಿಕಿತ್ಸಾ ಶಿಬಿರ




**ಬೆಂಗಳೂರು, ಮೇ 1:** ನಗರದ ಇ.ಎಸ್.ಐ.ಸಿ ವೈದ್ಯಕೀಯ ಕಾಲೇಜಿನಲ್ಲಿ ಮೂಳೆ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಪುರುಷೋತ್ತಮ್ ನೇತೃತ್ವದಲ್ಲಿ ಮೊಣಕಾಲು ಬದಲಿ ಚಿಕಿತ್ಸಾ ಶಿಬಿರ ಆಯೋಜಿಸಲಾಗಿತ್ತು. ಡೀನ್ ಡಾ. ಸಂಧ್ಯಾ ಆರ್ ಮತ್ತು ಮೆಡಿಕಲ್ ಸೂಪರಿಂಟೆಂಡ್ ಡಾ. ಪ್ರಸಾದ್ ಉಪಸ್ಥಿತರಿದ್ದರು.

ಮೊಣಕಾಲು ನೇರ ಶಸ್ತ್ರಚಿಕಿತ್ಸೆಯ ಪ್ರದರ್ಶನದೊಂದಿಗೆ ಶಿಬಿರ ಪ್ರಾರಂಭವಾಯಿತು. ಸುಧಾರಿತ ಶಸ್ತ್ರಚಿಕಿತ್ಸಾ ತಂತ್ರಗಳು ಮತ್ತು ನೈಜ–ಸಮಯದ ನಿರ್ಧಾರ ತೆಗೆದುಕೊಳ್ಳುವಿಕೆ ಬಗ್ಗೆ ಅಮೂಲ್ಯ ಒಳನೋಟಗಳನ್ನು ಇದು ಒದಗಿಸಿತು.

ಮೂಳೆಚಿಕಿತ್ಸಾ ತಜ್ಞರು ಆಸಕ್ತಿದಾಯಕ ಮತ್ತು ವಿಶಿಷ್ಟ ಪ್ರಕರಣಗಳನ್ನು ನಿಭಾಯಿಸಿದ ಅನನ್ಯ ಅಭಿಪ್ರಾಯಗಳನ್ನು ಹಂಚಿಕೊಂಡರು. ಆಳವಾದ ಚರ್ಚೆ, ಸಂಕೀರ್ಣ ಪರಿಷ್ಕರಣೆ ಶಸ್ತ್ರಚಿಕಿತ್ಸೆಗಳನ್ನು ನಿರ್ವಹಿಸುವ ಬಗ್ಗೆ ಪ್ರಾಯೋಗಿಕ ಜ್ಞಾನ ಮತ್ತು ವೈದ್ಯಕೀಯ ದೃಷ್ಟಿಕೋನಗಳನ್ನು ಒದಗಿಸಿತು. ಪ್ರಕರಣ–ಆಧಾರಿತ ಕಲಿಕೆ, ಸುಸಂಗತವಾದ ಶೈಕ್ಷಣಿಕ ಅನುಭವವನ್ನು ಒದಗಿಸಿತು.

# ಎಪಿಎಸ್ ಎಜುಕೇಷನಲ್ ಟ್ರಸ್ಟ್‌ನಿಂದ ಮೇ 3 – 4 ರಂದು ರಾಷ್ಟ್ರಮಟ್ಟದ ಶಿಕ್ಷಣ ಪ್ರದರ್ಶನ, ಉದ್ಯೋಗ ಮೇಳ




**ಬೆಂಗಳೂರು, ಮೇ 1:** ಎಪಿಎಸ್ ಎಜುಕೇಷನಲ್ ಟ್ರಸ್ಟ್ ತನ್ನ ಮೊದಲ ರಾಷ್ಟ್ರ ಮಟ್ಟದ ಶಿಕ್ಷಣ ಪ್ರದರ್ಶನ ಮತ್ತು ಉದ್ಯೋಗ ಮೇಳವನ್ನು ಮೇ 3 ಮತ್ತು 4 ರಂದು ಆಯೋಜಿಸಿದೆ.

ನಗರದ ಎಪಿಎಸ್ ಮೈದಾನದಲ್ಲಿ ಈ ಮೇಳ ನಡೆಯಲಿದ್ದು, 100ಕ್ಕೂ ಅಧಿಕ ಹೆಸರಾಂತ ಕಂಪನಿಗಳು ಉದ್ಯೋಗ ಮತ್ತು ಇಂಟರ್ನ್‌ಶಿಪ್ ಅವಕಾಶಗಳನ್ನು ನೀಡಲಿವೆ. ತಜ್ಞರ ಮಾತುಕತೆಗಳು, ಸಂವಾದಗಳು ಮತ್ತು ವೃತ್ತಿ ಸಮಾಲೋಚನೆ ದೇಶಾದ್ಯಂತ ಶಿಕ್ಷಣ ಸಂಸ್ಥೆಗಳು ಮತ್ತು ಉದ್ಯೋಗಾಕಾಂಕ್ಷಿಗಳನ್ನು ಒಂದೇ ವೇದಿಕೆಗೆ ಕರೆ ತರುವ ಗುರಿ ಹೊಂದಲಾಗಿದೆ ಎಂದು ಎಪಿಎಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ವಿಷ್ಣು ಭರತ್ ಅಲಂಪಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಮತ್ತು ವೃತ್ತಿ ಮಾರ್ಗಗಳ ಬಗ್ಗೆ ತಿಳಿದುಕೊಳ್ಳಲು, ಪದವೀಧರರು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗದಾತರನ್ನು ಭೇಟಿ ಮಾಡಿ ಉದ್ಯೋಗ ಪಡೆಯಲು ಇದು ಸದಾವಕಾಶವಾಗಿದೆ. ಉಚಿತವಾಗಿ ನೋಂದಣಿ ಮಾಡಿಕೊಂಡು ಮೇಳದಲ್ಲಿ ಭಾಗವಹಿಸಬಗಹುದು. ನೋಂದಾಯಿತ ಪ್ರೊಫೈಲ್‌ಗಳನ್ನು ಮುಂಚಿತವಾಗಿ ಪರಿಶೀಲಿಸಲು ಸಾಧ್ಯವಾಗಲಿದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬಹುದು ಭವ್ಯ – 88613 40966 | 86605 99140 ಮೇಳದಲ್ಲಿ 25 ಸಾವಿರಕ್ಕೂ ಅಧಿಕ ಮಂದಿ ಭಾಗವಹಿಸುವ ನಿರೀಕ್ಷೆ ಇದೆ ಎಂದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಗೋದಿ ಖರೀದಿ ಶೇ.24ರಷ್ಟು ಹೆಚ್ಚಳ; ಸಚಿವ ಪ್ರಲ್ಹಾದ ಜೋಶಿ

- ದೇಶದಲ್ಲಿ ಈವರೆಗೆ 256 ಲಕ್ಷ ಮೆಟ್ರಿಕ್ ಟನ್ ಗೋದಿ ಸಂಗ್ರಹ
- 21.03 ಲಕ್ಷ ರೈತರಿಗೆ 62,155 ಕೋಟಿ ಬೆಂಬಲ ಬೆಲೆ



**ನವದೆಹಲಿ, ಮೇ 1:** ಕೇಂದ್ರ ಸರ್ಕಾರ ಪ್ರಸ್ತುತ 256 ಲಕ್ಷ ಮೆಟ್ರಿಕ್ ಟನ್‌ಗೂ ಹೆಚ್ಚು ಗೋದಿ ಸಂಗ್ರಹಿಸಿದ್ದು, ಪ್ರಸಕ್ತ ವರ್ಷ, ಗೋದಿ ಖರೀದಿಯಲ್ಲಿ ಶೇ.24.78ರಷ್ಟು ಹೆಚ್ಚಳ ಕಂಡು ಬಂದಿದೆ ಎಂದು ಕೇಂದ್ರ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಗೋದಿ ಬೆಳೆಯುವ ದೇಶದ 5 ಪ್ರಮುಖ ರಾಜ್ಯಗಳಾದ ಪಂಜಾಬ್, ಹರಿಯಾಣ, ಮಧ್ಯಪ್ರದೇಶ, ರಾಜಸ್ಥಾನ ಮತ್ತು ಉತ್ತರ ಪ್ರದೇಶಗಳಿಂದ ಗೋದಿ ಹರಿವು ಹೆಚ್ಚಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ಗೋದಿ ಸಂಗ್ರಹಿಸಲಾಗಿದೆ ಎಂದಿದ್ದಾರೆ.

ವಿವಿಧ ರಾಜ್ಯಗಳಿಂದ ಈ ಬಾರಿ ಏಪ್ರಿಲ್ 30ರವರೆಗೆ ಒಟ್ಟಾರೆ 256.31 LMT ಗೋದಿಯನ್ನು ಸಂಗ್ರಹಿಸಲಾಗಿದೆ. ಕಳೆದ ವರ್ಷ ಈ ಅವಧಿಗೆ 205.41 LMT ಸಂಗ್ರಹಿಸಿತ್ತು. ಪ್ರಸ್ತುತ ಗೋದಿ ಸಂಗ್ರಹ ಕಳೆದ ವರ್ಷಕ್ಕಿಂತ ಶೇ.24.78ರಷ್ಟು ಹೆಚ್ಚಳವನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ.

**312 LMT ಗೋದಿ ಖರೀದಿ ಗುರಿ:**

ಪ್ರಸಕ್ತ ವರ್ಷ ಸುಮಾರು 312 LMT ಗೋದಿ ಖರೀದಿ ಗುರಿ ಹೊಂದಿದ್ದು, ಈವರೆಗೆ 256.31 LMT ಗೋದಿ ಖರೀದಿಸಲಾಗಿದೆ.

ದೇಶದಲ್ಲಿ ಹೆಚ್ಚಿನ ಗೋದಿ ಹರಿವಿರುವ ರಾಜ್ಯಗಳಲ್ಲಿ ಬೆಂಬಲ ಬೆಲೆಯಲ್ಲಿ ಗೋದಿ ಖರೀದಿ ಸುಗಮವಾಗಿ ನಡೆಯುತ್ತಿದೆ ಎಂದು ಹೇಳಿದ್ದಾರೆ. ಪಂಜಾಬ್, ಹರಿಯಾಣ, ಮಧ್ಯಪ್ರದೇಶ, ರಾಜಸ್ಥಾನ ಮತ್ತು ಉತ್ತರ ಪ್ರದೇಶ ಗೋದಿ ಸಂಗ್ರಹಕ್ಕೆ ಪ್ರಮುಖ ಕೊಡುಗೆ ನೀಡಿವೆ.

**ಎಲ್ಲೆಲ್ಲಿ ಎಷ್ಟೆಷ್ಟು ಖರೀದಿ:**

ಪಂಜಾಬ್‌ನಿಂದ ಅತಿ ಹೆಚ್ಚು 103.89 ಲಕ್ಷ ಮೆಟ್ರಿಕ್ ಟನ್ ಗೋದಿ ಖರೀದಿಸಿದ್ದರೆ, ಹರಿಯಾಣದಿಂದ 65.67 ಎಲ್‌ಎಂಟಿ, ಮಧ್ಯಪ್ರದೇಶದಿಂದ 67.57 ಎಲ್‌ಎಂಟಿ, ರಾಜಸ್ಥಾನದಿಂದ 11.44 ಎಲ್‌ಎಂಟಿ ಹಾಗೂ ಉತ್ತರ ಪ್ರದೇಶದಿಂದ 7.55 ಎಲ್‌ಎಂಟಿ ಗೋದಿಯನ್ನು ಸದ್ಯ ಖರೀದಿಸಲಾಗಿದೆ. 2025-26ನೇ ಸಾಲಿನ ಗೋದಿ ಖರೀದಿ ಅವಧಿ ಇನ್ನೂ ಸಾಕಷ್ಟಿದ್ದು, ಕೇಂದ್ರೀಯ ಗೋದಿ ಸಂಗ್ರಹಣಾ ನಿಧಿಯಿಂದ ಗಣನೀಯ ಪ್ರಮಾಣದಲ್ಲಿ ಗೋದಿ ಸಂಗ್ರಹಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

**62,155 ಕೋಟಿ ಬೆಂಬಲ ಬೆಲೆ:**

2025-26ರ ಆರ್‌ಎಂಎಸ್ ಅವಧಿಯಲ್ಲಿ ದೇಶದ 21.03 ಲಕ್ಷ ಗೋದಿ ಬೆಳೆಗಾರರು ಬೆಂಬಲ ಬೆಲೆ ಪ್ರಯೋಜನ ಪಡೆದಿದ್ದಾರೆ. ಈ ರೈತರಿಗೆ 62155.96 ಕೋಟಿ ಕನಿಷ್ಠ ಬೆಂಬಲ ಬೆಲೆ ನೀಡಲಾಗುತ್ತಿದೆ. ರೈತರಿಂದ ಗೋದಿ ಖರೀದಿಸಿದ 24ರಿಂದ 48 ಗಂಟೆಗಳಲ್ಲಿ ಒಟಿಕ ಪಾವತಿ ಮಾಡಲಾಗುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದಾರೆ.

ಈ ವರ್ಷ ದೇಶಾದ್ಯಂತ ಹೆಚ್ಚಿನ ಗೋದಿ ಸಂಗ್ರಹಣೆಗೆ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಕ್ರಮ ಕೈಗೊಂಡಿದ್ದು, ಗೋದಿ ದಾಸ್ತಾನು ಪೋರ್ಟಲ್ ಮೂಲಕ ದಾಸ್ತಾನು ಮಿತಿ ಕಡ್ಡಾಯ, ಸಕಾಲಿಕ ಅನುಮೋದನೆ, FAQ ಮಾನದಂಡಗಳು ಮತ್ತು ಸಕಾಲಿಕವಾಗಿ ಅಧಿಕಾರಿಗಳ ಕ್ಷೇತ್ರ ಭೇಟಿಗೆ ಅವಕಾಶ ಕಲ್ಪಿಸಿದ್ದರಿಂದ ಹೆಚ್ಚಿನ ಪ್ರಮಾಣದ ಗೋದಿ ಸಂಗ್ರಹ ಸಾಧ್ಯವಾಗಿದೆ ಹಾಗೂ ರೈತರಿಗೂ ಅನುಕೂಲವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ

# ಆಫ್ಘನ್‌ನಿಂದ ಭಾರತಕ್ಕೆ ಸರಕು ಸಾಗಣೆ: ಪಾಕಿಸ್ತಾನ ಅನುಮತಿ




**ನವದೆಹಲಿ, ಮೇ 1:** ಭಾರತಕ್ಕೆ ಸರಕು ಸಾಗಿಸಲು ಅಫ್ಘಾನಿಸ್ತಾನಕ್ಕೆ ಪಾಕಿಸ್ತಾನ ಅನುಮತಿ ನೀಡಿದೆ. ವಾಘಾ-ಅಟ್ಟಾರಿ ಗಡಿಯ ಮೂಲಕ ಸರಕು ಸಾಗಾಟಕ್ಕೆ ಅನುಮತಿ ನೀಡಲಾಗಿದೆ. ಪಾಕಿಸ್ತಾನದ ವಿದೇಶಾಂಗ ಸಚಿವಾಲಯದಿಂದ ಅಫ್ಘಾನಿಸ್ತಾನ ರಾಯಬಾರಿ ಕಚೇರಿಗೆ ಈ ಬಗ್ಗೆ ಪತ್ರ ಬರೆದಿದೆ. 150 ಅಫ್ಘಾನ್ ಟಕ್‌ಗಳಿಗೆ ವಾಘಾ ಗಡಿಯ ಮೂಲಕ ಭಾರತ ಪ್ರವೇಶಿಸಲು ಅನುಮತಿ ಸಿಕ್ಕಿದೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದ ಬಳಿಕ ಭಾರತ ಹಾಗೂ ಪಾಕ್ ನಡುವೆ ಉದ್ವಿಗ್ನತೆ ತೀವ್ರಗೊಂಡಿತ್ತು. ಇದಾದ ಬಳಿಕ ವಾಘಾ ಗಡಿಯನ್ನು ಎರಡೂ ದೇಶಗಳು ಬಂದ್ ಮಾಡಿದ್ದವು. ಇದರಿಂದ ಭಾರತಕ್ಕೆ ಅಫ್ಘಾನಿಸ್ತಾನದಿಂದ ಬರುತ್ತಿದ್ದ ಸರಕುಗಳು ನಿಂತಿದ್ದವು. ಸರಕು ಸಾಗಾಟ ಮಾಡಲು ಅನುಮತಿ ನೀಡುವಂತೆ ಅಫ್ಘಾನಿಸ್ತಾನ ಪಾಕಿಸ್ತಾನಕ್ಕೆ ಮನವಿ ಮಾಡಿತ್ತು. ಈ ಮನವಿ ಮೇರೆಗೆ ಪಾಕ್ ಅನುಮತಿ ನೀಡಿದೆ.

ಏ.22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದರು. ಈ ದಾಳಿಯಲ್ಲಿ 26 ಮಂದಿ ಸಾವನ್ನಪ್ಪಿದ್ದರು. ಕರ್ನಾಟಕ ಮೂಲದ ಇಬ್ಬರು ಸಾವಿಗೀಡಾಗಿದ್ದರು.

ಈ ದಾಳಿಯ ಬೆನ್ನಲ್ಲೇ ಪ್ರತೀಕಾರ ತೀರಿಸಿಕೊಳ್ಳುವತ್ತ ದಿಟ್ಟ ಹೆಜ್ಜೆ ಇಟ್ಟಿರುವ ಭಾರತ ಈಗಾಗಲೇ ಪಾಕ್ ಜೊತೆಗಿನ ರಾಜತಾಂತ್ರಿಕ ಸಂಬಂಧವನ್ನು ಕಡಿದುಕೊಂಡಿದೆ. ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಉನ್ನತಮಟ್ಟದ ಸಭೆಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ 1960ರ ಸೆಪ್ಟೆಂಬರ್ 19ರಂದು ಸಹಿ ಹಾಕಲಾಗಿದ್ದ ಸಿಂಧೂ ನದಿ ನೀರು ಒಪ್ಪಂದವನ್ನು ತಡೆಹಿಡಿಯ ಲಾಗಿತ್ತು. ಇದರೊಂದಿಗೆ ಪಾಕಿಸ್ತಾನಕ್ಕೆ ನೀರು ಸರಬರಾಜು ಮಾಡುತ್ತಿದ್ದ ಸಿಂಧೂ ನದಿ ಮತ್ತು ಝೀಲಂ, ಚೆನಾಬ್, ರಾವಿ, ಬಿಯಾಸ್ ಮತ್ತು ಸಟ್ಲೇಜ್ ನದಿಗಳಿಂದ ನೀರು ಸರಬರಾಜು ನಿಲ್ಲಿಸುವ ತೀರ್ಮಾನಕ್ಕೆ ಬರಲಾಗಿದೆ. ಜೊತೆಗೆ ಅಟ್ಟಾರಿ-ವಾಘಾ ಗಡಿ ಮುಚ್ಚಲು ಭಾರತ ಆದೇಶಿಸಿತ್ತು. ಅಷ್ಟೇ ಅಲ್ಲದೇ ಸಾರ್ಕ್ ವೀಸಾ ವಿನಾಯಿತಿ ಯೋಜನೆ ವೀಸಾಗಳ ಅಡಿಯಲ್ಲಿ ಪಾಕಿಸ್ತಾನಿ ಪ್ರಜೆಗಳು ಭಾರತಕ್ಕೆ ಪ್ರಯಾಣಿಸಲು ನೀಡಿದ ಅನುಮತಿಯನ್ನು ತಡೆಹಿಡಿಯಲಾಗುತ್ತಿದೆ. ಈ ಹಿಂದೆ ನೀಡಿದ್ದ ಯಾವುದೇ SVES ವೀಸಾಗಳನ್ನು ರದ್ದುಗೊಳಿಸಿ, ಭಾರತ ತೊರೆಯುವಂತೆ ಸೂಚಿಸಲಾಗಿತ್ತು. ಇದಕ್ಕೆ ತಕ್ಕಂತೆ ಪಾಕ್ ಸಹ ಪ್ರತಿ ತಂತ್ರಗಳನ್ನು ರೂಪಿಸಿತ್ತು.

# ಮೀಸಲಾತಿಯಲ್ಲಿ ಶೇ.50ರ ಗರಿಷ್ಠ ಪರಿಮಿತಿಯನ್ನು ಸಡಿಲಗೊಳಿಸಿ ಜನಸಂಖ್ಯೆ ಅನುಗುಣವಾಗಿ ಮೀಸಲಾತಿ ಕಲ್ಪಿಸಿ: ಕೇಂದ್ರಕ್ಕೆ ಸಿಎಂ ಒತ್ತಾಯ

**ಬೆಂಗಳೂರು, ಮೇ 1:** ಜನಗಣತಿ ಯೊಂದಿಗೆ ಜಾತಿಗಣತಿ ಮಾಡುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಸ್ವಾಗತಿಸುತ್ತೇವೆ. ಅದರೊಂದಿಗೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆಯೂ ನಡೆಯಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ಜನತೆಗೆ ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಜಾತಿ ಗಣತಿಯೊಂದಿಗೆ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸಬೇಕು. ಮೀಸಲಾತಿಯಲ್ಲಿ ಶೇ.50ರ ಗರಿಷ್ಠ ಪರಿಮಿತಿಯನ್ನು ಸಡಿಲಗೊಳಿಸಿ ಜನಸಂಖ್ಯೆ ಅನುಗುಣವಾಗಿ ಮೀಸಲಾತಿ ಕಲ್ಪಿಸಬೇಕು. ಎಸ್‌ಸಿ, ಎಸ್‌ಟಿ ಹಾಗೂ ಓಬಿಸಿಗೆ ಶೇ. 50 ರಷ್ಟು ಮೀಸಲಾತಿ ಮಿತಿ ಇದೆ. ಅದನ್ನು ಹೆಚ್ಚಿಸಬೇಕು. ಖಾಸಗಿ ಕ್ಷೇತ್ರದಲ್ಲೂ ಮೀಸಲಾತಿ ಜಾರಿಗೆ ತರಬೇಕು ಎಂದು ಹೇಳಿದರು.



ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದವರಿಗೆ ಮೀಸಲಾತಿ ನೀಡಬೇಕೆಂದು ಸಂವಿಧಾನ ಹೇಳುತ್ತದೆ. ಜಾತಿ ಗಣತಿ ಯೊಂದಿಗೆ ಸಾಮಾಜಿಕ, ಆರ್ಥಿಕ , ಶೈಕ್ಷಣಿಕ ಮಾಡಿದರೆ ಜನಸಂಖ್ಯೆಗನುಗುಣವಾಗಿ ಮೀಸಲಾತಿ ನೀಡಲು ಅನುಕೂಲವಾಗುತ್ತದೆ ಮತ್ತು ಅವರನ್ನು ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತದೆ ಎಂದರು. ಇದನ್ನು ಪರಿಗಣಿಸಬೇಕೆಂದು ಕೇಂದ್ರ ಸರ್ಕಾರವನ್ನು ಆಗ್ರಹಿಸುವುದಾಗಿ ತಿಳಿಸಿದರು.

ಬಿಹಾರ ಚುನಾವಣೆ ಹಿನ್ನೆಲೆಯಲ್ಲಿ ಸಮೀಕ್ಷೆ

ಈ ರೀತಿಯ 2015 ರಲ್ಲಿಯೇ ನಮ್ಮ ಸರ್ಕಾರ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ಮೂಲಕ 192 ಕೋಟಿ ವೆಚ್ಚ ಮಾಡಿ 1. 33 ಲಕ್ಷ ಸಿಬ್ಬಂದಿ ನಿಯೋಜನೆ ಮಾಡಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸಲಾಗಿದೆ . ಇದರಿಂದ ಪ್ರೇರಿತವಾಗಿ ಮತ್ತು ಬಿಹಾರ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕೇಂದ್ರ ಸರ್ಕಾರವು ಈಗ ಸಮೀಕ್ಷೆಗೆ ಮುಂದಾಗಿದೆ ಎಂದರು.

ಜಾತಿ ಗಣತಿಗೆ ಕೂಡಲೇ ದಿನಾಂಕ ನಿಗದಿಗೊಳಿಸಬೇಕು ಎಂದರು. ರಾಹುಲ್ ಗಾಂಧಿಯವರು ಕೂಡಾ ಇದನ್ನೇ ಆಗ್ರಹಿಸಿದ್ದು, ಜಾತಿ ಗಣತಿ ವೇಳೆ ಸಾಮಾಜಿಕ, ಆರ್ಥಿಕ ಸಮೀಕ್ಷೆ ನಡೆಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು. ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸಂವಿಧಾನದ 15 ವಿಧಿ, ಕಲಂ (5) ರಂತೆ ಮೀಸಲಾತಿಯನ್ನು ಕೊಡಬೇಕೆಂದು ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ. ಇದರಿಂದ ಬಡವರು, ಹಿಂದುಳಿದವರನ್ನು ಮುಖ್ಯವಾಹಿನಿಗೆ ತರಲು ಅನುಕೂಲವಾಗಲಿದೆ ಎಂದು ಹೇಳಿದರು. ಈ ರೀತಿಯ 2015 ರಲ್ಲಿಯೇ ನಮ್ಮ ಸರ್ಕಾರ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ಮೂಲಕ 192 ಕೋಟಿ ವೆಚ್ಚ ಮಾಡಿ 1.33 ಲಕ್ಷ ಸಿಬ್ಬಂದಿ ನಿಯೋಜನೆ ಮಾಡಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ನಡೆಸಲಾಗಿದೆ ಇದರಿಂದ ಪ್ರೇರಿತವಾಗಿ ಮತ್ತು ಬಿಹಾರ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕೇಂದ್ರ ಸರ್ಕಾರವು ಈಗ ಸಮೀಕ್ಷೆಗೆ ಮುಂದಾಗಿದೆ ಎಂದರು.

ಮೀಸಲಾತಿ ಶೇ. 50 ರಾಷ್ಟ್ರ ಮಿತಿಯಲ್ಲಿಲ್ಲ. ಶೇ. 10 ರಷ್ಟು ಇಡಬ್ಲ್ಯೂಎಸ್ ಜಾರಿಗೆ ತರಲಾಗಿದೆ. ತಮಿಳುನಾಡಿನಲ್ಲಿ ಶೇ. 59 ರಷ್ಟು , ಜಾರ್ಖಂಡ್‌ನಲ್ಲಿ ಶೇ. 77 ರಷ್ಟಿದೆ. ಇಲ್ಲೆಲ್ಲಾ ಶೇ.50 ರ ಮಿತಿ ದಾಟಿದೆ. ಅದಕ್ಕಾಗಿ ಕೇಂದ್ರ ಸರ್ಕಾರ ಜನಸಂಖ್ಯೆಗೆ ಬಡತನ, ಸಾಮಾಜಿಕ ಪರಿಸ್ಥಿತಿ ಆಧಾರದ ಮೀಸಲಾತಿ ಇದೆ. ಸಾಮಾಜಿಕ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆ ಪರಿಗಣಿಸಿ ಮೀಸಲಾತಿ ಎಂದು ಸಂವಿಧಾನದ ಆರ್ಟಿಕಲ್ 14, 15 ಮತ್ತು 16 ರಲ್ಲಿ ಉಲ್ಲೇಖಿತವಾಗಿದೆ. ಇಡಬ್ಲ್ಯೂಎಸ್ ಅನ್ನು ಸುಪ್ರಿಂಕೋರ್ಟ್ ಎತ್ತಿ ಹಿಡಿದಿದ್ದರೆ ನಾನು ವಿರೋಧಿಸಲು ಹೋಗುವುದಿಲ್ಲ.

## ಜಾತಿಗಣತಿಗೆ ಕರ್ನಾಟಕದ ಮಾದರಿ ಅಳವಡಿಸಿ
## ಸಿಎಂ ಹೇಳಿಕೆಗೆ ಪ್ರತಿಪಕ್ಷ ನಾಯಕ ಅಶೋಕ್ ಖಂಡನೆ

**ಬೆಂಗಳೂರು, ಮೇ 1:** ಕೇಂದ್ರ ಸರ್ಕಾರದ ಜಾತಿ ಗಣತಿಗೆ ಕರ್ನಾಟಕ ಮಾದರಿಯನ್ನು ಅಳವಡಿಸಿ ಎಂದು ಹೇಳಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ತಿರುಗೇಟು ನೀಡಿದ್ದಾರೆ. ಜನಗಣತಿ ಹೇಗೆ ಮಾಡಬಾರದು ಎನ್ನುವುದಕ್ಕೆ ನಿಮ್ಮ ಗಣತಿಯೇ ಮಾದರಿ ಎಂದು ಅವರು ಟೀಕಿಸಿದ್ದಾರೆ. ಜಾತಿ ಗಣತಿಗೆ ಕರ್ನಾಟಕದ ಮಾದರಿ ಅಳವಡಿಸಿ ಎಂದು ತಾವು ನೀಡಿರುವ ಹೇಳಿಗೆ ನಿಜಕ್ಕೂ ಹಾಸ್ಯಾಸ್ಪದ. ಮೂಲ ಪ್ರತಿ ಕಳೆದು ಹೋಗಿರುವ, ಕಾರ್ಯದರ್ಶಿಗಳ ಸಹಿಯೇ ಇಲ್ಲದ, ಪುಟಕ್ಕೆ 5-10 ರೂಪಾಯಿ ನೀಡಿ ಶಾಲಾ ಮಕ್ಕಳ ಕೈಯಲ್ಲಿ ಅರ್ಜಿ ಭರ್ತಿ ಮಾಡಿಸಿರುವ, ನಾಯಿಗಳು ಇರುವ ಮನೆಯಲ್ಲಿ ಜಾತಿ ಗಣತಿ ಮಾಡೋಕೆ ಹೋಗದ, ಹತ್ತು ವರ್ಷಗಳಾದರೂ ಸ್ವೀಕರಿಸಿದ ನಿಮ್ಮ ಜಾತಿ ಗಣತಿ ವರದಿ, ಜಾತಿ ಜನಗಣತಿಯನ್ನು ಹೇಗೆ ಮಾಡಬಾರದು



ಎನ್ನುವುದಕ್ಕೆ ಮಾದರಿ ಎಂದಿದ್ದಾರೆ.

ಜಾತಿ ಜನಗಣತಿಯನ್ನು ಬಿಜೆಪಿ ವಿರೋಧಿಸುತ್ತಲೇ ಬಂದಿದೆ ಎಂದು ತಾವು ಹೇಳಿರುವುದು ಹಸಿ ಸುಳ್ಳು. 2010ರಲ್ಲಿ ಅಂದಿನ ಲೋಕಸಭೆಯ ವಿಪಕ್ಷ ನಾಯಕಿ ದಿವಂಗತ ಸುಷ್ಮಾ ಸ್ವರಾಜ್ ಅವರು 2011ರ ಜನಗಣತಿ ಯಲ್ಲಿ ಜಾತಿಗಣತಿಯನ್ನು ಸೇರಿಸಲು ಬಿಜೆಪಿ ಬೆಂಬಲಿಸುತ್ತದೆ ಎಂದು ಲಿಖಿತ ರೂಪದಲ್ಲಿ ಯುಪಿಎ ಸರ್ಕಾರಕ್ಕೆ ತಿಳಿಸಿದ್ದರು. ಸಂಸತ್ತಿನಲ್ಲಿ ಅಂಗೀಕರಿಸಲಾದ ಸರ್ವಾನುಮತದ ನಿರ್ಣಯವನ್ನೂ ಬಿಜೆಪಿ ಬೆಂಬಲಿಸಿತ್ತು. ಆದರೆ, ಅಂದಿನ ಕಾಂಗ್ರೆಸ್ ಸರ್ಕಾರ ಜಾತಿ ಜನಗಣತಿಯ ಬದಲು ಕಾಟಾಚಾರಕ್ಕೆ ಸಾಮಾಜಿಕ-ಆರ್ಥಿಕ ಜಾತಿ ಜನಗಣತಿ - 2011 (SECC-2011) ಸಮೀಕ್ಷೆಯ ನಡೆಸಿತು. ಕರ್ನಾಟಕದ ಜಾತಿ ಗಣತಿಯಂತೆ ಕಳಪೆ ಯೋಜನೆ ಮತ್ತು ಅಸಮರ್ಥ ಅನುಷ್ಠಾನದಿಂದಾಗಿ ಅದು ಸಂಪೂರ್ಣ ವಾಗಿ ವಿಫಲವಾಯಿತು. ಕೋಟ್ಯಂತರ ರೂಪಾಯಿ ಹಣ ಖರ್ಚು ಮಾಡಿದ ನಂತರವೂ ಅದರ ಫಲಿತಾಂಶಗಳನ್ನು ಬಿಡುಗಡೆ ಮಾಡಲೇ ಇಲ್ಲ. ಇದು ಕಾಂಗ್ರೆಸ್ ಪಕ್ಷಕ್ಕೆ ಜಾತಿ ಗಣತಿ ಬಗ್ಗೆ ಇರುವ ನಿಜವಾದ ಬದ್ಧತೆ ಎಂದು ಅಶೋಕ್ ಕಿಡಿಕಾರಿದ್ದಾರೆ.

ಬಿಜೆಪಿಗೆ ಜಾತಿ ಗಣತಿಯನ್ನು ಎಂದಿಗೂ ಚುನಾವಣಾ ಅಸ್ತ್ರವಾಗಿ ದುರ್ಬಳಕೆ ಮಾಡಿಕೊಳ್ಳಲಿಲ್ಲ. ಅಧಿಕಾರವಿದ್ದಾಗ ಜಾತಿ ಜನಗಣತಿ ಮಾಡುವ ನಿರ್ಧಾರ ಕೈಗೊಂಡು ಬದ್ಧತೆ ಪ್ರದರ್ಶನ ಮಾಡಿದ್ದೇವೆಯೇ ಹೊರತು ವಿಪಕ್ಷದಲ್ಲಿದಾಗ ಮೊಸಳೆ ಕಣ್ಣೀರು ಸುರಿಸಿ, ಅಧಿಕಾರ ಇದ್ದಾಗ ನಿರ್ಲಕ್ಷ್ಯ ಮಾಡುವ ಕೀಳು ರಾಜಕೀಯ ಮಾಡಿಲ್ಲ. ಇದು ಸಾಮಾಜಿಕ ನ್ಯಾಯದ ಬಗ್ಗೆ ನಮಗಿರುವ ನೈಜವಾದ ಬದ್ಧತೆ. ಜಾತಿ ಜನಗಣತಿ ಬಗ್ಗೆ ಬಿಜೆಪಿಯದ್ದು ಇದ್ದ ತಕರಾರು ಒಂದೇ. ಅದು ರಾಜಕೀಯ ದಾಳವಾಗಿ ದುರ್ಬಳಕೆ ಆಗಬಾರದು ಎಂಬುದು.ಕೇಂದ್ರ ಸರ್ಕಾರ ಈಗ ನಡೆಸಲಿರುವ ಜಾತಿ ಗಣತಿ ಅತ್ಯಂತ ಪಾರದರ್ಶಕವಾಗಿ, ವೈಜ್ಞಾನಿಕವಾಗಿ, ಸದುದ್ದೇಶದಿಂದ ನಡೆಯಲಿದೆಯೇ ಹೊರತು ನಿಮ್ಮ ಕಾಂಗ್ರೆಸ್ ಸರ್ಕಾರ ಮಾಡಿದಂತೆ ರಾಜಕೀಯ ಅನುಕೂಲಕ್ಕಾಗಿ ಮೂಗಿನ ನೇರಕ್ಕೆ ದತ್ತಾಂಶವನ್ನು ತಿರುಚುವ ದುರುದ್ದೇಶದಿಂದ ಮಾಡುವುದಿಲ್ಲ. ಕರ್ನಾಟಕದ ಜಾತಿ ಗಣತಿ ಪ್ರಕ್ರಿಯೆ ಜಾತಿಗಣತಿಯನ್ನ ಹೇಗೆ ನಡೆಸಬಾರದು ಎಂಬುದಕ್ಕೆ ಮಾದರಿಯೇ ಹೊರತು ಅದರಲ್ಲಿ ಅನುಸರಿವಂತಹ ಯಾವುದೇ ಒಳ್ಳೆಯ ಅಂಶಗಳೂ ಇಲ್ಲ ಎಂದಿದ್ದಾರೆ.

# ಜಾತಿಗಣತಿ-ಜನಗಣತಿ ನಡೆಸಲು ಕೇಂದ್ರ ನಿರ್ಧಾರ: ಬಿ.ವೈ.ವಿಜಯೇಂದ್ರ ಶ್ಲಾಘನೆ

**ಬೆಂಗಳೂರು, ಮೇ 1:** ಜನಗಣತಿಯೊಂದಿಗೆ ಜಾತಿಗಣತಿ ಸೇರ್ಪಡೆ ಮಾಡಿರುವ ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ, ಇದು ಸಮಾಜದ ನಡುವೆ ಉಂಟಾಗಿದ್ದ ಬಿರುಕನ್ನು ಕಡಿಮೆ ಮಾಡುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ತಿಳಿಸಿದರು. ಈ ಬಗ್ಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾತಿಗಣತಿಯ ಹೆಸರಿನಲ್ಲಿ ಸಮುದಾಯಗಳ ನಡುವೆ ವಿಷ ಬೀಜ ಬಿತ್ತುವ ಮೂಲಕ ಸಮಾಜವನ್ನು ಒಡೆಯುವ ಕೆಲಸ ಮಾಡುತ್ತಿದೆ. ಅದರೆ ಕೇಂದ್ರ ಸರ್ಕಾರ ಇದಕ್ಕೆ ತಕ್ಕ ಉತ್ತರ ನೀಡಿದೆ ಎಂದರುಐದು ದಶಕಗಳಷ್ಟು ದೇಶವನ್ನು ಆಳಿದ ಕಾಂಗ್ರೆಸ್ ಎಂದೂ ಇಂತಹ ಸಾಮಾಜಿಕ ನ್ಯಾಯದ ಪರ




ಬದ್ಧತೆಯನ್ನು ತೋರದೇ ಜಾತಿಗಣತಿಗಷ್ಟೇ ತನ್ನ ವ್ಯಾಪ್ತಿಯನ್ನು ಸೀಮಿತಗೊಳಿಸಿಕೊಂಡಿತ್ತು. ಇದರಿಂದಾಗಿ ಅದೆಷ್ಟೋ ಸಮಾಜ ಸಮುದಾಯಗಳಿಗೆ ಸಿಗಬೇಕಿದ್ದ ಸವಲತ್ತುಗಳು ಸಿಗುತ್ತಿರಲಿಲ್ಲ..ಆದರೆ ಕೇಂದ್ರ ಸರ್ಕಾರದ ಈ ಜನಗಣತಿಯ ಜೊತೆ ಜಾತಿಗಣತಿ ಸೇರ್ಪಡೆಯಾಗಿರುವುದು ಎಲ್ಲರಿಗೂ ಸಂತೋಷ ತಂದಿದೆ ಅಲ್ಲದೇ ಎಲ್ಲರೂ ಕೂಡ ಇದನ್ನು ಸ್ವಾಗತಿಸಿದ್ದಾರೆ. ಈ ಮೂಲಕ ಸಮಾಜದ ನಡುವೆ ವಿಷ ಬೀಜಬಿತ್ತಿ ಜನರ ನಡುವಿದ್ದ ಒಗ್ಗಟ್ಟನ್ನು ಒಡೆಯಲು ಸಂಚು ಹಾಕಿದ್ದ ರಾಜ್ಯ ಸರ್ಕಾರದ ಆಟಕ್ಕೆ ಬ್ರೇಕ್ ಬೀಳಲಿದೆ ಎಂದು ವಿಜಯೇಂದ್ರ ಹೇಳಿದರು. ಪ್ರಧಾನಿ ನರೇಂದ್ರ ಮೋದಿಯವರು ದೇಶದ ಜನರ ಸಾಮಾಜಿಕ ಸ್ಥಿತಿಗತಿ ಅದರಲ್ಲೂ ಜಾತಿ ಆಧಾರಿತ ಸ್ಥಿತಿ ಗತಿಗಳನ್ನು ಅಳೆಯಲು ಜನಗಣತಿಯ ಜೊತೆಗೆ ಜಾತಿಗಣತಿಯನ್ನು ಸೇರಿಸುವ ಮೂಲಕ ಕಾಂಗ್ರೆಸ್ಸಿಗರ ಮತ ಬ್ಯಾಂಕ್ ರಾಜಕಾರಣಕ್ಕೆ ತಕ್ಕ ಉತ್ತರ ನೀಡಿದ್ದಾರೆ ಎಂದು ಬಿ.ವೈ.ವಿಜಯೇಂದ್ರ ತಿಳಿಸಿದರು.

# ಪಹಲ್ಗಾಮ್ ದಾಳಿ: ನ್ಯಾಯಾಂಗ ತನಿಖೆ ಕೋರಿದ್ದ ಪಿಐಎಲ್ ತಿರಸ್ಕಾರ

**ನವದೆಹಲಿ, ಮೇ 01:** ಏಪ್ರಿಲ್ 22ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ಘಟನೆಯ ನ್ಯಾಯಾಂಗ ತನಿಖೆ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ (ಪಿಐಎಲ್) ವಿಚಾರಣೆ ನಡೆಸಲು ಸುಪ್ರೀಂ ಕೋರ್ಟ್ ಗುರುವಾರ (ಏ.30) ನಿರಾಕರಿಸಿದೆ.

ಪಹಲ್ಗಾಮ್ ದಾಳಿಯ ತನಿಖೆಯನ್ನು ಮೇಲ್ವಿಚಾರಣೆಯನ್ನು ನಿವೃತ್ತ ನ್ಯಾಯಾಧೀಶರಿಂದ ಮಾಡಿಸಬೇಕು ಎಂದು ಕೋರಿದ್ದಕ್ಕಾಗಿ ಅರ್ಜಿದಾರರನ್ನು ಟೀಕಿಸಿದ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಎನ್.ಕೋಟಿಶ್ವರ್ ಸಿಂಗ್ ಅವರ ಪೀಠವು, ನಿವೃತ್ತ ನ್ಯಾಯಾಧೀಶರು ತಜ್ಞರಲ್ಲ ಎಂದು ಹೇಳಿದೆ.

ಈ ನಿರ್ಣಾಯಕ ಸಮಯದಲ್ಲಿ, ದೇಶದ ಪ್ರತಿಯೊಬ್ಬ ನಾಗರಿಕರು ಭಯೋತ್ಪಾದನೆಯ ವಿರುದ್ಧ ಹೋರಾಡಲು ಕೈಜೋಡಿಸಿದ್ದಾರೆ. ಈ ರೀತಿಯ ಪಿಐಎಲ್ ಸಲ್ಲಿಸುವ ಮೂಲಕ ಭದ್ರತಾ ಪಡೆಗಳ ಸ್ಥೈರ್ಯ ಕುಗ್ಗಿಸಲು ನೀವು ಬಯಸುತ್ತೀರಾ ಈ ರೀತಿಯ ಸಮಸ್ಯೆಯನ್ನು ನ್ಯಾಯಾಂಗ ವ್ಯಾಪ್ತಿಯಲ್ಲಿ ತರಬೇಡಿ ಎಂದು ನ್ಯಾಯಪೀಠ ಹೇಳಿದೆ ಎಂದು ವರದಿಯಾಗಿದೆ.

ಅರ್ಜಿದಾರರಾದ ಫತೇಶ್ ಕುಮಾರ್ ಸಾಹು ಮತ್ತು ಇತರರಿಗೆ ಪಿಐಎಲ್ ಹಿಂಪಡೆಯಲು ನ್ಯಾಯಾಲಯ ಸೂಚಿಸಿದೆ. ಅರ್ಜಿದಾರರು ಈ ವಿಷಯದ ಸೂಕ್ಷ್ಮತೆಯನ್ನು ಅರಿತುಕೊಳ್ಳಬೇಕು ಮತ್ತು ಭದ್ರತಾ ಪಡೆಗಳ ಸ್ಥೈರ್ಯ ಕುಗ್ಗಿಸುವ ಯಾವುದೇ ಮನವಿಯನ್ನು ನ್ಯಾಯಾಲಯದಲ್ಲಿ ಮಾಡಬಾರದು ಎಂದು ಸುಪ್ರೀಂ ಕೋರ್ಟ್ ಕೇಳಿದೆ ಎಂದು ವರದಿ ತಿಳಿಸಿದೆ.

ನೀವು ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ಮಾಡಿಸಲು ಕೇಳುತ್ತಿದ್ದೀರಿ. ಅವರು ತನಿಖೆಯಲ್ಲಿ ಪರಿಣತರಲ್ಲ, ಆದರೆ ಅವರು ಸಮಸ್ಯೆಯನ್ನು ನಿರ್ಣಯಿಸಬಹುದು ಮತ್ತು ನಿರ್ಧರಿಸಬಹುದು. ಆದೇಶ ಹೊರಡಿಸಲು ನಮ್ಮನ್ನು ಕೇಳಬೇಡಿ. ನೀವು ಎಲ್ಲಿಗೆ ಹೋಗಬೇಕೆಂದರೂ ಹೋಗಿ. ನೀವು ಇದರಿಂದ ಹಿಂದೆ ಸರಿಯುವುದು ಉತ್ತಮ ಎಂದು ಪೀಠವು ಅರ್ಜಿದಾರರಲ್ಲಿ ಒಬ್ಬರಿಗೆ ಹೇಳಿದೆ ಎಂದು ವರದಿ ವಿವರಿಸಿದೆ.

ಪ್ರವಾಸಿಗರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಮತ್ತು ಜಮ್ಮು-ಕಾಶ್ಮೀರ ಆಡಳಿತಕ್ಕೆ ನಿರ್ದೇಶನ ನೀಡಬೇಕೆಂದು ಪಿಐಎಲ್ ಕೋರಿತ್ತು. ಏಪ್ರಿಲ್ 22ರಂದು ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಪಹಲ್ಗಾಮ್ನ ಜನಪ್ರಿಯ ಪ್ರವಾಸಿ ತಾಣ ಬೈಸರನ್‌ನಲ್ಲಿ ಭಯೋತ್ಪಾದಕರು ಗುಂಡು ಹಾರಿಸಿ 26 ಪ್ರವಾಸಿಗರನ್ನು ಹತ್ಯೆ ಮಾಡಿದ್ದಾರೆ.



■ ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರದಂದು ನವದೆಹಲಿಯಲ್ಲಿ ಪ್ರಗತಿ ಸಭೆಯ ಅಧ್ಯಕ್ಷತೆ ವಹಿಸಿದ್ದರು.

# ವಿಚಾರಣೆ ಹಂತದಲ್ಲಿ 1,700ಕ್ಕೂ ಪ್ರಕರಣಗಳು: ಇಡಿ

**ನವದೆಹಲಿ, ಮೇ 01:** 1700ಕ್ಕೂ ಹೆಚ್ಚು ಹಣ ಅಕ್ರಮ ವರ್ಗಾವಣೆ ಪ್ರಕರಣಗಳು ಪ್ರಸ್ತುತ ವಿಚಾರಣೆ ಹಂತದಲ್ಲಿವೆ, ನ್ಯಾಯಾಲಯಗಳಲ್ಲಿನ ವಿಳಂಬವು ದೇಶದಲ್ಲಿ ನ್ಯಾಯ ವ್ಯವಸ್ಥೆಯಲ್ಲಿನ ಸಾಮಾನ್ಯ ವಿಳಂಬಕ್ಕೆ ಕಾರಣ ಎಂದು ಜಾರಿ ನಿರ್ದೇಶನಾಲಯದ (ಇಡಿ) ನಿರ್ದೇಶಕ ರಾಹುಲ್ ನವೀನ್ ಗುರುವಾರ ಹೇಳಿದ್ದಾರೆ. ಜಾರಿ ನಿರ್ದೇಶನಾಲಯದ ಪ್ರಕರಣಗಳ ಶಿಕ್ಷೆಯ ಪ್ರಮಾಣವು ಶೇಕಡಾ 93.6 ರಷ್ಟಿದ್ದು, ಇಲ್ಲಿಯವರೆಗೆ ನ್ಯಾಯಾಲಯಗಳು ನಿರ್ಧರಿಸಿದ 47 ಪ್ರಕರಣಗಳಲ್ಲಿ ಕೇವಲ ಮೂರು ಪ್ರಕರಣಗಳು ಖುಲಾಸೆಯಾಗಿವೆ ಎಂದು ಜಾರಿ ನಿರ್ದೇಶನಾಲಯದ ಉನ್ನತ ಅಧಿಕಾರಿ, ಹೇಳಿದರು. ಪಿಎಂಎಲ್‌ಎಯ ಒಟ್ಟು 1,739 ಪ್ರಕರಣಗಳು ಪ್ರಸ್ತುತ ವಿಚಾರಣೆಯಲ್ಲಿವೆ. ಹಣ ಅಕ್ರಮ ವರ್ಗಾವಣೆ ಪ್ರಕರಣಗಳಲ್ಲಿ ವಿಚಾರಣೆಯಲ್ಲಿನ ವಿಳಂಬವು ದೇಶದಲ್ಲಿ ನ್ಯಾಯ ವ್ಯವಸ್ಥೆಯಲ್ಲಿನ ಸಾಮಾನ್ಯ ವಿಳಂಬಕ್ಕೆ ಕಾರಣವೆಂದು ಹೇಳಬಹುದು ಎಂದು ಅವರು ಇಲ್ಲಿ ನಡೆದ ಜಾರಿ ನಿರ್ದೇಶನಾಲಯ ದಿನದ ಕಾರ್ಯಕ್ರಮವನ್ನು ಉದ್ದೇಶಿಸಿ ಹೇಳಿದರು. ಪಿಎಂಎಲ್‌ಎ ಪ್ರಕರಣಗಳಲ್ಲಿ ಬಾಕಿ ಇರುವ ತನಿಖೆಯನ್ನು ಪ್ರಾಮಾಣಿಕ ವಾಗಿ ಒಪ್ಪಿಕೊಂಡಿದ್ದೇನೆ ಎಂದು ನವೀನ್ ಹೇಳಿದರು. ನ್ಯಾಯಾಲಯಗಳ ಮುಂದೆ ಅಂತಹ ಪ್ರಕರಣಗಳಲ್ಲಿ ಆರೋಪಪಟ್ಟಿಗಳನ್ನು ಸಲ್ಲಿಸಲು ಏಜೆನ್ಸಿಯ ಪ್ರಯತ್ನಗಳು ಕಾರಣ ಎಂದು ಹೇಳಿದರು. ಜಾರಿ ನಿರ್ದೇಶನಾಲಯವು ತನ್ನ ತನಿಖೆಗಳಲ್ಲಿ ಸುಧಾರಿತ ತಂತ್ರಜ್ಞಾನ ಮತ್ತು ವಿಧಿವಿಜ್ಞಾನವನ್ನು ಬಳಸುತ್ತದೆ. ಮೇ 1, 1956 ರಂದು ಸ್ಥಾಪನೆಯಾದ ಒಕ್ಕೂಟ ತನಿಖಾ ಸಂಸ್ಥೆಯು ತನ್ನ ಅಸ್ತಿತ್ವದ 69 ವರ್ಷಗಳನ್ನು ಪೂರ್ಣಗೊಳಿಸಿದೆ. ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯ (ಎಫ್‌ಇಎಂಎ) ನಾಗರಿಕ ನಿಬಂಧನೆಗಳ ಜೊತೆಗೆ, ಇದು ಎರಡು ಕ್ರಿಮಿನಲ್ ಕಾನೂನುಗಳನ್ನು ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಮತ್ತು ದೇಶಭ್ರಷ್ಟ ಆರ್ಥಿಕ ಅಪರಾಧಿಗಳ ಕಾಯ್ದೆ (ಎಫ್‌ಇಎಂಎ) ಜಾರಿಗೊಳಿಸುತ್ತದೆ.

# ಹುಡುಕಿ, ಹುಡುಕಿ ಹೊಡೆಯುತ್ತೇವೆ: ಶಾ ಎಚ್ಚರಿಕೆ

**ನವದೆಹಲಿ, ಮೇ 1:** ಶತ್ರುಗಳನ್ನು ಹುಡುಕಿ ಹುಡುಕಿ ಹೊಡೆಯುತ್ತೇವೆ. ಭಯೋತ್ಪಾದಕರು ಯುದ್ಧ ಗೆದ್ದಿದ್ದೇವೆ ಎಂದು ಭಾವಿಸಬಾರದು. ಈ ಹೋರಾಟ ಅಭಿ ಬಾಕಿ ಹೈ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುಡುಗಿದ್ದಾರೆ.

ದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಭಯೋತ್ಪಾದಕರ ಎಲ್ಲೇ ಅಡಗಿದ್ದರೂ ಹುಡುಕಿ ಹೊಡೆಯುತ್ತೇವೆ. ಪಹಲ್ಯಾಮ್ ದಾಳಿಯಲ್ಲಿ ಬಲಿಯಾದವರ ಸಾವಿಗೆ ಪ್ರತೀಕಾರ ತೀರಿಸಿಕೊಳ್ಳದೆ ಬಿಡುವುದಿಲ್ಲ. ಅಲ್ಲಿಯವರೆಗೂ ನಾವು ವಿಶ್ರಾಂತಿ ತೆಗೆದುಕೊಳ್ಳುವುದಿಲ್ಲ ಎಂಬುದನ್ನು ಉಗ್ರರು ಮರೆಯಬಾರದು. ನಾವು ಭಯೋತ್ಪಾದನೆ



ವಿರುದ್ಧ ಹೋರಾಟ ಮಾಡುತ್ತೇವೆ. ನಾವು ಭಯೋತ್ಪಾದನೆಯನ್ನ ಬೇರುಸಹಿತ ಕಿತ್ತುಹಾಕುತ್ತೇವೆ ಎಂದು ಗುಡುಗಿದ್ದಾರೆ.

ಹೇಡಿತನದ ಕೃತ್ಯ ನಡೆಸುವುದು ತಮ್ಮ ದೊಡ್ಡ ಗೆಲುವು ಎಂದು ಉಗ್ರರು ಅಂದುಕೊಂಡರೆ ಅದು ಅವರ ಭ್ರಮೆ. ಇದು ನರೇಂದ್ರ ಮೋದಿ ಸರ್ಕಾರ. ನಾವು ತಪ್ಪು ಮಾಡಿದ ಯಾರನ್ನೂ ಸುಮ್ಮನೆ ಬಿಡುವುದಿಲ್ಲ. "ಪಹಲ್ಯಾಮ್ ಭಯೋತ್ಪಾದಕ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ನಾನು ಗೌರವ ಸಲ್ಲಿಸುತ್ತೇನೆ. ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ಭಾರತವು ಭಯೋತ್ಪಾದನೆಯ ಬಗ್ಗೆ ಕಠಿಣ ಶೂನ್ಯ ಸಹಿಷ್ಣುತೆಯ ನಿಲುವನ್ನು ಕಾಯ್ದುಕೊಂಡಿದೆ ಎಂದು ನಾನು ಎಲ್ಲರಿಗೂ ಭರವಸೆ ನೀಡಲು ಬಯಸುತ್ತೇನೆ. ಎಂದಿದ್ದಾರೆ.

# ಜಾತಿಗಣತಿ ಘೋಷಣೆ: ಕಾರ್ಯಕಾರಿಣಿ ಸಭೆ ಕರೆದ ಕಾಂಗ್ರೆಸ್

**ನವದೆಹಲಿ, ಮೇ 01:** ದೇಶದಲ್ಲಿ ಜಾತಿ ಸಮೀಕ್ಷೆ ಅಥವಾ ಜಾತಿ ಜನಗಣತಿ ನಡೆಸಬೇಕು ಎಂಬುವುದು ಕಾಂಗ್ರೆಸ್ನ ಬಹುಕಾಲದ ಬೇಡಿಕೆಯಾಗಿತ್ತು. ತೆಲಂಗಾಣ, ಕರ್ನಾಟಕ ಸೇರಿದಂತೆ ಕಾಂಗ್ರೆಸ್ ಆಡಳಿತದ ರಾಜ್ಯಗಳಲ್ಲಿ ಈಗಾಗಲೇ ಜಾತಿ, ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲಾಗಿದೆ. ಕೇಂದ್ರದಲ್ಲಿ ಕಾಂಗ್ರೆಸ್ ಆಡಳಿತಕ್ಕೆ ಬಂದರೆ ಜಾತಿ ಜನಗಣತಿ ನಡೆಸುತ್ತೇವೆ ಎಂದೂ ಇತ್ತೀಚಿನ ವರ್ಷಗಳಲ್ಲಿ ಕಾಂಗ್ರೆಸ್ ಹೇಳಿಕೊಂಡು ಬಂದಿದೆ. ಜಾತಿ ಗಣತಿಯ ವಿಷಯದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯಂತೂ ದೃಢವಾಗಿ ನಿಂತಿದ್ದರು.

ಈ ನಡುವೆ ಮಹತ್ವದ ಬೆಳವಣಿಗೆಯಲ್ಲಿ ಕೇಂದ್ರ ಸರ್ಕಾರ, ಮುಂದಿನ ಜನಗಣತಿಯ ಜೊತೆಗೆ ಜಾತಿ ಗಣತಿಯನ್ನು ನಡೆಸುತ್ತೇವೆ ಎಂದು ಘೋಷಣೆ ಮಾಡಿದೆ. ಈ ಮೂಲಕ ಒಂದು ರೀತಿಯಲ್ಲಿ ಕಾಂಗ್ರೆಸ್ನ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ. ಕೇಂದ್ರ ಸರ್ಕಾರ ಜಾತಿ ಗಣತಿಯ ಬಗ್ಗೆ ಘೋಷಣೆ ಮಾಡಿದ ಹಿನ್ನೆಲೆ, ಮುಂದಿನ ನಡೆಯ ಬಗ್ಗೆ ಚರ್ಚಿಸಲು ಶುಕ್ರವಾರ ಕಾಂಗ್ರೆಸ್ ಕಾರ್ಯಕಾರಿಣಿ (ಸಿಡಬ್ಲ್ಯುಸಿ) ಸಭೆ ನಡೆಸುವ ಸಾಧ್ಯತೆ ಇದೆ ಎಂದು ವರದಿಯಾಗಿದೆ. ನಾಳೆ ಸಂಜೆ 4 ಗಂಟೆಗೆ ಸಿಡಬ್ಲ್ಯುಸಿ ಸಭೆ ನಡೆಸಲಿದ್ದೇವೆ. ಸರ್ಕಾರ ಜಾತಿ ಗಣತಿ ಬಗ್ಗೆ ಘೋಷಣೆ ಮಾಡಿದೆ. ಈ ವಿಚಾರದಲ್ಲಿ ನಮ್ಮ ನಿಲುವೇನು, ಮುಂದಿನ ನಡೆಯೇನು ಎಂಬುವುದರ ಬಗ್ಗೆ ಚರ್ಚಿಸಬೇಕಿದೆ. ಜಾತಿ ಗಣತಿಯ ಬಜೆಟ್, ಅವಧಿ, ಶೇ.50 ಮೀಸಲಾತಿ ಮಿತಿ ತೆರವು ಸೇರಿದಂತೆ ವಿವಿಧ ವಿಚಾರಗಳ ಬಗ್ಗೆ ನಮಗೆ ಸರ್ಕಾರದಿಂದ ಉತ್ತರ ಬೇಕಿದೆ. ಈ ಕುರಿತು ಚರ್ಚೆ ನಡೆಸಲಿದ್ದೇವೆ ಎಂದು ಕಾಂಗ್ರೆಸ್ನ ಉನ್ನತ ಮೂಲಗಳು ತಿಳಿಸಿರುವುದಾಗಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.



ಜಾತಿ ಗಣತಿಯ ಕುರಿತು ಕೇಂದ್ರದ ರಾಜಕೀಯ ವ್ಯವಹಾರಗಳ ಸಂಪುಟ ಸಮಿತಿಯ ನಿರ್ಧಾರದ ನಂತರ, ಜಾತಿ ಜನಗಣತಿಯ ಅತ್ಯಂತ ಗಟ್ಟಿ ಪ್ರತಿಪಾದಕರಲ್ಲಿ ಒಬ್ಬರಾಗಿರುವ ಲೋಕಸಭಾ ವಿರೋಧ ಪಕ್ಷದ ನಾಯಕ (ಎಲ್‌ಒಪಿ) ರಾಹುಲ್ ಗಾಂಧಿ, ?ಇದು ನಮ್ಮ ದೃಷ್ಟಿಕೋನ ಮತ್ತು ಹೊಸ ಅಭಿವೃದ್ಧಿ ಮಾದರಿಯತ್ತ ಮೊದಲ ಹೆಜ್ಜೆ ಎಂದು ಹೇಳಿದ್ದಾರೆ. ಮುಂದಿನ ಹಂತಗಳಲ್ಲಿ ಮೀಸಲಾತಿಯ ಮೇಲಿನ ಶೇ.50 ಮಿತಿಯನ್ನು ತೆಗೆದುಹಾಕುವುದು ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಯನ್ನು ಜಾರಿಗೆ ತರುವುದು ಸೇರಿದೆ ಎಂದಿದ್ದಾರೆ. ದೆಹಲಿಯ ಅಕ್ಬರ್ ರಸ್ತೆಯಲ್ಲಿರುವ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಾಹುಲ್ ಗಾಂಧಿ, ?ನಾವು ಸಂಸತ್ತಿನಲ್ಲಿ ಜಾತಿ ಜನಗಣತಿಯನ್ನು ಮಾಡುತ್ತೇವೆ ಎಂದು ಹೇಳಿದ್ದೆವು ಮತ್ತು ಮೀಸಲಾತಿಯ ಮೇಲಿನ ಶೇ.50 ಮಿತಿ ತೆರವುಗೊಳಿಸುತ್ತೇವೆ ಎಂದಿದ್ದೆವು. ಕೇವಲ ನಾಲ್ಕು ಜಾತಿಗಳಿವೆ ಎಂದು ಹೇಳುತ್ತಿದ್ದ ನರೇಂದ್ರ ಮೋದಿ ಇದ್ದಕ್ಕಿದ್ದಂತೆ ಜಾತಿ ಜನಗಣತಿಯನ್ನು ಘೋಷಿಸಿದ್ದಾರೆ. ನಾವು ಇದನ್ನು ಸಂಪೂರ್ಣವಾಗಿ ಬೆಂಬಲಿಸುತ್ತೇವೆ. ಆದರೆ, ನಮಗೆ ಜಾತಿ ಗಣತಿಯ ಅವಧಿ ಗೊತ್ತಾಗಬೇಕು. ಅದನ್ನು ಯಾವಾಗ ಮಾಡಲಾಗುತ್ತದೆ ಎಂಬ ಮಾಹಿತಿ ಬೇಕು. ಇದು ನಮ್ಮ ಮೊದಲ ಹೆಜ್ಜೆ. ತೆಲಂಗಾಣ ಜಾತಿ ಜನಗಣತಿ ಮಾದರಿಯಾಗಿದೆ? ಎಂದು ಹೇಳಿದ್ದಾರೆ. ತೆಲಂಗಾಣ ಜಾತಿಗಣತಿಯನ್ನು ವಿವರವಾದ ಮತ್ತು ಸೂಕ್ಷ್ಮ ಎಂದು ಬಣ್ಣಿಸಿದ ರಾಹುಲ್ ಗಾಂಧಿ, ಅದನ್ನು ?ಮುಕ್ತ ಪ್ರಕ್ರಿಯೆಯ ಮೂಲಕ ಕೈಗೊಳ್ಳಲಾಗಿದೆ? ಎಂದಿದ್ದಾರೆ. ರಾಷ್ಟ್ರೀಯ ಜನಗಣತಿಯ ವೇಳೆ ಕಾಂಗ್ರೆಸ್ ಆಡಳಿತದ ರಾಜ್ಯದಲ್ಲಿ ನಡೆದ ಕೆಲವು ವಿಚಾರಗಳನ್ನು ಅನುಸರಿಸಬೇಕು. ಅದಕ್ಕೆ ಸಹಾಯ ಮಾಡಲು ನಾವು ಸಂತೋಷಪಡುತ್ತೇವೆ ಎಂದಿದ್ದಾರೆ. ಜಾತಿ ಗಣತಿ ವಿಚಾರದಲ್ಲಿ ಕ್ರೆಡಿಟ್ ವಾರ್ ಶುರುವಾಗಿದೆ. ಜಾತಿ ಗಣತಿಯನ್ನು ಬಲವಾಗಿ ಪ್ರತಿಪಾದಿಸಿದ್ದು ನಾವು. ನಮ್ಮ ಬೇಡಿಕೆಗೆ ಸರ್ಕಾರ ಮಣಿದಿದೆ ಎಂದು ಜನವರಿಗೆ ಮನವರಿಗೆ ಮಾಡುವ ಸವಾಲು ಮತ್ತು ನರೇಂದ್ರ ಮೋದಿ ಹಠಾತ್ ಜಾತಿ ಗಣತಿ ಘೋಷಣೆ ಮಾಡಿ, ಅದರ ಕ್ರೆಡಿಟ್ ಅನ್ನು ಚುನಾವಣೆಯ ಅಸ್ತ್ರವಾಗಿ ಬಳಸುವ ಆತಂಕ ಕಾಂಗ್ರೆಸ್ ನಾಯಕರಲ್ಲಿದೆ.

# ರಾಜಕೀಯಕ್ಕೆ ಜಾತಿಗಣತಿ ಬಳಸಬೇಡಿ: ಆರ್‌ಎಸ್‌ಎಸ್

**ನವದೆಹಲಿ, ಮೇ 01:** ಜಾತಿ ಜನಗಣತಿ ಸಮೀಕ್ಷೆಯನ್ನು ರಾಜಕೀಯ ಸಾಧನವಾಗಿ ಬಳಸುವುದರ ಬಗ್ಗೆ ತಾನು ಜಾಗರೂಕನಾಗಿದ್ದೇನೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಹೇಳಿದೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ದಶಮಾನ ಜನಗಣತಿಯೊಂದಿಗೆ ಜಾತಿ ಆಧಾರಿತ ಸಮೀಕ್ಷೆ ನಡೆಸುವ ಕೇಂದ್ರ ಸರ್ಕಾರದ ನಿರ್ಧಾರಕ್ಕೆ ಸಂಘ ಇನ್ನೂ ಅಧಿಕೃತವಾಗಿ ಪ್ರತಿಕ್ರಿಯಿಸಿಲ್ಲ.

ಜಾತಿ ಆಧಾರದ ಮೇಲೆ ವಿಭಜನೆ ಮತ್ತು ಪ್ರತ್ಯೇಕತೆಯನ್ನು ಆರ್‌ಎಸ್‌ಎಸ್ ಸಾಂಪ್ರದಾಯಿಕವಾಗಿ ವಿರೋಧಿಸುತ್ತಾ ಬಂದಿದೆ. ಆದರೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಕೋಟಾಗಳಲ್ಲಿ ಉಪ–ವರ್ಗೀಕರಣ ಮತ್ತು ಕೆನೆ ಪದರವನ್ನು ಪರಿಚಯಿಸುವಂತಹ ವಿಷಯಗಳನ್ನು ಸಂಬಂಧಪಟ್ಟವರೊಂದಿಗೆ ಸಮಾಲೋಚಿಸಿ, ಒಮ್ಮತ ನಿರ್ಧಾರದ ನಂತರ ಕೈಗೊಳ್ಳಬೇಕು ಎಂಬ ನಿಲುವನ್ನು ತೆಗೆದುಕೊಂಡಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರನ್ನು ಅಧಿಕೃತ ನಿವಾಸದಲ್ಲಿ ಭೇಟಿಯಾದ ಒಂದು ದಿನದ ನಂತರ ಜಾತಿ ಜನಗಣತಿ ಸಮೀಕ್ಷೆಯನ್ನು ನಡೆಸುವ ಕೇಂದ್ರ ಸರ್ಕಾರದ ನಿರ್ಧಾರ ಬಂದಿದೆ. ಹಿಂದೂ ಸಮಾಜವನ್ನು ಒಗ್ಗೂಡಿಸಲು ಸಮಾಜಿಕ್ ಸಮರಸ್ತ ಅಥವಾ ಸಾಮಾಜಿಕ ಸಾಮರಸ್ಯ ಅಭಿಯಾನವನ್ನು ನಡೆಸುತ್ತಿರುವ ಸಂಘವು, ಜಾತಿ ಎಣಿಕೆಯ ವಿಷಯವನ್ನು ರಾಜಕೀಯ ಕಾರ್ಯಸೂಚಿಯಾಗಿ ನೋಡಬಾರದು ಎಂದು ಈ ಹಿಂದೆ ಹೇಳಿತ್ತು.



ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಕೇರಳದ ಪಾಲಕ್ಕಾಡ್‌ನಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಸಂಘದ ಮುಖ್ಯ ವಕ್ತಾರ ಸುನಿಲ್ ಅಂಬೇಕರ್, ಜಾತಿ ಸಂಬಂಧಗಳು ಸೂಕ್ಷ್ಮ ವಿಷಯಗಳಾಗಿವೆ, ರಾಷ್ಟ್ರೀಯ ಏಕತೆ ಮತ್ತು ಸಮಗ್ರತೆಗೆ ಮುಖ್ಯವಾಗಿವೆ ಎಂದು ಹೇಳಿದರು. ಜಾತಿ ಸಮೀಕ್ಷೆಯನ್ನು ಚುನಾವಣೆಗಳು ಅಥವಾ ಚುನಾವಣಾ ರಾಜಕೀಯವನ್ನು ಆಧರಿಸಿ ಅಲ್ಲ, ಬಹಳ ಸೂಕ್ಷ್ಮವಾಗಿ ವ್ಯವಹರಿಸಬೇಕು ಎಂದು ಅವರು ಹೇಳಿದರು.

ಜಾತಿ ಜನಗಣತಿಯ ಬೇಡಿಕೆಯ ಕುರಿತಾದ ಪ್ರಶ್ನೆಗೆ ಉತ್ತರಿಸಿದ ಅಂಬೇಕರ್, ಎಲ್ಲ ಕಲ್ಯಾಣ ಚಟುವಟಿಕೆಗಳಿಗೆ, ವಿಶೇಷವಾಗಿ ಹಿಂದುಳಿದಿರುವ ಮತ್ತು ವಿಶೇಷ ಗಮನ ಅಗತ್ಯವಿರುವ ಸಮುದಾಯಗಳು ಅಥವಾ ಜಾತಿಗಳಿಗೆ ಸರ್ಕಾರಕ್ಕೆ ಸಂಖ್ಯೆಗಳು ಬೇಕಾದರೆ, ಅದು ಸುಸ್ಥಾಪಿತ ಅಭ್ಯಾಸ ಎಂದು ಆರ್‌ಎಸ್‌ಎಸ್ ಭಾವಿಸುತ್ತದೆ. ಈ ಹಿಂದೆ, ಅಂತಹ ಡೇಟಾವನ್ನು ಸಂಗ್ರಹಿಸಲಾಗಿತ್ತು?ಆದರೆ ಅದನ್ನು ಆ ಸಮುದಾಯಗಳು ಮತ್ತು ಜಾತಿಗಳ ಕಲ್ಯಾಣಕ್ಕಾಗಿ ಮಾತ್ರ ಮಾಡಬೇಕು. ಇದನ್ನು ಚುನಾವಣೆಗಳಿಗೆ ರಾಜಕೀಯ ಸಾಧನವಾಗಿ ಬಳಸಬಾರದು ಎಂದು ಹೇಳಿದೆ.

ಜಾತಿ ದತ್ತಾಂಶ ಸಂಗ್ರಹಣೆಗೆ ತನ್ನ ಯಾವುದೇ ಆಕ್ಷೇಪಣೆ ಇಲ್ಲ ಎಂದು ಆರ್‌ಎಸ್‌ಎಸ್ ಸ್ಪಷ್ಟಪಡಿಸಿದೆ. ಆದರೆ, ಅದನ್ನು ಸಾರ್ವಜನಿಕ ಕಲ್ಯಾಣಕ್ಕಾಗಿ ಬಳಸಬೇಕು; ವಿಭಜಕ ರಾಜಕೀಯ–ಚುನಾವಣಾ ಕಾರ್ಯಸೂಚಿಗಳಿಗಾಗಿ ಅಲ್ಲ ಎಂದಿದೆ. ಈ ಹೇಳಿಕೆಯನ್ನು ಈಗ ನರೇಂದ್ರ ಮೋದಿ ಸರ್ಕಾರವು ತನ್ನ ಪ್ರಮುಖ ಬೆಂಬಲ ನೆಲೆಯಿಂದ ಸೈದ್ಧಾಂತಿಕ ಹಿನ್ನಡೆಯನ್ನು ಎದುರಿಸದೆ ಮುಂದುವರಿಯಲು ಅನುವು ಮಾಡಿಕೊಟ್ಟ ನಿರ್ಣಾಯಕ ಹಸಿರು ನಿಶಾನೆಯಾಗಿ ನೋಡಲಾಗುತ್ತಿದೆ. ಬಿಹಾರದಲ್ಲಿ ಜಾತಿ ಸಮೀಕ್ಷೆ ತಳಮಟ್ಟದ ಅನುಷ್ಠಾನ ಮತ್ತು ಆರ್‌ಎಸ್‌ಎಸ್ನ ರಾಷ್ಟ್ರೀಯ ಮಟ್ಟದ ಬೆಂಬಲದೊಂದಿಗೆ, ಜಾತಿ ಜನಗಣತಿಯು ಈಗ ಭಾರತದ ಸಾಮಾಜಿಕ–ಆರ್ಥಿಕ ಮತ್ತು ರಾಜಕೀಯ ನೀತಿಯ ನಿಯಮಗಳನ್ನು ಹಾಗೂ ಅದರ ಚುನಾವಣಾ ಸಂವಾದವನ್ನು ಮರು ವ್ಯಾಖ್ಯಾನಿಸಲು ಸಜ್ಜಾಗಿದೆ.

# ಪಹಲ್ಗಾಮ್ ದಾಳಿ ಗಮನ ಬೇರೆಡೆ ಸೆಳೆಯಲು ಜಾತಿ ಜನಗಣತಿ: ಸಂಜಯ್ ಸಿಂಗ್

**ನವದೆಹಲಿ, ಮೇ 01:** ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದ ಗಮನ ಬೇರೆಡೆ ಸೆಳೆಯಲು ಮುಂಬರುವ ಜನಗಣತಿಯಲ್ಲಿ ಜಾತಿ ಎಣಿಕೆಯನ್ನು ಸರ್ಕಾರ ಘೋಷಿಸಿದೆ ಎಂದು ಆಮ್ ಆದ್ಮಿ ಪಕ್ಷ (ಎಎಪಿ) ಸಂಸದ ಸಂಜಯ್ ಸಿಂಗ್ ಆರೋಪಿಸಿದ್ದಾರೆ. ಪಂಡಿತ್ಪುರ ಗ್ರಾಮದಲ್ಲಿ ಬುಧವಾರ ಎಎಪಿ ರಾಷ್ಟ್ರೀಯ ವಕ್ತಾರ ಸರ್ವೇಶ್ ಮಿಶ್ರಾ ಅವರ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಂಗ್, ಆಮ್ ಆದ್ಮಿ ಪಕ್ಷವು ಜಾತಿ ಜನಗಣತಿಯನ್ನು ಬೆಂಬಲಿಸುತ್ತದೆ. ಆದರೆ, ಬಿಹಾರ ಚುನಾವಣೆಯ ನಂತರ ಬಿಜೆಪಿ ಸರ್ಕಾರ ಅದನ್ನು ಮರೆತುಬಿಡುತ್ತದೆ ಎಂದು ಹೇಳಿದರು.

ಜಾತಿ ಜನಗಣತಿ ನಿರ್ಧಾರದ ಹಿಂದಿನ ಸರ್ಕಾರದ ಉದ್ದೇಶವನ್ನು ಪ್ರಶ್ನಿಸಿದ ಎಎಪಿ ನಾಯಕರು, ಅದನ್ನು ಮಹಿಳಾ ಮೀಸಲಾತಿ ಮಸೂದೆಗೆ ಹೋಲಿಸಿ, ?ಅದನ್ನು ಕಾರ್ಯಗತಗೊಳಿಸಲು ಏನೂ ಮಾಡಿಲ್ಲ? ಎಂದು ಹೇಳಿದರು. ಅದೇ ರೀತಿ, ನೀವು ಜಾತಿ ಜನಗಣತಿಯನ್ನು ಘೋಷಿಸಿದ್ದೀರಿ. ಆದರೆ ಬಜೆಟ್ ಹಂಚಿಕೆ ಇಲ್ಲ, ಯಾವುದೇ ಸಮಯವಿಲ್ಲ. ಬಿಹಾರ ಚುನಾವಣೆಗಳು ಮುಗಿದ ನಂತರ, ನೀವು ಅದನ್ನು ಮರೆತುಬಿಡುತ್ತೀರಿ ಎಂದು ಸಿಂಗ್ ಹೇಳಿದರು.


ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ವನ್ನು ಮರಳಿ ಪಡೆಯಲು ಮತ್ತು ಭಯೋತ್ಪಾದಕರನ್ನು ನಿರ್ಮೂಲನೆ ಮಾಡಲು ಸರ್ಕಾರ ಹೇಗೆ ಕಾರ್ಯನಿರ್ವಹಿಸುತ್ತದೆ ಎಂಬುದನ್ನು ನೋಡಲು ಇಡೀ ರಾಷ್ಟ್ರವು ಕಾಯುತ್ತಿತ್ತು. ಬದಲಾಗಿ, 26 ನಿರಾಯುಧ ಮತ್ತು ಮುಗ್ಧ ಪ್ರವಾಸಿಗರನ್ನು ಕೊಲ್ಲಲಾಯಿತು. ಭಯೋತ್ಪಾದಕರು ನಮ್ಮ ಸ್ವಂತ ನೆಲದಲ್ಲಿ ನಮಗೆ ಸವಾಲು ಹಾಕಿದರು, ಸರ್ಕಾರವು ಜಾತಿ ಜನಗಣತಿ ವಿಷಯವನ್ನು ಪ್ರಸ್ತಾಪಿಸುವ ಮೂಲಕ ಜನರನ್ನು ಬೇರೆಡೆಗೆ ಸೆಳೆಯಲು ಪ್ರಯತ್ನಿಸುತ್ತಿದೆ ಎಂದು ಅವರು ಹೇಳಿದರು.



ದೇಶವು ಎಷ್ಟು ಜನರು ಯಾವ ಜಾತಿಗೆ ಸೇರಿದವರು ಎಂಬುದನ್ನು ತಿಳಿದುಕೊಳ್ಳಬೇಕು, ಇದರಿಂದಾಗಿ ಸರ್ಕಾರಿ ಯೋಜನೆಗಳ ಪ್ರಯೋಜನಗಳನ್ನು ಅದಕ್ಕೆ ಅನುಗುಣವಾಗಿ ಹಂಚಬಹುದು ಎಂದು ಹೇಳಿದರು. ಆದರೆ ಇಂತಹ ಸಮಯದಲ್ಲಿ ಈ ವಿಷಯವನ್ನು ಎತ್ತುವುದು ಒಂದು ದಿಕ್ಕು ತಪ್ಪಿಸುವ ತಂತ್ರವಲ್ಲ. ಸಾರ್ವಜನಿಕರು ಸರ್ಕಾರದ ನಿಷ್ಕ್ರಿಯತೆಯನ್ನು ಪ್ರಶ್ನಿಸದಂತೆ ತಡೆಯಲಾಗುತ್ತಿದೆ ಎಂದು ಎಎಪಿ ನಾಯಕ ಹೇಳಿದರು. ಪಹಲ್ಗಾಮ್ನಲ್ಲಿ ನಡೆದ ಭಯೋತ್ಪಾದಕ ದಾಳಿಯು ಮೋದಿ ಸರ್ಕಾರದ ಗುಪ್ತಚರ ಮತ್ತು ಭದ್ರತಾ ವೈಫಲ್ಯ ಎಂದು ಸಿಂಗ್ ಹೇಳಿದರು.

ಪಹಲ್ಗಾಮ್ನಲ್ಲಿ 2,000 ಕ್ಕೂ ಹೆಚ್ಚು ಜನರು ಹಾಜರಿದ್ದರು. ಆದರೆ, ಭಯೋತ್ಪಾದಕರು ಬಂದು ಇಚ್ಛೆಯಂತೆ ಕೊಲ್ಲಲ್ಪಟ್ಟರು. ಇದು ಮೋದಿ ಸರ್ಕಾರದ ನೇರ ವೈಫಲ್ಯ. ಸರ್ಕಾರ ಉತ್ತರಿಸಬೇಕು ಮತ್ತು ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು. ಬದಲಾಗಿ, ಪ್ರಧಾನಿಯವರು ಸರ್ವಪಕ್ಷ ಸಭೆಯನ್ನು ಬಿಟ್ಟು ಬಿಹಾರದಲ್ಲಿ ಚುನಾವಣೆಗೆ ಪ್ರಚಾರ ಮಾಡಲು ನಿರ್ಧರಿಸಿದರು ಎಂದು ಅವರು ಹೇಳಿದರು.

ನೀವು ಪಾಕಿಸ್ತಾನದ ವಿರುದ್ಧ ಹೋರಾಡಬೇಕು, ಯೂಟ್ಯೂಬರ್‌ಗಳು ಮತ್ತು ಪತ್ರಕರ್ತರ ವಿರುದ್ಧ ಅಲ್ಲ. ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗುತ್ತಿದೆ, ಅವರನ್ನು ಜೈಲಿಗೆ ಹಾಕಲಾಗುತ್ತಿದೆ. ಇದು ನಿಮ್ಮ ಆದ್ಯತೆಯೇ ಸಿಂಗ್ ಕೇಳಿದರು. ಮೋದಿ ಸರ್ಕಾರ ಪಿಒಕೆಯನ್ನು ಮರಳಿ ಪಡೆಯಲು ಮತ್ತು ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಸಂಘಟನೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಸಿಂಗ್ ಹೇಳಿದರು. ಪಿಒಕೆ ನಮಗೆ ಸೇರಿದ್ದು. ನಮ್ಮ ಸಂಸತ್ತು ಆ ಪರಿಣಾಮಕ್ಕಾಗಿ ನಿರ್ಣಯವನ್ನು ಅಂಗೀಕರಿಸಿದೆ ಎಂದರು.




ಗುರುವಾರ ಮುಂಬೈನಲ್ಲಿ ನಡೆದ ವಿಶ್ವ ಆಡಿಯೋ ವಿಷುಯಲ್ ಮನರಂಜನಾ ಶೃಂಗಸಭೆ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಅವರು ಮಾತನಾಡಿದರು.

# ಮತದಾರರ ಪಟ್ಟಿಯ ನವೀಕರಣಕ್ಕಾಗಿ ಎಲೆಕ್ಟ್ರಾನಿಕ್ ಮರಣ ನೋಂದಣಿ ಅಂಕಿಅಂಶ ಬಳಕೆ

ನವದೆಹಲಿ: ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯನ್ನು ವೇಗವಾಗಿ ಮತ್ತು ನಿಖರವಾಗಿ ನಡೆಸಲು ಚುನಾವಣಾ ಆಯೋಗವು ಮರಣ ನೋಂದಣಿ ಮಾಹಿತಿಯನ್ನು ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾದಿಂದ (ಆರ್‌ಜಿಐ) ಎಲೆಕ್ಟ್ರಾನಿಕ್ ರೂಪದಲ್ಲಿ ಪಡೆಯಲು ನಿರ್ಧರಿಸಿದೆ. ಮತದಾರರ ಪಟ್ಟಿ ದೋಷರಹಿತವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಆಯೋಗವು ಈ ಹೆಜ್ಜೆಯಿಟ್ಟಿದೆ.ಇದು, ಮತದಾರರ ನೋಂದಣಿ ಅಧಿಕಾರಿಗಳು (ಇಆರ್‌ಒ) ಮರಣಗಳ ಬಗ್ಗೆ ಸಕಾಲಿಕ ಮಾಹಿತಿ ಪಡೆಯುವುದನ್ನು ಖಚಿತಪಡಿಸುತ್ತದೆ ಎಂದು ಚುನಾವಣಾ ಆಯೋಗ ಗುರುವಾರ ಹೇಳಿದೆ.

ಮೃತರ ಸಂಬಂಧಿಕರು ಮಾಹಿತಿ ನೀಡುವುದನ್ನು ಕಾಯದೆಯೇ ಮನೆಗಳಿಗೆ ಭೇಟಿ ನೀಡುವ ಮೂಲಕ ಮರಣದ ಮಾಹಿತಿಯನ್ನು ಮರು ಪರಿಶೀಲಿಸಲು ಬೂತ್‌ಮಟ್ಟದ ಅಧಿಕಾರಿಗಳಿಗೆ ಅನುವು ಮಾಡಿಕೊಡುತ್ತದೆ ಎಂದು ತಿಳಿಸಿದೆ.




1960ರ ಮತದಾರರ ನೋಂದಣಿ ಕಾಯ್ದೆ ಮತ್ತು 1969ರ ಜನನ ಮತ್ತು ಮರಣಗಳ ನೋಂದಣಿ ಕಾಯ್ದೆಯಡಿ ಅಂತಹ ವಿವರಗಳನ್ನು ಪಡೆಯುವ ಅಧಿಕಾರ ಚುನಾವಣಾ ಆಯೋಗಕ್ಕೆ ಇದೆ.ಮತದಾರರ ಮಾಹಿತಿ ಒಳಗೊಂಡ ಸ್ಲಿಪ್ಗಳನ್ನು ಇನ್ನಷ್ಟು ಮತದಾರ ಸ್ನೇಹಿಯನ್ನಾಗಿ ಮಾಡಲು, ಆಯೋಗವು ಅದರ ವಿನ್ಯಾಸವನ್ನು ಮಾರ್ಪಡಿಸಲು ನಿರ್ಧರಿಸಿದೆ.ಸ್ಲಿಪ್ಗಳಲ್ಲಿ ಮತದಾರರ ಕ್ರಮಸಂಖ್ಯೆಯನ್ನು ದೊಡ್ಡ ಗಾತ್ರ ಮತ್ತು ದಪ್ಪ ಅಕ್ಷರದಲ್ಲಿ ಬರೆಯಲಾಗುತ್ತದೆ. ಮತದಾರರಿಗೆ ತಮ್ಮ ಮತಗಟ್ಟೆಯನ್ನು ಗುರುತಿಸಲು ಹಾಗೂ ಮತಗಟ್ಟೆ ಅಧಿಕಾರಿಗಳಿಗೆ ಮತದಾರರ ಪಟ್ಟಿಯಲ್ಲಿನ ಹೆಸರುಗಳನ್ನು ಸುಲಭವಾಗಿ ಗುರುತಿಸಲು ಸಾಧ್ಯವಾಗಲಿದೆ.

# ಜಾತಿಗಣತಿ ನಿರ್ಧಾರ ಶ್ಲಾಘಿಸಿದ ರೇವಂತ್ ರೆಡ್ಡಿ

**ಮುಂಬೈ, ಮೇ 01:** ಮುಂಬರುವ ರಾಷ್ಟ್ರೀಯ ಜನಗಣತಿಯಲ್ಲಿ ಜಾತಿ ಸಮೀಕ್ಷೆಯನ್ನು ಸೇರಿಸುವ ಸರ್ಕಾರದ ನಿರ್ಧಾರವನ್ನು ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಶ್ಲಾಘಿಸಿದ್ದಾರೆ. ಈ ವಿಷಯದ ಬಗ್ಗೆ ನಿರಂತರವಾಗಿ ಮಾತನಾಡಿದ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅವರ ಸತತ ಪ್ರಯತ್ನಗಳನ್ನು ಶ್ಲಾಘಿಸಿದ್ದಾರೆ. ಅಂತಿಮವಾಗಿ, ತೆಲಂಗಾಣ ಇಂದು ಏನು ಮಾಡುತ್ತದೆಯೋ ಅದನ್ನು ನಾಳೆ ಭಾರತ ಅನುಸರಿಸುತ್ತದೆ ಎಂದು ನಾವು ಸಾಬೀತುಪಡಿಸಿದ್ದೇವೆ ಎಂದು ರೆಡ್ಡಿ ಹೇಳಿದರು.

ಕಾಂಗ್ರೆಸ್ನ ಭಾರತ್ ಜೋಡೋ ಯಾತ್ರೆಯ ಸಮಯದಲ್ಲಿ ರಾಷ್ಟ್ರವ್ಯಾಪಿ ಜಾತಿ ಜನಗಣತಿಯನ್ನು ಕೋರಿದ ಮೊದಲ ನಾಯಕ ರಾಹುಲ್ ಗಾಂಧಿ ಮತ್ತು ಅದನ್ನು ಜಾರಿಗೆ ತಂದ ಮೊದಲ ರಾಜ್ಯಗಳಲ್ಲಿ ತೆಲಂಗಾಣ ಒಂದು ಎಂದು ಮುಖ್ಯಮಂತ್ರಿ ಹೇಳಿದರು. ಇದು ಸ್ವತಂತ್ರ ಭಾರತದಲ್ಲಿ ಮೊದಲನೆಯದು (ಜಾತಿ ಜನಗಣತಿ), 1931 ರಲ್ಲಿ ಬ್ರಿಟಿಷರು ನಡೆಸಿದ ಕೊನೆಯದು. ರಾಜ್ಯವ್ಯಾಪಿ ಸಮಗ್ರ ಸಾಮಾಜಿಕ, ಆರ್ಥಿಕ, ಜಾತಿ ಸಮೀಕ್ಷೆಯನ್ನು ನಡೆಸಲಾಯಿತು. ಜನಸಂಖ್ಯೆಯ ಶೇಕಡಾ 56.32 ರಷ್ಟು ಜನರು ಹಿಂದುಳಿದ ಜಾತಿಗಳಿಗೆ ಸೇರಿದವರು ಎಂದು ಕಂಡುಬಂದಿದೆ ಎಂದು ಅವರು ಹೇಳಿದರು.




ತೆಲಂಗಾಣ ವಿಧಾನಸಭೆಯಲ್ಲಿ ಮಂಡಿಸಲಾದ ವರದಿಯ ಆಧಾರದ ಮೇಲೆ, ರಾಜ್ಯವು ಶಿಕ್ಷಣ, ಕೆಲಸ ಮತ್ತು ರಾಜಕೀಯ ಸ್ಥಾನಗಳಲ್ಲಿ ಒಬಿಸಿಗಳಿಗೆ ಶೇಕಡಾ 42 ರಷ್ಟು ಮೀಸಲಾತಿಯನ್ನು ಪರಿಹರಿಸಿ ಪ್ರಸ್ತಾಪಿಸಿತು ಎಂದು ಅವರು ಹೇಳಿದರು. ರಾಹುಲ್ ಗಾಂಧಿಯವರ ದೃಷ್ಟಿಕೋನವನ್ನು ರೆಡ್ಡಿ ಶ್ಲಾಘಿಸಿದರು. ವಿರೋಧ ಪಕ್ಷದಲ್ಲಿದ್ದರೂ ಜಾತಿ ಸಮೀಕ್ಷೆಯು ನೀತಿಯ ರೂಪವನ್ನು ಪಡೆದುಕೊಂಡಿದೆ ಎಂದು ಹೇಳಿದರು. ?ಒಬಿಸಿ ಸಬಲೀಕರಣಕ್ಕಾಗಿ ತೆಲಂಗಾಣ ಸರ್ಕಾರದ ಕ್ರಮಗಳು ದೇಶಕ್ಕೆ ಸ್ಫೂರ್ತಿ ನೀಡಿವೆ. ಭಾರತವು ನಮ್ಮ ರಾಜ್ಯದ ಕ್ರಮಗಳನ್ನು ಅನುಸರಿಸಲು ಒಪ್ಪಿಕೊಂಡಿದೆ ಎಂದು ನಾವು ಹೆಮ್ಮೆಪಡುತ್ತೇವ ಎಂದು ಅವರು ಹೇಳಿದರು. ಕಳೆದ ವರ್ಷ ಫೆಬ್ರವರಿಯಲ್ಲಿ, ಕಾಂಗ್ರೆಸ್ ನೇತೃತ್ವದ ತೆಲಂಗಾಣ ಸರ್ಕಾರವು ಮನೆ–ಮನೆಗೆ ಸಾಮಾಜಿಕ–ಆರ್ಥಿಕ ಸಮೀಕ್ಷೆ ಮತ್ತು ಜಾತಿ ಜನಗಣತಿಯನ್ನು ನಡೆಸುವುದಾಗಿ ಘೋಷಿಸಿತು. ಸಮೀಕ್ಷೆಯ ಫಲಿತಾಂಶಗಳ ಆಧಾರದ ಮೇಲೆ, ಮಾರ್ಚ್ 2025 ರಲ್ಲಿ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿ ಕೋಟಾವನ್ನು ಶೇಕಡಾ 23 ರಿಂದ 42 ಕ್ಕೆ ಹೆಚ್ಚಿಸಲು ರೆಡ್ಡಿ ಸರ್ಕಾರ ಮಸೂದೆಯನ್ನು ತಂದಿತು. ಈ ಮಧ್ಯೆ, ಎಐಎಂಐಎಂ ಸಂಸದ ಅಸಾದುದ್ದೀನ್ ಓವೈಸಿ ಅವರು, ತೆಲಂಗಾಣದಲ್ಲಿ ಐತಿಹಾಸಿಕ ಜಾತಿ ಜನಗಣತಿಯನ್ನು ಅನುಷ್ಠಾನಗೊಳಿಸಿದ್ದಕ್ಕೆ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರನ್ನು ಅಭಿನಂದಿಸಿದರು. ತೆಲಂಗಾಣ ಸರ್ಕಾರವು ಜಾತಿ ಸಮೀಕ್ಷೆಯನ್ನು ಜಾರಿಗೆ ತಂದಿರುವುದು ಸ್ವತಂತ್ರ ಭಾರತದಲ್ಲಿ ಇದೇ ಮೊದಲ ಬಾರಿಗೆ ಎಂದು ಅವರು ಹೇಳಿದರು.

ಮುಸ್ಲಿಮರ ಹಿಂದುಳಿದಿರುವಿಕೆಯ ಬಗ್ಗೆ ಸರಿಯಾದ ದತ್ತಾಂಶ ಸಂಗ್ರಹಿಸುವಂತೆ ಒವೈಸಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ರಾಷ್ಟ್ರೀಯ ಮಾದರಿ ಸಮೀಕ್ಷಾ ಸಂಸ್ಥೆ (ಎನ್‌ಎಸ್‌ಎಸ್‌ಒ) ಮತ್ತು ಇತರ ದತ್ತಾಂಶಗಳು ಮುಸ್ಲಿಮರು ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿದ್ದಾರೆ ಎಂಬುದನ್ನು ಸ್ಪಷ್ಟವಾಗಿ ತೋರಿಸುತ್ತವೆ ಎಂದು ಅವರು ಹೇಳಿದರು. ಮುಂದಿನ ರಾಷ್ಟ್ರೀಯ ಜನಗಣತಿ ಕಾರ್ಯದಲ್ಲಿ ಜಾತಿ ಜನಗಣತಿಯನ್ನು ಪಾರದರ್ಶಕ ರೀತಿಯಲ್ಲಿ ಸೇರಿಸಲಾಗುವುದು ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಬುಧವಾರ ಘೋಷಿಸಿದರು. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ರಾಜಕೀಯ ವ್ಯವಹಾರಗಳ ಸಂಪುಟ ಸಮಿತಿಯ ಸಭೆಯಲ್ಲಿ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು. ಜನಗಣತಿ ಕಾರ್ಯವು ಏಪ್ರಿಲ್ 2020 ರಲ್ಲಿ ಪ್ರಾರಂಭವಾಗಬೇಕಿತ್ತು. ಆದರೆ, ಕೋವಿಡ್ –19 ಸಾಂಕ್ರಾಮಿಕ ರೋಗದಿಂದಾಗಿ ವಿಳಂಬವಾಯಿತು. 10 ವರ್ಷಗಳ ವೇಳಾಪಟ್ಟಿಯ ಪ್ರಕಾರ ಈ ಕಾರ್ಯ ನಡೆದಿದ್ದರೆ, ವರದಿಯನ್ನು 2021 ರಲ್ಲಿ ಪ್ರಕಟಿಸಲಾಗುತ್ತಿತ್ತು.

# ಆರ್‌ಎಸ್‌ಎಸ್ ಭಾರತದ ಹಮಾಸ್: ರಾಗಿಣಿ ಆರೋಪ

**ಮುಂಬೈ, ಮೇ 01:** ಆರ್‌ಎಸ್‌ಎಸ್ ಅನ್ನು ಭಾರತದ ಹಮಾಸ್ ಎಂದು ಕರೆದಿದ್ದಕ್ಕಾಗಿ ಕಾಂಗ್ರೆಸ್ ವಕ್ತಾರೆ ನಾಯಕಿ ರಾಗಿಣಿ ನಾಯಕ್ ಅವರನ್ನು ಬಿಜೆಪಿಯ ಹಿರಿಯ ನಾಯಕ ಶಹನವಾಜ್ ಹುಸೇನ್ ಟೀಕಿಸಿದ್ದಾರೆ. ಪಾಕಿಸ್ತಾನವು ಇಂತಹ ಹೋಲಿಕೆಯನ್ನು ಮಾಡುತ್ತದೆ ಎಂದ ಅವರು, ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಅನ್ನು ಹಮಾಸ್ ಮತ್ತು ಐಸಿಸ್ನಂತಹ ಜಾಗತಿಕ ಭಯೋತ್ಪಾದಕ ಸಂಘಟನೆಗಳಿಗೆ ಹೋಲಿಸಿದ ವಿವಾದಾತ್ಮಕ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಶಹನವಾಜ್ ಹುಸೇನ್ ರಾಗಿಣಿ ನಾಯಕ್ ಅವರನ್ನು ತೀವ್ರವಾಗಿ ಟೀಕಿಸಿದ್ದಾರೆ.

ಅವರ ಹೇಳಿಕೆಗಳನ್ನು "ದುರದೃಷ್ಟಕರ" ಮತ್ತು "ನಾಚಿಕೆಗೇಡಿನ" ಎಂದು ಕರೆದ ಹುಸೇನ್, ಭಯೋತ್ಪಾದನೆಯ ವಿರುದ್ಧ ದೇಶವು ಒಗ್ಗಟ್ಟಾಗಬೇಕಾದ ಸಮಯದಲ್ಲಿಯೂ ಕಾಂಗ್ರೆಸ್ ಪಕ್ಷವು ರಾಜಕೀಯ ಚರ್ಚೆಯನ್ನು ಕೆಳಮಟ್ಟಕ್ಕೆ ಇಳಿಸಿದೆ ಎಂದು ಆರೋಪಿಸಿದ್ದಾರೆ. ಆರ್‌ಎಸ್‌ಎಸ್ ಬಗ್ಗೆ ಇಂತಹ ಕ್ಷುಲ್ಲಕ ಮತ್ತು ಅವಮಾನಕರ ಹೇಳಿಕೆ ನೀಡಿರುವುದು ತುಂಬಾ ದುರದೃಷ್ಟಕರ. ರಾಷ್ಟ್ರೀಯ ಸ್ವಯಂಸೇವಕ ಸಂಘವು ಈ ದೇಶವನ್ನು ಪ್ರೀತಿಸುವ ಮತ್ತು ಅದಕ್ಕಾಗಿ ತನ್ನ ಪ್ರಾಣವನ್ನು ತ್ಯಾಗ ಮಾಡಲು ಸಿದ್ಧವಿರುವ ದೇಶಭಕ್ತ ಸಂಘಟನೆಯಾಗಿದೆ. ಈ ರೀತಿಯ ಹೋಲಿಕೆ ಪಾಕಿಸ್ತಾನ ಮಾಡುವ ವಿಷಯ. ಈಗ ಕಾಂಗ್ರೆಸ್ ರಾಜಕೀಯ ಲಾಭಕ್ಕಾಗಿ ಇದನ್ನು ಮಾಡುತ್ತಿದೆ. ಇದು ತುಂಬಾ ವಿಷಾದನೀಯ ಎಂದು ಹುಸೇನ್ ಹೇಳಿದರು.



ರಾಗಿಣಿ ನಾಯಕ್ ಅವರು ಎಕ್ಸ್‌ನಲ್ಲಿ ವಿವಿಧ ದೇಶಗಳಲ್ಲಿನ ಭಯೋತ್ಪಾದಕ ಗುಂಪುಗಳನ್ನು ಹೋಲಿಸುವ ಪಟ್ಟಿಗೆ ಉತ್ತರಿಸಿದ್ದಕ್ಕೆ ಪ್ರತಿಕ್ರಿಯೆಯಾಗಿ ಹುಸೇನ್ ಅವರ ಹೇಳಿಕೆಗಳು ಬಂದಿವೆ. ಹುಸೇನ್ ಅವರ ಮೂಲ ಪೋಸ್ಟ್ ನಲ್ಲಿ ಭಾರತದಲ್ಲಿ ಕಾಂಗ್ರೆಸ್ ಇದೆ ಎಂದು ಕೊನೆಗೊಂಡಿತು. ನಾಯಕ್ ಅವರು, "ತಿದ್ದುಪಡಿ" ಭಾರತದಲ್ಲಿ ಆರ್‌ಎಸ್‌ಎಸ್ ಇದೆ ಎಂದು ನಂತರ ಪ್ರತಿಕ್ರಿಯಿಸಿದರು, ಇದು ಬಿಜೆಪಿಯಿಂದ ತೀವ್ರ ಟೀಕೆಗೆ ಗುರಿಯಾಯಿತು.

ಪ್ರತ್ಯೇಕವಾಗಿ, 26 ನಾಗರಿಕರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯಿಸಿ, ಭಾರತೀಯ ಸಶಸ್ತ್ರ ಪಡೆಗಳಿಗೆ ಕಾರ್ಯಾಚರಣೆಯ ಸ್ವತಂತ್ರ ನೀಡಿದ ಪ್ರಧಾನಿ ಮೋದಿಯವರ ನಡೆಯನ್ನು ಶಹನವಾಜ್ ಹುಸೇನ್ ತೂಗಿ ನೋಡಿದರು. ನಾಯಕತ್ವ ಮತ್ತು ಮಿಲಿಟರಿಯಲ್ಲಿ ರಾಷ್ಟ್ರದ ನಂಬಿಕೆಯನ್ನು ಅವರು ಪುನರುಚ್ಚರಿಸಿದರು. ಇಡೀ ದೇಶವು ಪ್ರಧಾನಿಯನ್ನು ನಂಬುತ್ತದೆ ಮತ್ತು ಪ್ರಧಾನಿ ನಮ್ಮ ಸಶಸ್ತ್ರ ಪಡೆಗಳನ್ನು ನಂಬುತ್ತಾರೆ. ಸಾರ್ವಜನಿಕರು ಸರ್ಕಾರದೊಂದಿಗೆ ಒಗ್ಗಟ್ಟಾಗಿ ನಿಂತಿದ್ದಾರೆ. ಅನೇಕ ರಾಜಕೀಯ ಪಕ್ಷಗಳು ನಿಜಕ್ಕೂ ಒಗ್ಗಟ್ಟನ್ನು ವ್ಯಕ್ತಪಡಿಸಿವೆ, ಆದರೆ ಕಾಂಗ್ರೆಸ್ ಇನ್ನೂ ದುಷ್ಕೃತ್ಯದಲ್ಲಿ ತೊಡಗಿದೆ ಎಂದು ಅವರು ಹೇಳಿದ್ದಾರೆ.

ಪ್ರಧಾನಿಯ ಮೇಲೆ ದಾಳಿ ಮಾಡುವ ಕಾಂಗ್ರೆಸ್ ಸಂಬಂಧಿತ ಪೋಸ್ಟರ್‌ಗಳು ಕಾಣಿಸಿಕೊಂಡ ಇತ್ತೀಚಿನ ಘಟನೆಯನ್ನು ಉಲ್ಲೇಖಿಸಿದ ಹುಸೇನ್ ಅವರು, ಕಾಂಗ್ರೆಸ್ ಪಕ್ಷವು ಪ್ರಧಾನಿಯ ಬಗ್ಗೆ ಅವಹೇಳನಕಾರಿ ಪೋಸ್ಟರ್‌ಗಳನ್ನು ಸಹ ಹಾಕಿದೆ, ಅದು ಅವರ ನಿಜವಾದ ಉದ್ದೇಶಗಳನ್ನು ತೋರಿಸುತ್ತದೆ. ಅವರು ಆ ಪೋಸ್ಟರ್‌ಗಳನ್ನು ಅಳಿಸಿರಬಹುದು, ಆದರೆ ರಾಷ್ಟ್ರದ ಭಾವನೆಗಳಿಗೆ ಈಗಾಗಲೇ ಹಾನಿ ಆಗಿದೆ ಎಂದಿದ್ದಾರೆ. ಇದಕ್ಕೂ ಮೊದಲು ಪ್ರಧಾನಿ ಮೋದಿ ಅವರು ಭಾರತವು ಭಯೋತ್ಪಾದನೆಗೆ ತೀವ್ರ ತಿರುಗೇಟು ನೀಡುವ ರಾಷ್ಟ್ರೀಯ ಸಂಕಲ್ಪವನ್ನು ಹೊಂದಿದೆ ಎಂದು ಘೋಷಿಸಿದ್ದರು ಮತ್ತು ಈಗ ಪ್ರತೀಕಾರದ ಸಮಯ, ವಿಧಾನ ಮತ್ತು ಗುರಿಗಳನ್ನು ನಿರ್ಧರಿಸಲು ಸಶಸ್ತ್ರ ಪಡೆಗಳಿಗೆ ಸಂಪೂರ್ಣ ಕಾರ್ಯಾಚರಣೆಯ ಸ್ವಾತಂತ್ರ್ಯವನ್ನು ಪ್ರಧಾನಿ ನೀಡಿದ್ದರು.

### ಮುನಿರತ್ನ ನಾಯ್ಡು ವಿರುದ್ಧ ಜೀವ ಬೆದರಿಕೆ ಪ್ರಕರಣ

# ಸ್ಪೀಕರ್‌ಗೆ ಆರೋಪ ಪಟ್ಟಿ ಸಲ್ಲಿಸಲು ವಿಶೇಷ ತನಿಖಾ ತಂಡ ಪತ್ರ

**ಬೆಂಗಳೂರು, ಮೇ.1–** ಬಿಬಿಎಂಪಿ ಗುತ್ತಿಗೆದಾರನಿಗೆ ಜೀವ ಬೆದರಿಕೆ ಪ್ರಕರಣ ಸಂಬಂಧ ರಾಜರಾಜೇಶ್ವರಿ ನಗರ ಕ್ಷೇತ್ರದ ಶಾಸಕ ಮುನಿರತ್ನ ನಾಯ್ಡು ವಿರುದ್ಧ ಆರೋಪಪಟ್ಟಿ ಸಲ್ಲಿಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ವಿಧಾನಸೌಧ ಸ್ಪೀಕರ್‌ಗೆ ಪತ್ರ ಬರೆದಿದ್ದಾರೆ.

ಬಿಬಿಎಂಪಿ ಗುತ್ತಿಗೆದಾರ ಚೆಲುವರಾಜುಗೆ ಜೀವ ಬೆದರಿಕೆ ಪ್ರಕರಣದಲ್ಲಿ ಮುನಿರತ್ನ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯ್ದೆಯ ಕಲಂ 17 (ಎ)ರಡಿ ಆರೋಪ ಪಟ್ಟಿ ಸಲ್ಲಿಸಲು ವಿಧಾನಸಭಾ ಸ್ಪೀಕರ್‌ಗೆ ಎಸ್‌ಐಟಿ ಮನವಿ ಮಾಡಿದೆ.ಆದರೆ, ಇಲ್ಲಿಯವರೆಗೂ ಉತ್ತರ ಬಂದಿಲ್ಲ. ಸ್ಪೀಕರ್ ಯು.ಟಿ. ಖಾದರ್ ಸಮ್ಮತಿಸಿದರೆ ಮುನಿರತ್ನ ವಿರುದ್ಧ ನ್ಯಾಯಾಲಯಕ್ಕೆ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಎಸ್‌ಐಟಿ ಆರೋಪಪಟ್ಟಿ



ಸಲ್ಲಿಸಲಿದೆ ಎಂದು ತಿಳಿದುಬಂದಿದೆ.

ಮತ್ತೊಂದು ಕೇಸಿನಲ್ಲಿ ಬಿಬಿಎಂಪಿ ಮಾಜಿ ಸದಸ್ಯ ವೇಲು ನಾಯ್ಕರ್‌ಗೆ ಜಾತಿ ನಿಂದನೆ ಪ್ರಕರಣದಲ್ಲಿ ಮುನಿರತ್ನ ವಿರುದ್ಧ ಆರೋಪ ಪಟ್ಟಿ ಸಲ್ಲಿಕೆಗೆ ಅನುಮತಿ ನೀಡಿದ್ದ ಸರ್ಕಾರವು, ಭ್ರಷ್ಟಾಚಾರ ನಿಗ್ರಹ ಕಾಯ್ದೆ ಅನ್ವಯ ದೋಷಾರೋಪ ಪಟ್ಟಿ ಸಲ್ಲಿಕೆಗೆ ಯಾವುದೇ ಉತ್ತರ ಬಂದಿಲ್ಲ. ರಾಜರಾಜೇಶ್ವರಿನಗರ ಕ್ಷೇತ್ರ ವ್ಯಾಪ್ತಿಯ ಬಿಬಿಎಂಪಿ ಲಕ್ಷ್ಮೀದೇವಿನಗರ ವಾರ್ಡ್‌ನ ಡಿ.ದೇವರಾಜು ಅರಸು ಟ್ರಕ್ ಟರ್ಮಿನಲ್ ಪ್ರದೇಶದ ಘನತಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ನಿರ್ವಹಣೆ ಗುತ್ತಿಗೆ ನೀಡುವ ವಿಚಾರವಾಗಿ ಗುತ್ತಿಗೆದಾರ ಚೆಲುವ ರಾಜುಗೆ ಅವಾಚ್ಯ ಶಬ್ಧಗಳಿಂದ ನಿಂದಿಸಿದ್ದರು. ಈ ಬಗ್ಗೆ ಚೆಲುವರಾಜು ನೀಡಿದ ದೂರಿನ ಮೇರೆಗೆ ಮುನಿರತ್ನ ವಿರುದ್ಧ ಪ್ರಕರಣ ದಾಖಲಾಗಿತ್ತು. ಕಸ ವಿಲೇವಾರಿಗೆ ಆಟೋ ಕೊಡಿಸುವುದಾಗಿ ನಂಬಿಸಿ ಗುತ್ತಿಗೆದಾರ ನಿಂದ ಶಾಸಕ 20 ಲಕ್ಷ ರೂ. ಲಂಚ ಪಡೆದಿದ್ದರು ಎಂಬ ಆರೋಪವಿತ್ತು.

ಆದರಿಂದ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಕೇಸ್ ದಾಖಲಿಸಲು ಎಸ್‌ಐಟಿ ನಿರ್ಧರಿಸಿತ್ತು. ಈ ಸಲುವಾಗಿ ಸ್ಪೀಕರ್ ಅವರಿಂದ ಪೂರ್ವಾನುಮತಿ ಕೋರಿದೆ ಎಂದು ಎಸ್‌ಐಟಿ ಮೂಲಗಳು ತಿಳಿಸಿವೆ. ಬಿಬಿಎಂಪಿ ಮಾಜಿ ಸದಸ್ಯೆ ಮಂಜುಳಾ ಅವರ ಪತಿ ನಾರಾಯಣ ಸ್ವಾಮಿಯನ್ನು ಹನಿಟ್ರ್ಯಾಪ್ ಯತ್ನ ಪ್ರಕರಣದಲ್ಲಿ ಶಾಸಕ ಮುನಿರತ್ನ ವಿರುದ್ಧ ಜನಪ್ರತಿನಿಧಿಗಳ ನ್ಯಾಯಾಲಯ ಎಸ್‌ಐಟಿ ಅಧಿಕಾರಿಗಳು ಬಿ ರಿಪೋರ್ಟ್ ಸಲ್ಲಿಸಿದ್ದಾರೆ.

ದೂರುದಾರ ನಾರಾಯಣ ಸ್ವಾಮಿ, ತನ್ನ ಬಳಿ ವಿಡಿಯೋ ಮತ್ತು ಸಾಕಷ್ಟು ಸಾಕ್ಷ್ಯಾಧಾರಗಳು ಇರುವುದಾಗಿ ಹೇಳಿದ್ದರು. ಆದರೆ, ತನಿಖೆ ವೇಳೆ ಹನಿಟ್ರ್ಯಾಪ್ ಸಂಬಂಧ ಯಾವುದೇ ವಿಡಿಯೋ ಅಥವಾ ಸಾಕ್ಷ್ಯ ಒದಗಿಸಿಲ್ಲ. ಅಲ್ಲದೆ, ತನಿಖೆ ವೇಳೆ ಆರೋಪ ಸಂಬಂಧ ದೃಢವಾದ ಸಾಕ್ಷ್ಯ ಲಭ್ಯವಾಗದ ಹಿನ್ನೆಲೆಯಲ್ಲಿ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಲಾಗಿದೆ ಎಂದು ಎಸ್‌ಐಟಿ ಮೂಲಗಳು ಖಚಿತಪಡಿಸಿವೆ.



ಬೆಂಗಳೂರು ಅರಮನೆ ಆವರಣದಲ್ಲಿ ನಡೆದ ಮಾಜಿ ಸಚಿವ ಮುರುಗೇಶ್ ನಿರಾಣಿ ಅವರ ಪುತ್ರ ವಿಶಾಲ್ ಅವರ ವಿವಾಹ ಆರತಕ್ಷತೆ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಧು–ವರರನ್ನು ಆಶೀರ್ವದಿಸಿದರು. ಈ ವೇಳೆ ಹರಿಹರ ವೀರಶೈವ–ಲಿಂಗಾಯತ ಪಂಚಮಸಾಲಿ ಗುರುಪೀಠದ ಶ್ರೀ ವಚನಾನಂದ ಸ್ವಾಮೀಜಿ, ಮಾಜಿ ಸಂಸದ ಜಿ.ಎಂ ಸಿದ್ದೇಶ್ವರ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜ್, ಬಿಜೆಪಿ ಯುವ ಮುಖಂಡ ರಣಜಿತ್ ಮತ್ತಿತರರು ಹಾಜರಿದ್ದರು.

# ಬಲಾಢ್ಯರಿಂದ ಬಲಹೀನರಿಗೆ ರಕ್ಷಣೆ ಅಧಿಕಾರಿಗಳಿಗೆ ಸಚಿವ ಡಾ.ಮಹದೇವಪ್ಪ ಕರೆ



**ಬೆಂಗಳೂರು, ಮೇ. 1–** ಆಡಳಿತದ ನೀತಿ ನಿರೂಪಕರಾದ ಕಾರ್ಯಾಂಗದ ಸಾರಥಿಗಳು ಬಲಾಢ್ಯರಿಂದ ಬಲ ಹೀನರಿಗೆ ರಕ್ಷಣೆ ಮತ್ತು ಜೀವನ ಮಾರ್ಗೋಪಾಯಗಳನ್ನು ಒದಗಿಸುವ ಪ್ರಬಲ ಆಡಳಿತ ವ್ಯವಸ್ಥೆಯನ್ನು ರೂಪಿಸಬೇಕು ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಸಚಿವ ಡಾ. ಎಚ್ ಸಿ ಮಹದೇವಪ್ಪ ಹೇಳಿದ್ದಾರೆ.

ಇಂಡಿಯಾ ಫಾರ್ ಐಎಎಸ್ ಅಕಾಡೆಮಿಯಿಂದ ಯುಪಿಎಸ್ಸಿ ಮತ್ತು ಸಿಎಸ್ಸಿಯಲ್ಲಿ ಉನ್ನತ ಸಾಧನೆ ಮಾಡಿದ 23 ಸಾಧಕರನ್ನು ಅಭಿನಂದಿಸಿ, ಇಂಡಿಯಾ ಫಾರ್ ಐಎಎಸ್ ವೆಬ್ಸೈಟ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಯೋಗ್ಯರು ಮತ್ತು ಸಮರ್ಥರ ಕೈಯಲ್ಲಿ ಆಡಳಿತ ಇದ್ದಾಗ, ನಿರ್ಣಯಗಳನ್ನು ಅನುಷ್ಠಾನಗೊಳಿಸುವಾಗ ಸಂವಿಧಾನದ ನಿರ್ದೇಶಕ ತತ್ವಗಳನ್ನು ಪರಿಪಾಲಿಸಬೇಕು. ಯಾರ ಮುಲಾಜಿಗೂ ಒಳಗಾಗ ಬಾರದು. ಅಧಿಕಾರಿಗಳು ಬುದ್ಧ ಸಹನೆ, ಕರುಣೆ, ಅನುಕಂಪ, ಪ್ರೀತಿ, ಸ್ವಾತಂತ್ರ್ಯದ ಉದ್ದೇಶಗಳನ್ನು ಈಡೇರಿಸುವ ಜೊತೆಗೆ ಸಮರ್ಥ ಭಾರತವನ್ನು ನಿರ್ಮಿಸಬೇಕು ಎಂದರು.

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ 55 ಸಾವಿರ ಪುಸ್ತಕಗಳನ್ನು ಆಳವಾಗಿ ಅಧ್ಯಯನ ಮಾಡಿ 140 ಕೋಟಿ ಜನರನ್ನು ರಕ್ಷಿಸುವ ಸಂವಿಧಾನ ರಚಿಸಿದ್ದಾರೆ. ಬುದ್ಧನ ಕಾಲದಿಂದಲೂ ಭಾರತ ಪ್ರಜಾಪ್ರಭುತ್ವ ದೇಶ. ನಮಗೆ ರಾಜಕೀಯ ಸಮಾನತೆ ಸಿಕ್ಕಿದೆ. ಆದರೆ ಸಮಸಮಾಜ, ಸಮಾನತೆ ಇಲ್ಲದೇ ಇದ್ದಲ್ಲಿ ರಾಜಕೀಯ ಸಮಾನತೆಗೆ ಅರ್ಥವಿರುವುದಿಲ್ಲ. ರಾಜಕೀಯ ಶಕ್ತಿ ಎಲ್ಲಾ ಸಮಸ್ಯೆಗಳಿಗೂ ಮಾಸ್ಟರ್ ಕೀ ಇದ್ದಂತೆ. ಇವೆಲ್ಲಾ ಕೇಳಲು ಚೆನ್ನಾಗಿದೆ. ಆದರೆ ಅನುಷ್ಠಾನ ಅತ್ಯಂತ ಮುಖ್ಯ. ಹಿರಿಯ ನಿವೃತ್ತ ಐಎಎಸ್ ಅಧಿಕಾರಿ ಮತ್ತು ಇಂಡಿಯಾ ಫಾರ್ ಅಕಾಡೆಮಿಯ ಆಡಳಿತ ಮಂಡಳಿ ಅಧ್ಯಕ್ಷ ಡಾ. ಸಿ ಎಸ್ ಕೇದಾರ್ ಮಾತನಾಡಿ, 2024 ರ ಕೇಂದ್ರ ಲೋಕಸೇವಾ ಆಯೋಗದ ನಾಗರಿಕ ಸೇವಾ ಪರೀಕ್ಷೆಯಲ್ಲಿ ಒಟ್ಟು ಕರ್ನಾಟಕದಿಂದ 41 ಅಭ್ಯರ್ಥಿಗಳು ಯಶಸ್ವಿಯಾಗಿದ್ದು, ಇಂಡಿಯಾ ಫಾರ್ ಐಎಎಸ್ ಅಕಾಡೆಮಿಯಿಂದ ಬೇರೆ ಬೇರೆ ಹಂತಗಳಲ್ಲಿ ತರಬೇತಿ ಪಡೆದ 23 ಅಭ್ಯರ್ಥಿಗಳು ಯಶಸ್ವಿಯಾಗಿದ್ದಾರೆ ಎಂದರು.

ಇಂಡಿಯಾ ಫಾರ್ ಅಕಾಡೆಮಿಯ ಆಡಳಿತ ಮಂಡಳಿಯ ಅಧ್ಯಕ್ಷ ಡಾ. ಸಿ ಎಸ್ ಕೇದಾರ್, ಉಪಾಧ್ಯಕ್ಷ ಡಾ. ಜಿ ಎನ್ ಶ್ರೀಕಂಠಯ್ಯ, ಸಹ ಸಂಸ್ಥಾಪಕ ಮತ್ತು ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಶ್ರೀನಿವಾಸ್ ಪಿ ಸಿ, ನಿರ್ದೇಶಕರಾದ ನವೀನ್ ಕೆ ಎಂ. ನಯನ್ ಗೌಡ, ಪ್ರಶಾಂತ್ ಶ್ರೀನಿವಾಸ್, ಬಾಬು ಸಂದೀಪ್ ಹಾಗೂ ಆಡಳಿತ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ಸಹೃದಯ, ಸದಾಚಾರ ತುಂಬುವ ರಾಯಭಾರಿಗಳು: ಶಿಕ್ಷಕರ ಪಾತ್ರದ ಬಗ್ಗೆ ಕೆ.ವಿ.ಪ್ರಭಾಕರ್ ಪ್ರಶಂಸೆ

**ಬೆಂಗಳೂರು, ಮೇ.1–** ಶಿಕ್ಷಕರು ಅಂದರೆ ಮಕ್ಕಳಲ್ಲಿ ಮತ್ತು ಮಕ್ಕಳ ಮೂಲಕ ಸಮಾಜದಲ್ಲಿ ಸಹೃದಯತೆ–ಸಮನ್ವಯತೆ–ಸಹಿಷ್ಣುತೆ–ಸದಾಚಾರ–ಸದ್ವಿಚಾರ–ಸಹಬಾಳ್ವೆ–ಸದಭಿರುಚಿಯನ್ನು ರೂಪಿಸುವ ಸಾಮಾಜಿಕ ರಾಯಭಾರಿಗಳು. ಇವರನ್ನು ವಂಧಿಸುವುದು ಉತ್ತಮ ಸಂಸ್ಕಾರ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ನುಡಿದರು.

ಮೀಡಿಯಾ ಕನೆಕ್ಟ್ ಮತ್ತು ಪುಣ್ಯ ಫೌಂಡೇಷನ್ ವಿದ್ಯಾಭವನದಲ್ಲಿ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ , ತುಮಕೂರಿನ ಇಡಗೂರು ಸರ್ಕಾರಿ ಶಾಲೆಯ ಶಿಕ್ಷಕರು ಸಮಾಜಮುಖಿಯಾದ ಪ್ರಜೆಗಳನ್ನು ಸೃಷ್ಟಿಸಿ ಸಮಾಜಕ್ಕೆ ಒಪ್ಪಿಸಿದ್ದಾರೆ ಎನ್ನುವುದಕ್ಕೆ ಈ ಗುರುವಂದನಾ ಕಾರ್ಯಕ್ರಮವೇ ಸಾಕ್ಷಿ. 25 ವರ್ಷಗಳ ಹಿಂದೆ ನಿಮ್ಮಿಂದ ತಿದ್ದಿ ಬೆಳೆದ ವಿದ್ಯಾರ್ಥಿಗಳು ತಮ್ಮ ಶಿಕ್ಷಕರನ್ನು ವಂಧಿಸುವ ಮೂಲಕ ತಮ್ಮ ಸಂಸ್ಕಾರವನ್ನು ತೋರಿಸುತ್ತಿದ್ದಾರೆ. ರೈತರು–ಶಿಕ್ಷಕರು–ಸೈನಿಕರು ಆರೋಗ್ಯಕರ ಮತ್ತು ನೆಮ್ಮದಿಯ ಸಮಾಜದ ಸೇನಾನಿಗಳು ಎಂದು ನಮ್ಮ ಮುಖ್ಯಮಂತ್ರಿಗಳು ಯಾವಾಗಲೂ ಹೇಳ್ತಾ ಇರ್ತಾರೆ. ಇದು ಅಕ್ಷರಶಃ ನಿಜ ಸಮಾಜವಾದಿ ಹೋರಾಟಗಾರರಾದ ಶಾಂತವೇರಿ ಗೋಪಾಲಗೌಡರು ತಮ್ಮ ಚಿಂತನೆಗಳನ್ನು, ಹೋರಾಟದ ವಿಷಯಗಳನ್ನು ಜನರಿಗೆ ಹೇಳುವ ಮೊದಲು ಶಾಲೆಗಳಿಗೆ ಹೋಗಿ ಶಿಕ್ಷಕರು ಮತ್ತು ಮಕ್ಕಳಿಗೆ ಹೇಳುತ್ತಿದ್ದರು. ಶಿಕ್ಷಕರು ಮತ್ತು ಮಕ್ಕಳು ಒಟ್ಟಾಗಿ ಪೋಷಕರಿಗೆ ವಿಷಯ ಮುಟ್ಟಿಸುತ್ತಿದ್ದರು. ಹೀಗಾಗಿ ಆರೋಗ್ಯಕರ ಸಮಾಜವನ್ನು ರೂಪಿಸುವುದರಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದು ಎಂದರು.

ಈಗ ತಂತ್ರಜ್ಞಾನದ ಕಾರಣಕ್ಕೆ ಸಮಾಜ ಅತ್ಯಂತ ವೇಗವಾಗಿ ಬೆಳೆಯುತ್ತಿದೆ, ಬದಲಾಗುತ್ತಾ ಶಿಕ್ಷಣದ ಅಗತ್ಯ ಮತ್ತು ಮಹತ್ವ ಕೂಡ ಬದಲಾಗುತ್ತಿದೆ. ಕಾರ್ಪೋರೇಟ್ ಜಗತ್ತಿನ ಮಾರುಕಟ್ಟೆಗೆ ಬೇಕಾದ ಮಾಲುಗಳನ್ನು ಮಾತ್ರ ಸೃಷ್ಟಿಸುವ ಒತ್ತಡವನ್ನು ಹೇರಲಾಗುತ್ತಿದೆ. ಈ ಸವಾಲನ್ನು ನಾವೆಲ್ಲರೂ ಅತ್ಯಂತ ಸಮನ್ವಯದಿಂದ ಎದುರಿಸಬೇಕಿದೆ.

ರಾಜಕೀಯ ಮಾರುಕಟ್ಟೆ, ಕಾರ್ಪೊರೇಟ್ ಮಾರುಕಟ್ಟೆಯ ಒತ್ತಡಗಳಿಗೆ ಮಣಿಯಬಾರದು. ಸರ್ಕಾರಿ ಶಾಲೆಗಳ, ಸರ್ಕಸರಿ ಶಿಕ್ಷಕರ ವಿಚಾರದಲ್ಲಿ ಎರಡು ಮುಖ್ಯ ಸಂಗತಿಗಳನ್ನು ಮುಂದಿಟ್ಟು ಮಾತು ಮುಗಿಸುತ್ತೇನೆ. ಶಾಲೆಗಳಲ್ಲಿ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ನಡೆಯುತ್ತಿರುವ ಪ್ರಕರಣಗಳು



ಹೆಚ್ಚೆಚ್ಚು ವರದಿ ಆಗುತ್ತಿವೆ. ಆದರೆ, ಒಂದು ಸಮೀಕ್ಷೆಯ ಪ್ರಕಾರ ಸರ್ಕಾರಿಗಳಲ್ಲಿ ಇಂಥಾ ದೌರ್ಜನ್ಯ ಪ್ರಕರಣಗಳು ಖಾಸಗಿ ಶಾಲೆಗಳಿಗೆ ಹೋಲಿಸಿದರೆ ಅತ್ಯಂತ ಕಡಿಮೆ ಇದೆ. ಹೀಗಾಗಿ ಮಕ್ಕಳಲ್ಲಿ ಲಿಂಗ ಸೂಕ್ಷ್ಮತೆ, ಸಹಬಾಳ್ವೆ, ಸಹಿಷ್ಣತೆಯನ್ನು ಬೆಳೆಸುವಲ್ಲಿ ಸರ್ಕಾರಿ ಶಾಲೆಗಳ ಶಿಕ್ಷಕರು ಬಹಳ ಮುಂದಿದ್ದಾರೆ. ಅದಕ್ಕೇ ಹೇಳ್ತೋದು, ಖಾಸಗಿ ಶಾಲೆಗಳ ಕಟ್ಟಡದ ಗುಣಮಟ್ಟ, ಸರ್ಕಾರಿ ಶಾಲೆಗಳ ಶಿಕ್ಷಕರ ಗುಣಮಟ್ಟ ಉನ್ನತ ಮಟ್ಟದ್ದಾಗಿರುತ್ತದೆ.

ಈಗ ನಮ್ಮ ಸರ್ಕಾರ ಒಂದು ಹೊಸ ಕಾರ್ಯಕ್ರಮ ರೂಪಿಸಿದೆ. ನನ್ನ ಶಾಲೆ ನನ್ನ ಜವಾಬ್ದಾರಿ" ಎನ್ನುವ ಕಾರ್ಯಕ್ರಮ. ಸರ್ಕಾರಿ ಶಾಲೆಗಳಲ್ಲಿ ಓದಿದ ಲಕ್ಷಾಂತರ ಮಂದಿ ತಾವು ಓದಿದ ಶಾಲೆಗಳಿಗೆ ತಮ್ಮ ಕೈಲಾದ ನೆರವು ನೀಡುತ್ತಿದ್ದಾರೆ. ಹಲವರು ತಾವು ಓದಿದ ಶಾಲೆಗಳನ್ನು ದತ್ತು ಕೂಡ ಪಡೆದಿದ್ದಾರೆ. ಕೆಲವರು ಕೊಠಡಿಗಳನ್ನು ಟ್ಟಿಸಿಕೊಟ್ಟಿದ್ದಾರೆ. ಇಂಥಾ ಕಾಳಜಿಗಳು ಹೆಚ್ಚೆಚ್ಚು ವ್ಯಕ್ತ ಆಗುವುದು ಸರ್ಕಾರಿ ಶಾಲೆಗಳಲ್ಲಿ ಓದಿದವರಿಂದಲೇ.

ನಾನು ಕೂಡ ಕೋಲಾರದಲ್ಲಿ ಓದಿದ್ದು ಸರ್ಕಾರಿ ಶಾಲೆಯಲ್ಲೇ. ಈಗ ಆ ಶಾಲೆಗೆ ಅಪಾರ ನೆರವು ಒದಗಿಸಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೂ ತಾವು ಓದಿದ ಶಾಲೆಗೆ ನೆರವು ನೀಡಿದ್ದಾರೆ. ಇದೀಗ ತಣ್ಣಗಿನ ಚಳಚಳಿಯ ರೂಪ ಪಡೆದುಕೊಂಡಿದೆ. ಈ ಕಾರ್ಯಕ್ರಮಕ್ಕೆ ನನ್ನನ್ನು ಆಹ್ವಾನಿಸುವ ಮೂಲಕ ನನ್ನ ಶಾಲೆ ಮತ್ತು ಶಿಕ್ಷಕರನ್ನು ಸ್ಮರಿಸಲು, ವಂದಿಸಲು ಅವಕಾಶ ಮಾಡಿ ಕೊಟ್ಟಿದ್ದಕ್ಕಾಗಿ ಮೀಡಿಯಾ ಕನೆಕ್ಟ್‌ನ ದಿವ್ಯಾ ರಂಗೇನಹಳ್ಳಿ ಮತ್ತು ಪುಣ್ಯ ಫೌಂಡೇಷನ್‌ಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಆದಿಚುಂಚನಗಿರಿ ಮಹಾ ಸಂಸ್ಥಾನದ ಜಗದ್ಗುರು ಶ್ರೀ ನಿರ್ಮಲಾನಂದ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಸತಿ ಸಚಿವರ ಮಾಧ್ಯಮ ಸಂಯೋಜನ ಲಕ್ಷ್ಮೀನಾರಾಯಣ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

### ಇಂದು ಎಸ್.ಎಸ್.ಎಲ್.ಸಿ. ಪರೀಕ್ಷೆ–1ರ

# ಫಲಿತಾಂಶ ಪ್ರಕಟಣೆ: ಸಚಿವ ಮಧು ಬಂಗಾರಪ್ಪ

**ಬೆಂಗಳೂರು, ಮೇ.1–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯು ಎಸ್.ಎಸ್.ಎಲ್.ಸಿ. ಪರೀಕ್ಷೆ–1 ರ ಫಲಿತಾಂಶವನ್ನು ನಾಳೆ ಪ್ರಕಟಿಸಲಾಗುವುದು. ಕಳೆದ ಮಾ.21 ರಿಂದ ಏ.4 ವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆ– 1 ಅನ್ನು ನಡೆಸಲಾಯಿತು. ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯ ಮಾಪನ ಕಾರ್ಯವು ಮುಕ್ತಾಯವಾಗಿದ್ದು, ನಾಳೆ ಫಲಿತಾಂಶ ಪ್ರಕಟಿಸುವುದಾಗಿ ಮಂಡಳಿ ಇದೆ. ಎಸ್.ಎಸ್.ಎಲ್.ಸಿ ಪರೀಕ್ಷೆ– 1 ರ ಫಲಿತಾಂಶವನ್ನು ಇಂದು ಬೆಳಿಗ್ಗೆ 11–30 ಗಂಟೆಗೆ ಮಂಡಲಿಯಲ್ಲಿ ನಡೆಯುವ ಸುದ್ದಿಗೋಷ್ಠಿಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಮಧು ಬಂಗಾರಪ್ಪ ಅವರ ಫಲಿತಾಂಶ ವನ್ನು ಪ್ರಕಟಿಸಲಿದ್ದಾರೆ. ಫಲಿತಾಂಶವನ್ನು http://



karresults.nic.in ಜಾಲತಾಣದಲ್ಲಿ ನಾಳೆ ಮಧ್ಯಾಹ್ನ 12–30 ಗಂಟೆಯ ನಂತರ ವೀಕ್ಷಿಸಲು ಬಹಿಷ್ಕೃತ ಮಂಡಳಿ ಪ್ರಕಟಣೆ ಇರುತ್ತದೆ.

# ಬೆಂಗಳೂರಿನಲ್ಲಿ ಆಟೋ ದರ ಏರಿಕೆ: ಮೇ 13ರಂದು ಆದೇಶ ಸಾಧ್ಯತೆ

**ಬೆಂಗಳೂರು, ಮೇ.1–** ಬೆಂಗಳೂರು ಆಟೋ ಮೀಟರ್ ದರ ಏರಿಕೆ ಮಾಡುವಂತೆ 3 ವರ್ಷಗಳಿಂದ ಆಟೋ ಚಾಲಕ ಹಾಗೂ ಕಳೆದ ಸಂಘಟನೆಗಳು ನಿರಂತರ ಹೋರಾಟ ಮಾಡುತ್ತಾ ಬಂದಿ ದ್ದು, ಇದೀಗ ದರ ಏರಿಕೆ ಸಾಧ್ಯತೆ ಇದೆ.

ನಂದಿನಿ ಹಾಲು, ನೀರು, ವಿದ್ಯುತ್, ಮೆಟ್ರೋ ದರ, ಪೆಟ್ರೋಲ್–ಡೀಸೆಲ್ ಸುಂಕ ಬೆಲೆ ಏರಿಕೆಯ ಬಳಿಕ ರಾಜ್ಯಸರ್ಕಾರ ಇದೀಗ 2 ವರ್ಷಗಳಲ್ಲಿ 3 ನೇ ಬಾರಿಗೆ ಮದ್ಯದ ದರ ಏರಿಕೆಗೆ ಮುಂದಾಗಿದ್ದು, ಇದರ ನಡುವೆ ಈಗ ಆಟೋ ದರ ಏರಿಕೆ ಗಾಯದ ಮೇಲೆ ಬರೆ ಎಳೆದಿದೆ.

ಆಟೋರಿಕ್ಷಾ ದರ ಏರಿಕೆಗೆ ರಿಕ್ಷಾ ಚಾಲಕರ ಮನವಿಯನ್ನು ಪುರಸ್ಕರಿಸಿ, ಆಟೋ ದರ ಏರಿಕೆ ಮಾಡಲು ಮನಸ್ಸು ಮಾಡಿದೆ. ಅಧಿಕೃತ ಆದೇಶ ಹೊರಬೀಳುವುದಷ್ಟೇ ಬಾಕಿ .

ಅನೇಕ ಅಗತ್ಯ ವಸ್ತುಗಳ ದರ ಏರಿಕೆಯಾಗಿದೆ. ಹೀಗಾಗಿ ಆಟೋ ಮೀಟರ್ ದರ ಏರಿಸಲು ಕೂಡಲೇ ಗ್ರೀನ್ ಸಿಗ್ನಲ್ ಅಳವಡಿಸಲಾಗಿದೆ ಎಂದು ಆಟೋ ಚಾಲಕರು ಆಗಮಿಸಿದ್ದಾರೆ.

ಸದ್ಯ ಬೆಂಗಳೂರಿನಲ್ಲಿ ಕನಿಷ್ಠ ದರ 30 ರಿಂದ 35



ರೂಪಾಯಿಗೆ, ಅಂದರೆ 5 ರೂಪಾಯಿ ಏರಿಕೆಯಾಗುವ ಸಾಧ್ಯತೆಯಿದೆ. ನಂತರದ ಪ್ರತಿ ಕಿಲೋಮೀಟರ್ ದರ 15 ರಿಂದ 18 ರೂಪಾಯಿಗೆ, ಅಂದರೆ 3 ರೂಪಾಯಿ ಏರಿಕೆಯಾಗಲಿದೆ.

**ಆಟೋ ದರ ಏರಿಕೆಗೆ ಜಿಲ್ಲಾಧಿಕಾರಿ ಸಮ್ಮತಿ!**


ಮಾರ್ಚ್ 12ರಂದು ದರ ಏರಿಕೆ ಸಂಬಂಧ ಹಲವು ಆಟೋ ಸಂಘಟನೆಗಳು ನಡೆದಿದ್ದವು. ಸಭೆಯಲ್ಲಿ ಆಟೋ ದರ ಪರಿಷ್ಕರಣೆ ಸಮಿತಿಯು ಆಟೋ ಚಾಲಕರ ಅಹವಾಲು ಕೇಳಿತ್ತು. ಜೊತೆಗೆ ಸಭೆಯ ನಿರ್ಣಯವನ್ನು ಜಿಲ್ಲಾಧಿಕಾರಿಗಳಿಗೆ ಒಪ್ಪಿಸಿತ್ತು. ಇದೀಗ ಜಿಲ್ಲಾಧಿಕಾರಿಗಳ ದರ ಏರಿಕೆಗೆ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬಿಎಂಟಿಸಿ , ನಮ್ಮ ಮೆಟ್ರೋ ಸೇರಿದಂತೆ ಎಲ್ಲಾ ಸಾರಿಗೆಗಳ ದರ ಏರಿಕೆ ಆಗಿದೆ. ಆಟೋ ಮೀಟರ್ ದರ ಏರಿಕೆಗೆ ಅನುಮತಿ ನೀಡಲಿ. ಆಟೋ ಚಾಲಕರಿಗೂ ಜೀವನ ಮಾಡಬೇಕಲ್ಲವೇ ಎಂದು ಆಟೋ ಪ್ರಯಾಣಿಕ ರಾಜಶೇಖರ ಎಂಬವರು ಅಭಿಪ್ರಾಯಪಟ್ಟಿದ್ದಾರೆ.

ಒಟ್ಟಿನಲ್ಲಿ ಚಾಲಕ ದರ ಏರಲು ನಡೆದ ಸಭೆಯಲ್ಲಿ ಎಲ್ಲಾ ಆಟೋ ಸಂಘಟನೆಗಳು ದರ ಏರಿಕೆಗೆ ಒಪ್ಪಿಗೆ ಸೂಚಿಸಿವೆ. ಮೇ 13 ರಂದು ಆಟೋ ದರ ಏರಿಕೆ ಎಷ್ಟು ಎಂದು ಅಧಿಕೃತ ಆದೇಶ ಹೊರಬೀಳುವ ಸಾಧ್ಯತೆ ಇದೆ.

### ಕಾಂಗ್ರೆಸ್ ಸರ್ಕಾರ ಆರ್ಥಿಕ, ಸಾಮಾಜಿಕ ಸಮೀಕ್ಷೆ

# ಕೇಂದ್ರದವರು ಜಾತಿ ಗಣತಿ ಮಾಡುತ್ತಿರುವುದು ಯಾವ ಸ್ವಾರ್ಥಕ್ಕೆ: ಸಚಿವ ಕೆ.ಎನ್.ರಾಜಣ್ಣ



**ಬೆಂಗಳೂರು, ಮೇ.1–** 'ರಾಜ್ಯದ ಕಾಂಗ್ರೆಸ್ ಸರ್ಕಾರ ಆರ್ಥಿಕ, ಸಾಮಾಜಿಕ ಸಮೀಕ್ಷೆ ಮಾಡಿದಾಗ ಸ್ವಾರ್ಥಕ್ಕಾಗಿ, ಓಲೈಕೆಗಾಗಿ ಮಾಡಿದ್ದಾರೆ ಎಂದು ಬಿಜೆಪಿಯವರು ಹೇಳಿಕೆ ನೀಡಿದ್ದರು. ಈಗ ಕೇಂದ್ರದವರು ಜಾತಿ ಗಣತಿ ಮಾಡಲು ಹೊರಟಿದ್ದಾರಲ್ಲ, ಯಾವ ಸ್ವಾರ್ಥಕ್ಕಾಗಿ' ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಪ್ರಶ್ನಿಸಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಕೇಂದ್ರ ಸರ್ಕಾರ ಜಾತಿ ಗಣತಿಗೆ ನಿರ್ಧಾರ ಮಾಡಿರುವುದು ಸ್ವಾಗತಾರ್ಹ. ಈ ವಿಚಾರದಲ್ಲಿ ಕೇಂದ್ರ ಸರ್ಕಾರ ಬಹಳ ಹಿಂದೆ ಇದೆ. ಸಿದ್ದರಾಮಯ್ಯ ಈಗಾಗಲೇ ಅದನ್ನು ಮಾಡಿ ಮುಗಿಸಿದ್ದಾರೆ' ಎಂದರು.'ಆರ್ಥಿಕ, ಸಾಮಾಜಿಕ ಸಮೀಕ್ಷಾ (ಜಾತಿ ಗಣತಿ) ವರದಿಯನ್ನು ಸಚಿವ ಸಂಪುಟದ ಮುಂದೆ ಇಟ್ಟಾಗ ಯಾರೂ ವಿರೋಧ ಮಾಡಿಲ್ಲ. ವರದಿಗೆ ವಿರುದ್ಧವಾದ ಅಭಿಪ್ರಾಯ ನೀಡಿಲ್ಲ. ಯಾರಿಗೂ ಅನ್ಯಾಯ ವಾಗದಂತೆ ನೋಡಬೇಕು ಎಂದು ಹೇಳಿದ್ದರು.

ಇದಕ್ಕೆ ವಿರೋಧ ಪಕ್ಷದವರು ವರದಿ ಬಿಡುಗಡೆಗೆ ಸರ್ಕಾರ ಸಿದ್ಧವಿಲ್ಲ ಎಂದು ಆರೋಪ ಮಾಡಿದರು. ವರದಿ ಕಳೆದು ಹೋಗಿದೆ ಎಂದರೆ ಬಿಜೆಪಿಯವರಿಗೆ ಹೋಗಿ ಹುಡುಕಿಕೊಂಡು ಬರೋದಕ್ಕೆ ಹೇಳಿ. ಕಳೆದು ಹೋಗಿದೆ ಎಂದು ಸುಳ್ಳು ಹೇಳಿ ತಪ್ಪು ಸಂದೇಶ ನೀಡುವ ಕೆಲಸ ನಡೆಯುತ್ತಿದೆ' ಎಂದು ದೂರಿದರು.

'ಜಾತಿಗಣತಿಯ 8 ಸಂಪುಟಗಳನ್ನು ಎಲ್ಲ ಸಚಿವರಿಗೆ ನೀಡಲಾಗಿದೆ. ಯಾವ ವರದಿಯೂ ಕಳೆದು ಹೋಗಿಲ್ಲ, ಎಲ್ಲವೂ ಇವೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

'ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಥಿಮಿತತೆ ಕಳೆದುಕೊಂಡಿದ್ದಾರೆ ಎಂದವರ ಸ್ಥಿಮಿತತೆಯೇ ಸರಿ ಇಲ್ಲ. ಕಾಂಗ್ರೆಸ್ ಶಾಲು ಹಾಕಿಕೊಂಡು ನಮ್ಮ ಕಾರ್ಯಕ್ರಮದಲ್ಲಿ ಕುಳಿತುಕೊಂಡು ಧಿಕ್ಕಾರ ಕೂಗಿದರೆ ಅವರನ್ನು ಏನನ್ನಬೇಕು. ಪೊಲೀಸ್ ಅಧಿಕಾರಿ ಮೇಲೆ ಸಿದ್ದರಾಮಯ್ಯ ಅವರು ಕೈ ಎತ್ತಿಲ್ಲ. ಏಕವಚನದಲ್ಲಿ ಅವರು ಯಾರನ್ನು ಕರೆದಿಲ್ಲ. ಪ್ರೀತಿಯಿಂದ ಕರೆದು ಕೈ ಎತ್ತಿದ್ದಾರೆ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿ ಸಿದರು.

'ಪಹಲ್ಗಾಮ್ ಉಗ್ರರ ದಾಳಿ ಬಗ್ಗೆ ಪ್ರತಿಕ್ರಿಯಿಸಿದ ರಾಜಣ್ಣ, 'ತಪ್ಪು ಮಾಡಿದವರಿಗೆ ಶಿಕ್ಷೆ ಆಗಲೇಬೇಕು ಎನ್ನುವುದು ದೇಶದ ಜನರ ಭಾವನೆ. ನಾನು ಕೂಡ ದೇಶದ ಪ್ರಜೆಗಳಲ್ಲಿ ಒಬ್ಬ' ಎಂದರು.

# ಪಾಕ್‌ಗೆ ಟೊಮ್ಯಾಟೋ ಸರಬರಾಜು ನಿಲ್ಲಿಸಲು ಕರ್ನಾಟಕದ ರೈತರ ನಿರ್ಧಾರ

**ಬೆಂಗಳೂರು, ಮೇ.1–** ಪಹಲ್ಗಾಮ್‌ನಲ್ಲಿ ಉಗ್ರರು ದಾಳಿ ನಡೆಸಿದ್ದಾರೆ. ಇದಕ್ಕೆ ಪಾಕಿಸ್ತಾನದ ಕುಮ್ಮಕ್ಕು ಇದೆ ಎನ್ನಲಾಗುತ್ತಿದೆ. ಇಂತಹ ಪಾಕಿಸ್ತಾನಕ್ಕೆ ಒಂದೇ ಒಂದು ಟೊಮ್ಯಾಟೋ ಕೊಡೋದಿಲ್ಲ ಅಂತ ಕರ್ನಾಟಕದ ರೈತರು ನಿರ್ಧರಿಸಿದ್ದಾರೆ. ಕೋಲಾರದಲ್ಲಿ ರೈತನೊಬ್ಬ ಮಾತನಾಡಿ, ಪಹಲ್ಗಾಮ್ ಉಗ್ರರ ದಾಳಿಗೆ ಕಾರಣವಾದಂತ ಪಾಕಿಸ್ತಾನಕ್ಕೆ ಟೊಮ್ಯಾಟೋ ಸರುಬರಾಜು ನಿಲ್ಲಿಸೋದಾಗಿ ತಿಳಿಸಿದರು.ಈಗಾಗಲೇ ಕೋಲಾರದಿಂದ ಪಾಕಿಸ್ತಾನಕ್ಕೆ ಟನ್ ಗಟ್ಟಲೇ ಸರಬರಾಜು ಮಾಡಲಾಗು ತ್ತಿದ್ದಂತ ಟೊಮ್ಯಾಟೋ ನಿಲ್ಲಿಸಲಾಗಿದೆ. ಪಹಲ್ಗಾಮ್ ದಾಳಿಯ ಬಳಿಕ ಕೇಂದ್ರ ಸರ್ಕಾರದ ನಿರ್ದೇಶನಕ್ಕೆ ಬದ್ಧವಾಗಿದ್ದೇವೆ ಎಂದರು. ಮಾನವೀಯತೆ ದೃಷ್ಟಿಯಿಂದ ಟೊಮ್ಯಾಟೋ ಕೊಡುತ್ತೇವೆ. ಆದರೇ ಕಾಶ್ಮೀರದ ಪಹಲ್ಗಾಮ್ ಮೇಲೆ ಉಗ್ರರು ನಡೆಸಿದ ನಂತ್ರ ಪಾಕಿಸ್ತಾನಕ್ಕೆ ಟೊಮ್ಯಾಟೋ ಸರಬರಾಜನ್ನೇ ನಿಲ್ಲಿಸುವುದಾಗಿ ತಿಳಿಸಿದರು.

# ಓಂ ಪ್ರಕಾಶ್ ಕೊಲೆ: ತನಿಖೆ ವೇಳೆ ಆಘಾತಕಾರಿ ಮಾಹಿತಿ

**ಬೆಂಗಳೂರು, ಮೇ.1–** ನಿವೃತ್ತ ಡಿಜಿಪಿ ಓಂ ಪ್ರಕಾಶ್ ಕೊಲೆ ಪ್ರಕರಣದಲ್ಲಿ ಸಿಸಿಬಿ ಪೊಲೀಸರ ತನಿಖೆ ವೇಳೆ ಆಘಾತಕಾರಿ ಮಾಹಿತಿಗಳು ಬೆಳಕಿಗೆ ಬಂದಿವೆ.

ಓಂ ಪ್ರಕಾಶ್ ತಮ್ಮ ಕೊನೆಯ 20–25 ನಿಮಿಷಗಳನ್ನು ರಕ್ತದ ಮಡುವಿನಲ್ಲಿ ನರಳಾಡುತ್ತಾ ಕಳೆದು, ಜೀವ ಬಿಟ್ಟಿದ್ದಾರೆ. ತನಿಖೆಯಿಂದ ಬಯಲಾದ ವಿವರಗಳ ಪ್ರಕಾರ, ಓಂ ಪ್ರಕಾಶ್ ಅವರ ಪತ್ನಿ ಪಲ್ಲವಿ ಚಾಕು ಮತ್ತು ಗಾಜಿನ ಬಾಟಲಿಯಿಂದ ಚುಚ್ಚಿ ಭೀಕರವಾಗಿ ಹಲ್ಲೆ ಮಾಡಿದ್ದಾರೆ.

ಈ ದಾಳಿಯಿಂದ ಓಂ ಪ್ರಕಾಶ್ ದೇಹದ ಹಲವೆಡೆ ಗಾಯಗೊಂಡು ತೀವ್ರ ರಕ್ತಸ್ರಾವಕ್ಕೊಳಗಾಗಿದ್ದರು. ರಕ್ತದ ಮಡುವಿನಲ್ಲಿ ಒದ್ದಾಡುತ್ತಿರುವಾಗ, ಪಲ್ಲವಿ ರಕ್ತದ ಮೇಲೆ ಹಾರ್ಪಿಕ್ ಸುರಿದಿದ್ದಾರೆ. ಇದರಿಂದ ಓಂ ಪ್ರಕಾಶ್ ತೀವ್ರ ಉರಿಯಿಂದ ಮತ್ತಷ್ಟು ನರಳಾಡಿದ್ದಾರೆ. ಅಷ್ಟಕ್ಕೇ ನಿಲ್ಲದೇ, ಪಲ್ಲವಿ ಖಾರದ ಪುಡಿಯನ್ನು ಎರಚಿದ್ದಾರೆ.

ನಂತರ, ಓಂ ಪ್ರಕಾಶ್ ಅವರ ಮೃತದೇಹವನ್ನು ಬ್ಲಾಂಕೆಟ್‌ನಲ್ಲಿ ಸುತ್ತಿದ್ದಾರೆ. ಕೊಲೆಯ ನಂತರ ಮನೆಯಾದ್ಯಂತ ರಕ್ತಸಿಕ್ತವಾಗಿತ್ತು. ಪೊಲೀಸರು ಮನೆಯ ಮೂರು–ನಾಲ್ಕು ಕೊಠಡಿಗಳಲ್ಲಿ ಪಲ್ಲವಿಯ ಹೆಜ್ಜೆ ಗುರುತುಗಳನ್ನು ಮತ್ತು ಬ್ಲಾಂಕೆಟ್‌ಗಳಲ್ಲಿ ರಕ್ತದ ಕಲೆಗಳನ್ನು ಪತ್ತೆ ಮಾಡಿದ್ದಾರೆ. ದಿಕ್ಕು ತೋಚದೆ ಪಲ್ಲವಿ ಮನೆಯಾದ್ಯಂತ ಓಡಾಡಿ ದ್ದಾರೆ ಎಂಬುದು ತನಿಖೆಯಿಂದ ತಿಳಿದು ಬಂದಿದೆ.

# ಕಾನೂನು ಉಲ್ಲಂಘಿಸಿದ ಸಮರ್ ಇಂಟರ್ ಇಸ್ಲಾಮಿಕ್ ಸ್ಕೂಲ್ ರದ್ದತಿಗೆ ಆಗ್ರಹ

**ಬೆಂಗಳೂರು, ಮೇ.1–** ಹೆಗಡೆ ನಗರದ ಸಮರ್ ಇಂಟರ್‌ನೆಟ್ ಇಸ್ಲಾಮಿಕ್ ಸ್ಕೂಲ್ (ಜಮೀಯಾ ಮೊಹಮ್ಮದೀಯ ಎಜುಕೇಷನ್ ಸೊಸೈಟಿ –ಮುಂಬೈ) ಭಾರೀ ಅಕ್ರಮಗಳಲ್ಲಿ ತೊಡಗಿದ್ದು, ನೂರಾರು ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿದೆ. ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರು, ಹಲವು ನೋಟಿಸ್‌ಗಳನ್ನು ಈ ಸಂಸ್ಥೆಗೆ ನೀಡಿದ್ದು, ಈವರೆಗೆ ಪೂರಕ ದಾಖಲೆ ಮತ್ತು ಮಾಹಿತಿ ಒದಗಿಸಿಲ್ಲ. ಎಲ್ಲಾ ನೀತಿ, ಗಾಳಿಗೆ ತೂರಿದ್ದು, ಶಿಕ್ಷಣ ಇಲಾಖೆಗೆ ಸೆಡ್ಡು ಹೊಡೆದಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಕ್ಷಣಾ ವೇದಿಕೆ ಚಾಮರಾಜಪೇಟೆ ಘಟಕದ ಅಧ್ಯಕ್ಷ ಚಾನ್ ಪಾಷ, ಈ ಸಂಸ್ಥೆ ನೆಲದ ಕಾನೂನು ಉಲ್ಲಂಘನೆ ಹೆಜ್ಜೆ ಹೆಜ್ಜೆಗೂ ತಪ್ಪುಗಳನ್ನು ಮಾಡುತ್ತಿದೆ. ವಿದ್ಯಾರ್ಥಿಗಳ ಹಿತ ದೃಷ್ಟಿಯಿಂದ ಸೂಕ್ತ ಮಾಹಿತಿ ಒದಗಿಸುವಂತೆ




ಶಿಕ್ಷಣ ಇಲಾಖೆ ಹಲವು ಬಾರಿ ನೀಡಿದ ನಿರ್ದೇಶನವನ್ನು ಗಣನೆಗೆ ತೆಗೆದುಕೊಳ್ಳುತ್ತದೆ ತೆಗೆದು ಕೊಂಡಿಲ್ಲ. ಈ ಸಂಸ್ಥೆ ಮಹಾರಾಷ್ಟ್ರ ಶಿಕ್ಷಣದಿಂದಲೂ ಸಹ ನೋಂದಣಿ ಯಾಗಿಲ್ಲ ಎಂಬುದು ಮಾಹಿತಿ ಹಕ್ಕು ಕಾಯ್ದೆಯಿಂದ ತಿಳಿದು ಬಂದಿದೆ.

ರಾಜ್ಯದಲ್ಲೂ ವಿವಿಧ ಇಲಾಖೆಗಳಿಗೆ ಸುಳ್ಳು ಮಾಹಿತಿ ನೀಡಿ , ಮೋಸ ವಂಚನೆ ಮಾಡುತ್ತಿದೆ. ಈ ಶಾಲೆಯನ್ನು 'ಜಾಮಿಯಾ ಮೊಹಮ್ಮದೀಯ ಮನ್ಸೂರ' ಎಂಬ ಆಡಳಿತ ಮಂಡಳಿ ಯಿಂದ ನೋಂದಾಯಿಲಾಗಿದೆ. ಶಿಕ್ಷಣ ಇಲಾಖೆಗೆ ಶಾಲಾ ಆಡಳಿತ ಮಂಡಳಿಯ ಹೆಸರನ್ನು ಜಾಮೀಯ ಮಹಮದೀಯ ಎಜಿಕೇಷನ್ ಸೊಸೈಟಿ ಎಂದು ವಿವರಗಳನ್ನು ಒದಗಿಸಲಾಗಿದೆ.

ಒಂದು ಶಾಲೆ ನಡೆಸಲು ಮೂರು ಆಡಳಿತದ ಹೆಸರಿನಿಂದ ನೋಂದಣಿ ಭಾರೀ ಸಂಶಯಕ್ಕೆ ಮಂಡಳಿ. ಈ ಶಾಲೆಯವರು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮದರಸಗಳಿಗೆ ಗುಣಮಟ್ಟದ ವಿಧ್ಯಾಭ್ಯಾಸ ನೀಡುವ ಯೋಜನೆಡಿ 2017–2018ನೇ ಸಾಲಿನಲ್ಲಿ ಜಾಮೀಯ ಮಹಮದೀಯ ಮನ್ಸೂರ್ ಹೆಸರಿನಲ್ಲಿ ಮತ್ತು ಜಾಮೀಯ ಮಹಮ್ಮದೀಯ ಎಜುಕೇಷನ್ ಸೊಸೈಟಿ ಪರವಾಗಿ 10 ಲಕ್ಷ ರೂಗಳ ಅನುದಾನ ಪಡೆದಿದ್ದಾರೆ. ಅನುದಾನ ರಹಿತ ಶಾಲೆ ದಾಖಲಾಗಿದ್ದರೂ ಸರ್ಕಾರದಿಂದ ಅನುದಾನ ಪಡೆದಿ ರುವುದು ಭಾರೀ ವಂಚನೆಯಾಗಿದೆ.

ಆದ್ದರಿಂದ ಈ ಶಾಲೆಯ ಪರವಾನಗಿ ರದ್ದುಪಡಿಸಿ ಮಕ್ಕಳ ರಕ್ಷಣೆ, ಮತ್ತು ಸರ್ಕಾರಕ್ಕೆ ಆಗುತ್ತಿ ರುವ ಮೋಸವನ್ನು ತಡೆಯಬೇಕು ಎಂದು ಪಾಷ ಹೇಳಿದ್ದಾರೆ.




ಬೆಂಗಳೂರಿನ ಟೌನ್ ಹಾಲ್‌ನಲ್ಲಿ ಗುರುವಾರ ಕರ್ನಾಟಕ ಕಾರ್ಮಿಕರ ಸಂಘ ಆಯೋಜಿಸಿದ್ದ ಮೇ ದಿನಾಚರಣೆಯನ್ನು ನ್ಯಾಯಮೂರ್ತಿ ವಿ. ಗೋಪಾಲಗೌಡ ಉದ್ಘಾಟಿಸಿದರು.

# ಶರಣರ ವಚನಗಳ ನಿರಂತರ ಸ್ಮರಣೆಗೆ 'ವಚನ ಮಂಟಪ' ನಿರ್ಮಾಣ: ಡಾ.ಶರಣಪ್ರಕಾಶ ಪಾಟೀಲ್

**ಕಲಬುರಗಿ, ಮೇ.1–** ಹನ್ನೆರಡನೇ ಶತಮಾನದಲ್ಲಿ ಜಾತಿ ರಹಿತ ಸಮ–ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಬದುಕಿನುದ್ದಕ್ಕೂ ಸರ್ವ ಜೀವಿಗೂ ಲೇಸನ್ನೆ ಬಯಸಿದ್ದ ಬಸವಣ್ಣ ಮತ್ತು ಬಸವಾದಿ ಶರಣರ ವಚನಗಳು ಇಡೀ ವಿಶ್ವಕ್ಕೆ ಪರಿಚಯಿಸುವ ನಿಟ್ಟಿನಲ್ಲಿ ಕಲಬುರಗಿಯಲ್ಲಿ ವಚನ ಮಂಟಪ ನಿರ್ಮಾಣ ಮಾಡಲಾಗುವುದು ಎಂದುರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶ ಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೋವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಯಂತ್ಯೋತ್ಸವ ಸಮಿತಿಯ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಜಗತ್ ವೃತ್ತದಲ್ಲಿರುವ ಸಾಂಸ್ಕೃತಿಕ ನಾಯಕ ಬಸವೇಶ್ವರರ ಅಶ್ವಾರೋಹಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ವೇದಿಕೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಕಳೆದ 2024–25ನೇ ಸಾಲಿನ ರಾಜ್ಯ ಸರ್ಕಾರದ ಆಯವ್ಯಯದಲ್ಲಿ ಇದನ್ನು ಘೋಷಿಸಿದ್ದು, ಕೂಡಲೆ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದಾರೆ. ಹೀಗಾಗಿ ಜಿಲ್ಲಾಡಳಿತದಿಂದ ನೀಲಿ ನಕ್ಷೆ ತಯಾರಿಸುವ ಕೆಲಸ ನಡೆದಿದೆ ಎಂದರು.



ಕಲಬುರಗಿ ನಗರದ ಜಗತ್ ವೃತ್ತದಲ್ಲಿ ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಸವ ಜಯಂತ್ಯೋತ್ಸವ ಸಮಿತಿ ಸಂಯುಕ್ತಾ ಆಶ್ರಯದಲ್ಲಿ ಆಯೋಜಿಸಿದ ಬಸವ ಜಯಂತಿ ಕಾರ್ಯಕ್ರಮವನ್ನು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಉದ್ಘಾಟಿಸಿದರು. ಶಾಸಕರಾದ ಬಿ.ಆರ್.ಪಾಟೀಲ್, ಎಂ.ವೈ.ಪಾಟೀಲ್, ಅಲ್ಲಮಪ್ರಭು ಪಾಟೀಲ್, ಶಶೀಲ್ ನಮೋಶಿ, ಶರಣಕುಮಾಖು ಮೋದಿ, ಬಿಜಿ ಪಾಟೀಲ್ ಮುಂತಾದವರಿದ್ದರು.

ಯಾರ ಹಂಗಿಲ್ಲದೆ ಸಹಬಾಳ್ವೆಯ ಜೀವನ ನಡೆಸಿದ ಬಸವಾದಿ ಶರಣರ ಜೀವನ ನಮಗೆಲ್ಲ ಆದರ್ಶ ಪ್ರಾಯವಾಗಿದೆ. ಅಕ್ಕಮಹಾದೇವಿ, ಸತ್ಯಕ್ಕ, ಐದಕ್ಕಿ ಲಕ್ಕಮ್ಮ, ಮೋಳಿಗೆ ಮಾರಯ್ಯ ಹೀಗೆ ಅನೇಕ ಶರಣರು ಮನುಕುಲದ ಉದ್ದಾರಕ್ಕೆ ದುಡಿದಿದ್ದಾರೆ. ಬಸವಾದಿ ಶರಣರ ವಚನಗಳಿಗೆ ಬದಕು ಬದಲಾಯಿಸುವ ಬಹುದೊಡ್ಡ ಶಕ್ತಿ ಇದ್ದು, ಮುಂದಿನ ಪೀಳಿಗೆಗೆ ಇದನ್ನು ತಿಳಿಸಬೇಕಿದೆ. ಲಿಂಗ ಪೂಜೆ, ಬಸವ ಸಂಸ್ಕೃತಿ ಪರಂಪರೆ ಉಳಿಸಿ ಬೆಳೆಸಬೇಕಿದೆ ಎಂದು ಕರೆ ನೀಡಿದರು.

ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ ಮಾತನಾಡಿ, ಲಿಂಗ ಕಟ್ಟಿದವರೆ ಬಸವಣ್ಣನವರ ಅನುಯಾಯಿ ಆಗಬೇಕಿಲ್ಲ. ಲಿಂಗ ಕಟ್ಟದವರು ಸಹ ಅನುಯಾಯಿಗಳಾಗಬಹುದು. ಕೆಳ ವರ್ಗದಿಂದ ಬಂದ ಈ ಸಮುದಾಯ ಲಿಂಗ ಕಟ್ಟಿಕೊಂಡಿದ್ದರಿಂದಲೆ ಲಿಂಗಾಯತರಾಗಿದ್ದೇವೆ. ದಲಿತ ಕೇರಿಯಲಿ ಹುಟ್ಟಿದ ಅಂಬೇಡ್ಕರ್ ಅವರ ಜಯಂತಿಯನ್ನು ದಲಿತ ಸಂಘರ್ಷ ಸಮಿತಿಯು ನಾಡಿನಾದ್ಯಂತ ಬುದ್ದ–ಬಸವ–ಅಂಬೇಡ್ಕರ್ ಪರಿಕಲ್ಪನೆಯಲ್ಲಿ ರಾಜ್ಯದುದ್ದಕ್ಕೂ ಪಸರಿಸುವ ಕೆಲಸ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ದುಡಿಯುವ ವರ್ಗಕ್ಕೆ ಗೌರವ ನೀಡಿದ, ಪ್ರೀತಿಸಿದ, ಕೆಳ ವರ್ಗದವರನ್ನು ಅಪ್ಪಿಕೊಂಡು ಅಂತರ್ಜಾತಿ ವಿವಾಹ ಮಾಡುವ ಮೂಲಕ ಜಾತಿ ವಿನಾಶ ಮಾಡಿದ ಬಸವಣ್ಣನವರು, ಸಾಮಾಜಿಕ ಕ್ರಾಂತಿಗೆ ನಾಂದಿ ಹಾಡಿದಲ್ಲದೆ ಸಮತಾವಾದದ ಸಂದೇಶ ಸಾರಿದರು ಎಂದರು.

ಕಾಯಕ ಶರಣರ ಸಮುದಾಯವನ್ನು ಅಪ್ಪಿಕೊ ಳ್ಳಬೇಕಿದೆ: ಅಫಜಲಪೂರ ಶಾಸಕರು ಮತ್ತು ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಎಂ.ವೈ.ಪಾಟೀಲ ಅವರು, ನಮ್ಮಿಂದ ಕಾಯಕ ಶರಣರು ದೂರಾಗಿದ್ದು, ಅವರೆಲ್ಲರನ್ನು ಅಪ್ಪಿಕೊಂಡು ಒಪ್ಪಿಕೊಳ್ಳಬೇಕಿದೆ. ಬುದ್ದ ರಾಜತ್ವವನ್ನು ದಿಕ್ಕರಿಸಿ ಸಮ–ಸಮಾಜ ನಿರ್ಮಾಣಕ್ಕೆ ಕರೆ ಕೊಟ್ಟರು. ಬಸವಣ್ಣ ಜಾತಿ ಪದ್ಧತಿ ಹೋಗಲಾಡಿಸಲು ಸಾಮಾಜಿಕ ಕ್ರಾಂತಿಗೆ ಕಾರಣರಾದರು. ಬುದ್ದ ಮತ್ತು ಬಸವನ ಆಶಯಗಳನ್ನು ಸಂವಿಧಾನದ ರೂಪದಲ್ಲಿ ಜಾರಿಗೆ ತಂದು ಇಡೀ ದೇಶದ ನಿವಾಸಿಗಳಿಗೆ ಸಂವಿಧಾನ ಶಿಲ್ಪಿ ಅಂಬೇಡ್ಕರ್ ಸಮಾನತೆಯ ಹರಿಕಾರನಾಗಿ ಗುರುತಿಸಿಕೊಂಡರು. ಹಿಂದೆಲ್ಲ ಬಸವ ಜಯಂತಿ ಎತ್ತಿನ ಮೆರವಣಿಗೆ ಸೀಮಿತವಾಗಿತ್ತು. ವಚನ ಸಾಹಿತ್ಯ ಸಿಕ್ಕ ಬಳಿಕ ವೈಚಾರಿಕವಾಗಿ ಬಸವ ಜಯಂತಿ ಆಚರಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ 2024ನೇ ಸಾಲಿನ ಉತ್ತಮ ಜಿಲ್ಲಾ ಚುನಾವಣಾಧಿಕಾರಿಗಳೆಂದು ಭಾರತ ಚುನಾವಣಾ ಆಯೋಗದಿಂದ ಪ್ರಶಸ್ತಿ ಪಡೆದಿರುವ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರಿಗೆ ವೇದಿಕೆಯಲ್ಲಿ ಸಚಿವರಾದಿಯಾಗಿ ಗಣ್ಯರು ಸನ್ಮಾನಿಸಿದರು. ಇದಲ್ಲದೆ ಇತ್ತೀಚೆಗೆ ಯು.ಪಿ.ಎಸ್.ಸಿ. ಪರೀಕ್ಷೆಯಲ್ಲಿ 982ನೇ ರ್‍ಯಾಂಕ್ ಗಳಿಸಿದ ಡೋರ ಜಂಬಗಾ ಗ್ರಾಮದ ಯುವಕ ಮೋಹನಕುಮಾರ ಸಾಧನೆ ಗುರುತಿಸಿ ಅವರ ಪೋಷಕರನ್ನು ಇಂದಿಲ್ಲಿ ಸತ್ಕರಿಸಲಾಯಿತು.

# ಪಾಕ್ ವಿರುದ್ಧ ಯುದ್ಧ ಬೇಡವೆಂದು ಸಿದ್ದರಾಮಯ್ಯ ಹೇಳಲೇ ಇಲ್ಲ: ರೇವಣ್ಣ



ಕಲಬುರಗಿಯಲ್ಲಿ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ರಾಜ್ಯ ಅಧ್ಯಕ್ಷ ಎಚ್.ಎಂ.ರೇವಣ್ಣ ಮಾಧ್ಯಮಗಳೊಂದಿಗೆ ಮಾತನಾಡಿದರು.

**ಕಲಬುರಗಿ, ಮೇ.1–** ಜಮ್ಮು ಮತ್ತು ಕಾಶ್ಮೀರದಲ್ಲಿನ ಪೆಹಲ್ಗಾಮ್ ಘಟನೆಯ ಬಳಿಕ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಪಾಕಿಸ್ತಾನ್ ಜೊತೆ ಯುದ್ಧ ಬೇಡ ಎಂದು ಹೇಳಲೇ ಇಲ್ಲ. ಏನಿದ್ದರೂ ಮೊದಲು ಭದ್ರತೆ ಖಚಿತಪಡಿಸಿಕೊಂಡು ನಂತರ ಯುದ್ಧ ಮಾಡಿ ಎಂದು ಸಲಹೆ ನೀಡಿದ್ದಾರೆ ಎಂದು ಮಾಜಿ ಸಚಿವ ಹಾಗೂ ಪಂಚ ಗ್ಯಾರಂಟಿಗಳ ಅನುಷ್ಠಾನ ಸಮಿತಿಯ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ ಅವರು ಹೇಳಿದರು.

ಸುದ್ದಿಗಾರರೊಂದಿಗೆ, ಮುಖ್ಯಮಂತ್ರಿಗಳು ಯುದ್ಧ ಬೇಡ ಎಂದಿಲ್ಲ. ದೇಶದ ಅಖಂಡತೆ ಮತ್ತು ಸಾರ್ವಭೌಮತ್ವಕ್ಕೆ ಧಕ್ಕೆ ಬಂದಲ್ಲಿ ಹಾಗೂ ಅನಿವಾರ್ಯತೆ ಎನಿಸಿದರೆ ಯುದ್ಧ ಮಾಡಿ ಎಂದಿದ್ದಾರೆ. ಮೇಲಾಗಿ ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷ ಕೇಂದ್ರ ಸರ್ಕಾರದೊಂದಿಗೆ ನಿಲ್ಲುತ್ತದೆ ಎಂದು ಸ್ವತಃ ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರೇ ಸ್ಪಷ್ಟಪಡಿಸಿದ್ದಾರೆ ಎಂದರು.

ಕೇಂದ್ರ ಸರ್ಕಾರ ಯಾವುದೇ ರೀತಿಯ ನಿರ್ಧಾರ ತೆಗೆದುಕೊಂಡರೂ ತಮ್ಮ ಪಕ್ಷದ ಬೆಂಬಲ ಇರುತ್ತದೆ ಎಂದು ಹೇಳಿದ ಮೇಲೆ ಇನ್ನೇನಿದೆ. ಇಷ್ಟು ದಿನ ತೂಕಡಿಸುತ್ತಾ, ಈಗ ಅಲ್ಲಿ ಯುದ್ಧ ಇಲ್ಲಿ ಯುದ್ಧ ಅಂತಿದ್ದೀರಿ. ಹಿಂದೆ ಇಂದಿರಾ ಗಾಂಧಿ ಪಾಕಿಸ್ತಾನದ ಮೇಲೆ ಯುದ್ಧ ಮಾಡಿ 80 ಸಾವಿರ ಪಾಕಿಸ್ತಾನ್ ಸೈನಿಕರನ್ನು ಹೊಡೆದುರುಳಿಸಿದ್ದರು. ನಾವು ಮಾಡಿರುವುದರನ್ನು ನೋಡಿದರೆ ಇವರು ಏನೇನೂ ಅಲುಗಾಡಿಸುವುದಕ್ಕೆ ಆಗುವುದಿಲ್ಲ. ಬಿಜೆಪಿಯವರು ಬರೀ ಚಾಡಿ ಸುಳ್ಳು ಹೇಳಿಕೊಂಡು ತಿರುಗಾಡುತ್ತಾರೆ. ಸುಳ್ಳು ಅವರ ಮನೆಯ ದೇವರು ಎಂದು ಅವರು ಕಟುವಾಗಿ ಟೀಕಿಸಿದರು.

ಬಿಜೆಪಿ ಮತ್ತು ಜೆಡಿಎಸ್ ನಾಯಕರು ಕೇವಲ ಜನರ ಭಾವನೆಗಳ ಜೊತೆ ಆಟವಾಡುತ್ತಿದ್ದಾರೆ. ಆದರೆ ನಾವು ಜನರ ಬದುಕಿನ ಜೊತೆಗೆ ಇರುತ್ತೇವೆ. ಜನರಿಗೆ ಅನುಕೂಲ ಆಗಲಿ ಎಂದು ಐದು ಗ್ಯಾರಂಟಿ ಯೋಜನೆ ತಂದಿದ್ದೇವೆ. ಬಿಜೆಪಿಯವರು ಹೋರಾಟ ಮಾಡುವುದಕ್ಕೆ ನಮ್ಮದೇನೂ ಅಭ್ಯಂತರವಿಲ್ಲ. ಅದನ್ನು ಬಿಟ್ಟು ಸಭೆ ಕೆಡಿಸುವಂತಹ ನೀಚ ಕೆಲಸವನ್ನು ಬಿಜೆಪಿ ಮತ್ತು ರಾಷ್ಟ್ರೀಯ ಸ್ವಯಂ ಸೇವಕ ಸಂಘದವರು ಮಾಡಬಾರದು ಎಂದು ಅವರು ಒತ್ತಾಯಿಸಿದರು.

ಬೆಳಗಾವಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರ ಮೇಲೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಅವರು ಕೈ ಮಾಡಲು ಯತ್ನಿಸಿದ ಕುರಿತು ಪ್ರತಿಕ್ರಿಯಿಸಿದ ಅವರು, ಆ ಬಗ್ಗೆ ನನಗೇನೂ ಗೊತ್ತಿಲ್ಲ. ಹಾಗಾಗಿದ್ದರೆ ಅದು ಸರಿಯಲ್ಲ. ಆದರೂ ಆಡಳಿತದಿಂದ ಬೇಸರ ಆಗಿರಬಹುದು. ಹಾಗಾಗಿ, ಹೀಗೆ ವರ್ತಿಸಿರಬಹುದು ಎಂದು ಹೇಳಿದರು.

# ವಿದ್ಯುತ್, ಕುಡಿಯುವ ನೀರು, ರಸ್ತೆ ಅಭಿವೃದ್ಧಿಗೆ ಪ್ರಯತ್ನ: ಸಚಿವ ಬೋಸರಾಜು

**ರಾಯಚೂರು, ಮೇ.1–** ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಜನಪರ ಗ್ಯಾರಂಟಿ ಯೋಜನೆಗಳೊಂದಿಗೆ ಗ್ರಾಮೀಣ ಭಾಗದ ಸರ್ವಾಂಗೀಣ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನವನ್ನು ಮೀಸಲಿಟ್ಟು ಪ್ರಾಮಾಣಿಕವಾಗಿ ಪ್ರಯತ್ನಿಸಲಗುತ್ತಿದೆ. ರಾಜ್ಯದಲ್ಲಿ ನುಡಿದಂತೆ ನಡೆಯುವ ಸರ್ಕಾರ ನಮ್ಮದು. ಕ್ಷೇತ್ರದ ಅಭಿವೃದ್ಧಿಗಾಗಿ ಇನ್ನು ಹೆಚ್ಚಿನ ಅನುದಾನವನ್ನು ತರಲಾಗುವುದು ಎಂದು ಸಚಿವ ಎನ್‌ಎಸ್ ಬೋಸರಾಜು ಅವರು ತಿಳಿಸಿದರು.

ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮೈಕ್ರೋ ಯೋಜನೆ, ಕಲ್ಯಾಣ ಪಥ ಯೋಜನೆ, ಅಪೆಂಡೆಕ್ಸ್ ಯೋಜನೆ ಸೇರಿ ಒಟ್ಟು 14 ಕೋಟಿ 93 ಲಕ್ಷದ ವಿವಿಧ ಕಾಮಗಾರಿಗಳಿಗೆ ಸಚಿವ ಎನ್ ಎಸ್ ಬೋಸರಾಜು ಹಾಗೂ ಮಾನವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪಯ್ಯ ನಾಯಕ ಅವರು ಜಂಟಿಯಾಗಿ ಭೂಮಿ ಪೂಜೆ ನೆರವೇರಿಸಿದರು.



ರಾಯಚೂರು ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮೈಕ್ರೋ ಯೋಜನೆ, ಕಲ್ಯಾಣ ಪಥ ಯೋಜನೆ, ಅಪೆಂಡೆಕ್ಸ್ ಯೋಜನೆ ಸೇರಿ ಒಟ್ಟು 14 ಕೋಟಿ 93 ಲಕ್ಷದ ವಿವಿಧ ಕಾಮಗಾರಿಗಳಿಗೆ ಸಚಿವ ಎನ್ ಎಸ್ ಬೋಸರಾಜು ಹಾಗೂ ಮಾನ್ವಿ ಶಾಸಕ ಹಂಪಯ್ಯ ನಾಯಕ ಅವರು ಜಂಟಿಯಾಗಿ ಭೂಮಿಪೂಜೆ ನೆರವೇರಿಸಿದರು.

ಮಾನ್ವಿ ವಿಧಾನಸಭಾ ಕ್ಷೇತ್ರದ ಮುಸ್ಟೂರು ಕ್ರಾಸ್ ನಿಂದ ಜಾಗೀರ್ ಪನ್ನೀರ್ ಗ್ರಾಮಕ್ಕೆ ಸಂಪರ್ಕಿಸುವ ಮಾರ್ಗ ಮಧ್ಯದ ಹಳ್ಳಕ್ಕೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಮೈಕ್ರೋ ಯೋಜನೆ ಅಡಿಯಲ್ಲಿ 2 ಕೋಟಿ 60 ಲಕ್ಷ ರೂ ವೆಚ್ಚದಲ್ಲಿ ಬಾಕ್ಸ್ ಕಲ್ವರ್ಟ್ ನಿರ್ಮಾಣ ಕಾಮಗಾರಿ ಹಾಗೂ 2 ಕೋಟಿ 45 ಲಕ್ಷ ರೂ ವೆಚ್ಚದಲ್ಲಿ ಕಾತರಕಿಯಿಂದ ವಯ ಮದ್ಲಾಪುರ್ ಮೂಲಕ ಬುದ್ದಿನ್ನಿಗೆ ಸಂಪರ್ಕಿಸುವ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಿದರು.

ಕಲ್ಯಾಣ ಪಥ ಯೋಜನೆಯಡಿ 6 ಕೋಟಿ ವೆಚ್ಚದಲ್ಲಿ ಕೆ ಗುಡದಿನ್ನಿ – ಆಲ್ದಾಳ ರಸ್ತೆ ನಿರ್ಮಾಣ ಕಾಮಗಾರಿ ಹಾಗೂ ಕಲ್ಯಾಣ ಪಥ– ಇ ಯೋಜನೆಯಡಿ 2 ಕೋಟಿ ವೆಚ್ಚದಲ್ಲಿ ಸಿರವಾರ ತಾಲೂಕಿನ ಜಾಲಾಪುರ ಕ್ರಾಸ್ ನಿಂದ ಜಾಗಬಾವಿ ಗುಡದಿನ್ನಿ ಸಂಪರ್ಕಿಸುವ ರಸ್ತೆ ನಿರ್ಮಾಣ. ಎಸ್ ಸಿಪಿ ಹಾಗೂ ಟಿಎಸ್‌ಪಿ ಯೋಜನೆ ಅಡಿ ಹಳ್ಳಿ ಹೊಸೂರು ಗ್ರಾಮದ ಹಳ್ಳಕ್ಕೆ 1 ಕೋಟಿ ವೆಚ್ಚದಲ್ಲಿ ಸೇತುವೆ ನಿರ್ಮಾಣ ಕಾಮಗಾರಿ ಹಾಗೂ 75 ಲಕ್ಷ ರೂ ನಲ್ಲಿ ಹಳ್ಳಿ ಹೊಸೂರು ಗ್ರಾಮದ ಕೂಡು ರಸ್ತೆ ನಿರ್ಮಾಣ ಕಾಮಗಾರಿ ಸೇರಿ ಒಟ್ಟು 14 ಕೋಟಿ 93 ಲಕ್ಷ ರೂ ವೆಚ್ಚದ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಗ್ರಾಮೀಣ ಭಾಗದಲ್ಲಿ ವಿದ್ಯುತ್ ಸಂಪರ್ಕ, ರಸ್ತೆ ಕಾಮಗಾರಿ ಹಾಗೂ ಕುಡಿಯುವ ನೀರಿಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗಿದೆ. ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಅನುದಾನವನ್ನು ಮೀಸಲಿಡುವ ಮೂಲಕ ಗ್ರಾಮೀಣ ಭಾಗದ ಸರ್ವಾಂಗಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದರು.

ನಂತರ ಶಾಸಕ ಹಂಪಯ್ಯ ನಾಯಕ ಮಾತನಾಡಿ, ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನವನ್ನು ಮೀಸಲಿಡಲಾಗಿದೆ, ಅಧಿಕಾರಿಗಳು ಕಾಮಗಾರಿಯನ್ನು ತ್ವರಿತಗತಿಯಲ್ಲಿ ಗುಣಮಟ್ಟದೊಂದಿಗೆ ನಿರ್ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಬಳ್ಳಾರಿ ಅಂಚೆ ವಿಭಾಗಕ್ಕೆ 17 ರಾಜ್ಯ ಪ್ರಶಸ್ತಿಗಳ ಮೆರುಗು–ಪಿ.ಚಿದಾನಂದ

ಬಳ್ಳಾರಿ ಮೇ 01. ಭಾರತೀಯ ಅಂಚೆ ಇಲಾಖೆಯು 2024–25ನೇ ಅರ್ಥಿಕ ವರ್ಷದಲ್ಲಿ ಹಮ್ಮಿಕೊಂಡ ಹಲವು ಅಭಿಯಾನ ಗಳಲ್ಲಿ ಮತ್ತು ವಾರ್ಷಿಕ ನಿಗದಿತ ಗುರಿ ಸಾಧನೆಯಲ್ಲಿ ಗಣನೀಯ ಸಾಧನೆ ತೋರುವ ಮೂಲಕ ಬಳ್ಳಾರಿ ಅಂಚೆ ವಿಭಾಗವು ಅತ್ತ್ಯುತ್ತಮವಾಗಿ ಪ್ರದರ್ಶನ ನೀಡಿ ಇದೇ ಏಪ್ರಿಲ್ 29 ರಂದು ರಂದು ಅರಮನೆ ನಗರಿ ಮೈಸೂರಿನ ವಿಂಡ್ ಫ್ಲವರ್ ರೆಸಾರ್ಟ್ ನಲ್ಲಿ ಹಮ್ಮಿಕೊಂಡಿದ್ದ ?ಉನ್ನತಿ? ಕರ್ನಾಟಕ ವೃತ್ತದ 2024–25 ರ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ರಾಜ್ಯಮಟ್ಟದ ಒಟ್ಟು 17 ಬಹುಮಾನಗಳನ್ನು ತನ್ನ ಮುಡಿಗೇರಿಸಿಕೊಂಡು ಅತಿಹೆಚ್ಚು ಬಹುಮಾನ ಪಡೆದ ವಿಭಾಗವಾಗಿ ಹೊರಹೊಮ್ಮಿದೆ.

ಕರ್ನಾಟಕ ವೃತ್ತದ ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ರಾಜೇಂದ್ರ ಕುಮಾರ್ ರವರು ಅಭಿನಂದಿಸಿ, ಪ್ರಶಸ್ತಿ ಪದಕಗಳನು ವಿತರಿಸಿದರು.

ಈ ಕಾರ್ಯಕ್ರಮದಲ್ಲಿ ಬಳ್ಳಾರಿ ವಿಭಾಗವು ರಾಜ್ಯದಲ್ಲೇ ಅತಿ ಹೆಚ್ಚು ಅಂಚೆ ಉಳಿತಾಯ ಖಾತೆ ತೆರೆಯುವಲ್ಲಿ ಹಾಗೂ ನೂತನ ಅಂಚೆ ಜೀವ ವಿಮೆ ಹಣ ಸಂಗ್ರಹದಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ, ವಾರ್ಷಿಕ ನಿವ್ವಳ ಖಾತೆ ವಿಭಾಗದಲ್ಲಿ ಹಾಗೂ ರಾಷ್ಟ್ರಮಟ್ಟದ ಪತ್ರ ಲೇಖನ ಸ್ಪರ್ಧೆಯ ಅನುಷ್ಟಾನದಲ್ಲಿ ಬಳ್ಳಾರಿ ಅಂಚೆ ವಿಭಾಗ ರಾಜ್ಯಕ್ಕೆ ದ್ವಿತೀಯ ಸ್ಥಾನವನ್ನು ಅಲಂಕರಿಸಿದೆ. ಅಂಚೆ ಅಧೀಕ್ಷಕರಾದ ಪದ್ಮಶಾಲಿ ಚಿದಾನಂದ ರವರು ಪ್ರಶಸ್ತಿಗಳನ್ನು ಸ್ವೀಕರಿಸಿದರು.




ಜೀವ ವಿಮಾ ಕ್ಷೇತ್ರದಲ್ಲಿ ಉಪ ವಿಭಾಗ ಮಟ್ಟದಲ್ಲಿ ಕೂಡ್ಲಿಗಿ ಮತ್ತು ಹರಪನಹಳ್ಳಿ ಉಪ ವಿಭಾಗಗಳು ಅತ್ಯುತ್ತಮ ಸೇವೆ ನೀಡಿದ ಪ್ರಶಸ್ತಿಗೆ ಭಾಜನ ವಾದವು. ಶಶಿಕುಮಾರ್ ಹಿರೇಮಠ್ ಮತ್ತು ಶ್ರೀಕಾಂತ್ ನೀಲಕಂಠಿ ಪ್ರಶಸ್ತಿಗಳನ್ನು ಪಡೆದರು. ಪ್ರಧಾನ ಮಂತ್ರಿ ಜನ ಸುರಕ್ಷಾ ಯೋಜನೆ ನೋಂದಣಿಯಲ್ಲಿ ಬಳ್ಳಾರಿ ಪ್ರಧಾನ ಅಂಚೆ ಕಚೇರಿ ರಾಜ್ಯಕ್ಕೆ ತೃತೀಯ ಸ್ಥಾನ ಪಡೆದಿದೆ ಮತ್ತು ಅತ್ತ್ಯುತ್ತಮವಾಗಿ ಜೀವ ವಿಮೆ ಸೇವೆ ನೀಡಿದ ವಿಭಾಗದಲ್ಲಿ ಹೊಸಪೇಟೆ ಪ್ರಧಾನ ಅಂಚೆ ಕಚೇರಿ ದ್ವಿತೀಯ ಸ್ಥಾನ ಪಡೆಯಿತು. ಬಳ್ಳಾರಿಯ ರಾಜಶೇಖರ ಹಾಗೂ ಹೊಸಪೇಟೆಯ ರಾಮರಾವ್, ಸಿದ್ದಪ್ಪ ಭಾವಿಕಟ್ಟಿ ಮತ್ತು ಶಿವಾನಂದ ಅವರು ಪ್ರಶಸ್ತಿಗಳನ್ನು ಸ್ವೀಕರಿಸಿದರು.


ಅಂಚೆ ಜೀವವಿಮಾ ವಿಭಾಗದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಅಭಿಯಾನದಲ್ಲಿ ಬಳ್ಳಾರಿ ವಿಭಾಗ ರಾಜ್ಯಕ್ಕೆ ಪ್ರಥಮ, ವೈಯಕ್ತಿಕ ವಿಭಾಗದಲ್ಲಿ ಜೀವ ವಿಮಾ ಅಭಿವೃದ್ಧಿ ಅಧಿಕಾರಿ ಮಾರುತಿ ಉಪ್ಪಾರಟ್ಟಿ, ಇಲಾಖಾ ನೌಕರರ ವಿಭಾಗದಲ್ಲಿ ಕೂಡ್ಲಿಗಿ ಅಂಚೆ ಪಾಲಕ ವೆಂಕಟೇಶ ಕೆ, ಬಿ ಟಿ ಪಿ ಎಸ್ ಅಂಚೆ ಕಚೇರಿಯ ಅಂಚೆ ಪಾಲಕ ನಾಗರಾಜ್ ರಾವ್, ಗ್ರಾಮೀಣ್ ಅಂಚೆ ನೌಕರ ವಿಭಾಗದಲ್ಲಿ ಕೂಡ್ಲಿಗಿ ಯ ಊರಮ್ಮ ಟೆಂಪಲ್ ಶಾಖಾ ಅಂಚೆ ಕಚೇರಿಯ ಶ್ರೀಮತಿ ಜಲಜಾಕ್ಷಿ, ನೇರ ಪ್ರತಿನಿಧಿ ವಿಭಾಗದಲ್ಲಿ ಮಲ್ಲೇಶ್, ಉಜ್ಜಯಿನಿ ಮಠದ ವೀರೇಶ ಪ್ರಶಸ್ತಿಗಳನ್ನು ರಾಜೇಂದ್ರ ಕುಮಾರ್, ಕರ್ನಾಟಕ ವೃತ್ತ ದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ರವರಿಂದ ಸ್ವೀಕರಿಸಿದರು.

ಈ ಕಾರ್ಯಕ್ರಮದಲ್ಲಿ ಉತ್ತರ ಕರ್ನಾಟಕ ದ ಪೋಸ್ಟ್ ಮಾಸ್ಟರ್ ಜನರಲ್ ಕರ್ನಲ್ ಸುಶೀಲ್ ಕುಮಾರ್, ಸಂದೇಶ ಮಹದೇವಪ್ಪ, ಶ್ರೀಮತಿ ವಿ. ತಾರ ಹಾಗೂ ರಾಜ್ಯದ ಅಂಚೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪ್ರಧಾನ ಮಂತ್ರಿ ಜನ ಸುರಕ್ಷಾ ಯೋಜನೆಗಳ ಅನುಷ್ಠಾನ, ಹೊಸ ಅಂಚೆ ಉಳಿತಾಯ ಖಾತೆಗಳನ್ನು ತೆರೆಯುವ ಮತ್ತು ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕಿನ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವಲ್ಲಿ ಬಳ್ಳಾರಿ ವಿಭಾಗದ ಅಂಚೆ ಸಿಬ್ಬಂದಿಗಳು ಒಂದು ತಂಡವಾಗಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಪ್ರತಿಫಲವಾಗಿ ಬಳ್ಳಾರಿಗೆ ಈ ಬಹುಮಾನಗಳು ಸಂದಾಯವಾಗಿದೆ. ಇದರ ಎಲ್ಲಾ ಶ್ರೇಯ ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಯ ಸಮಸ್ತ ಅಂಚೆ ಸಿಬ್ಬಂದಿಗೆ ಸಲ್ಲುತ್ತದೆ ಎಂದು ಅಂಚೆ ಅಧೀಕ್ಷಕರಾದ ಪದ್ಮಶಾಲಿ ಚಿದಾನಂದ್ ರವರು ಸಿಬ್ಬಂದಿಗಳಿಗೆ ಅಭಿನಂದಿಸಿದರು. ಅಂಚೆ ಇಲಾಖೆಯ ಉಳಿತಾಯ ಯೋಜನೆಗಳು, ವಿಮಾ ಮನೆಬಾಗಿಲಿಗೆ ಡಿಬಿಟಿ ಆಯ್ಕೆಗಳು ಮತ್ತು ಪತ್ರ ವ್ಯವಹಾರಗಳು ಕಟ್ಟಕಡೆಯ ಪ್ರತಿ ನಾಗರಿಕನಿಗೂ ಸುಲಭವಾಗಿ ಸಿಗುತ್ತಾ ಆರ್ಥಿಕ ಸುಭದ್ರತೆ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ, ಜನ ಸಾಮಾನ್ಯರು ಇದರ ಲಾಭ ಪಡೆದುಕೊಳ್ಳಬೇಕೆಂದು ಹಾಗೂ ತಮ್ಮ ಸೇವೆಗಾಗಿ ಇಲಾಖೆ ಸದಾ ಸನ್ನದ್ಧವಿದೆ ಎಂದು ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

## ವೈದ್ಯಕೀಯ ಸ್ನಾತಕೋತ್ತರ ಶಿಷ್ಯವೇತನ ಹಗರಣ

# ಕಾಂಗ್ರೆಸ್ ಮುಖಂಡ ಸೇರಿ ಮೂವರ ಮನೆ ಮೇಲೆ ಇ.ಡಿ ದಾಳಿ



ಡಾ.ಭೀಮಾಶಂಕರ ಬಿಲಗುಂದಿ

**ಕಲಬುರಗಿ, ಮೇ.1–** ಇಲ್ಲಿನ ಪ್ರತಿಷ್ಠಿತ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಮಾಜಿ ಅಧ್ಯಕ್ಷರೂ ಆದ ಕಾಂಗ್ರೆಸ್ ಮುಖಂಡ ಡಾ.ಭೀಮಾಶಂಕರ ಬಿಲಗುಂದಿ ಸೇರಿದಂತೆ ಮೂವರ ಮನೆಗಳ ಮೇಲೆ ನಾಲ್ವರು ಇಡಿ ಅಧಿಕಾರಿಗಳ ತಂಡ ಏಕಕಾಲಕ್ಕೆ ದಾಳಿ ನಡೆಸಿದೆ.

ಹೈದರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಮಹಾದೇವಪ್ಪ ರಾಂಪುರೆ ವೈದ್ಯಕೀಯ ಕಾಲೇಜಿನ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳ ಸ್ಟೈಫಂಡ್ ದುರ್ಬಳಕೆ ಆರೋಪದಡಿ ಸಂಸ್ಥೆಯ ಮಾಜಿ ಅಧ್ಯಕ್ಷರೂ ಆಗಿರುವ ಕಾಂಗ್ರೆಸ್ ಮುಖಂಡ ಡಾ.ಭೀಮಾಶಂಕರ ಬಿಲಗುಂದಿ ಸೇರಿದಂತೆ ಮೂವರ ಮನೆಗಳ ಮೇಲೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ವೈದ್ಯಕೀಯ ವಿದ್ಯಾರ್ಥಿಗಳ ಸ್ಟೈಫಂಡ್ ದುರ್ಬಳಕೆ ಮಾಡಿಕೊಂಡ ಆರೋಪದಡಿ ಸಂಸ್ಥೆಯ ಮಾಜಿ ಅಧ್ಯಕ್ಷ ಭೀಮಾಶಂಕರ ಬಿಲಗುಂದಿ, ಎಂಆರ್‌ಎಂಸಿ ಕಾಲೇಜಿನ ಪ್ರಾಚಾರ್ಯ ಡಾ.ಎಸ್.ಎಂ.ಪಾಟೀಲ್, ಅಕೌಂಟೆಂಟ್ ಸುಭಾಷ ಜಗನ್ನಾಥ ಮತ್ತು ಕೆನರಾ ಬ್ಯಾಂಕ್ ಎಂಆರ್‌ಎಂಸಿ ಶಾಖೆಯ ವ್ಯವಸ್ಥಾಪಕರ ವಿರುದ್ಧ ಪ್ರಕರಣ ದಾಖಲಾಗಿತ್ತು. ಈ ಸಂಬಂಧ ಭೀಮಾಶಂಕರ ಬಿಲಗುಂದಿ, ಡಾ.ಎಸ್.ಎಂ.ಪಾಟೀಲ, ಸುಭಾಷ ಜಗನ್ನಾಥ ಅವರ ಮನೆಗಳಲ್ಲಿ ಶೋಧ ನಡೆಸಲಾಗಿದೆ ಎಂದು ತಿಳಿದುಬಂದಿದೆ.

ಒಂಬತ್ತು ಇನ್ನೋವಾ ಕಾರುಗಳಲ್ಲಿ ನಾಲ್ಕು ತಂಡಗಳ 30ಕ್ಕೂ ಹೆಚ್ಚು ಈಡಿ ಅಧಿಕಾರಿಗಳು ಮೂವರ ಮನೆಗಳಿಗೆ ದಾಳಿ ನಡೆಸಿದ್ದಾರೆ. ಬಳಿಕ ಅವರ ಮನೆಗಳಲ್ಲಿದ್ದ ಎಲ್ಲಾ ದಾಖಲೆಗಳನ್ನು ಪರಿಶೀಲನೆ ಮಾಡಿದ್ದಾರೆ. ಇನ್ನೂ ಈ ಪ್ರಕರಣದಲ್ಲಿ ಹೆಸರು ಬಂದಿರುವ ಕೆನರಾ ಬ್ಯಾಂಕ್ ಎಂಆರ್‌ಎಂಸಿ ಶಾಖೆಯ ವ್ಯವಸ್ಥಾಪಕರ ಮನೆ ಮೇಲಿನ ದಾಳಿಯ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದಿಲ್ಲ ಎಂದು ಮೂಲಗಳು ತಿಳಿಸಿವೆ.

ಎಂಆರ್‌ಎಂಸಿ ಕಾಲೇಜಿನ 282 ಕ್ಕೂ ಹೆಚ್ಚು ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳೂ ಸೇರಿದಂತೆ 700 ಎಂಬಿಬಿಎಸ್ ವಿದ್ಯರ್ಥಿಳಿಗೆ ಸೇರಬೇಕಿದ್ದ 81.21 ಕೋಟಿ ರೂ. ಸ್ಟೈಫಂಡ್ ಹಣವನ್ನು ಡಾ.ಭೀಮಾಶಂಕರ ಸೇರಿದಂತೆ ನಾಲ್ವರು ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿ 2023ರ ಮಾ.31ರಂದು ನಗರದಲ್ಲಿರುವ 'ಸೆನ್' ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ವಿದ್ಯಾರ್ಥಿಗಳ ಖಾತೆಗೆ ಸ್ಟೈಫಂಡ್ ಹಣ ಜಮೆ ಮಾಡಿಸಿ, ಬಳಿಕ ವಿದ್ಯಾರ್ಥಿಗಳಿಂದ ಖಾಲಿ ಚೆಕ್‌ಗಳಿಗೆ ಅಕ್ರಮವಾಗಿ ಸಹಿ ಪಡೆದುಕೊಂಡಿದ್ದರು. ಆ ನಂತರ ಅಕ್ರಮವಾಗಿ ಸ್ಟೈಫಂಡ್ ಹಣವನ್ನು ವಿತ್ ಡ್ರಾ ಮಾಡಿಕೊಂಡ ಈ ನಾಲ್ವರು, ತಮ್ಮ ಸ್ವಂತಕ್ಕೆ ಬಳಸಿಕೊಂಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿತ್ತು.

ಈ ಪ್ರಕರಣ ಕುರಿತಾಗಿ ಸಮರ್ಪಕ ಮಾಹಿತಿ ಪಡೆಯಲು ಈಡಿ ಅಧಿಕಾರಿಗಳು ಬುಧವಾರ ದಾಳಿ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

## ಹಲ್ಲೆಗೆ ಕಾರಣ ಪಾಕಿಸ್ತಾನ ಪರ ಘೋಷಣೆ

# ಕೇರಳ ಯುವಕನ ಕೊಲೆ: ಪೊಲೀಸರ ಅಮಾನತು

**ಮಂಗಳೂರು, ಮೇ.1–** ನಗರದ ಹೊರವಲಯದ ಕುಡುಪು ಬಳಿ ಗುಂಪು ಹಲ್ಲೆಯಿಂದ ಕೇರಳ ಮೂಲದ ಮುಸ್ಲಿಂ ಯುವಕನನ್ನು ಕೊಲೆಗೈದ ಪ್ರಕರಣ ಕರ್ನಾಟಕದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ. ಗುಂಪು ಹಲ್ಲೆಗೆ ಪಾಕಿಸ್ತಾನ ಪರ ಘೋಷಣೆ ಕೂಗಿದ್ದೇ ಕಾರಣ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಘಟನೆ ಸಂಬಂಧ ಆರಂಭದಲ್ಲಿ ಅಸಹಜ ಸಾವು ಪ್ರಕರಣ ದಾಖಲಿಸ ಲಾಗಿತ್ತು. ನಿರ್ಲಕ್ಷ್ಯ ವಹಿಸಿದ್ದಕ್ಕಾಗಿ ಇದೀಗ ಕರ್ತವ್ಯ ಲೋಪ ಆರೋಪದಡಿ ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಸೇರಿದಂತೆ ಮೂವರು ಪೊಲೀಸರನ್ನು ಅಮಾನತು ಮಾಡಲಾಗಿದೆ.

ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಶಿವಕುಮಾರ್, ಹೆಡ್‌ಕಾನ್ಸ್‌ಟೇಬಲ್ ಚಂದ್ರ.ಪಿ ಮತ್ತು ಕಾನ್ಸ್‌ಟೇಬಲ್ ಯಲ್ಲಾಲಿಂಗ ಅವರನ್ನು ಅಮಾನತು ಮಾಡಲಾಗಿದೆ ಎಂದು ಪೊಲೀಸ್ ಕಮಿಷನರ್ ತಿಳಿಸಿದ್ದಾರೆ.



ಇನ್ಸ್‌ಪೆಕ್ಟರ್ ಶಿವಕುಮಾರ್ ಅವರನ್ನು ಅಮಾನತು ಮಾಡುವಂತೆ ಗೃಹ ಸಚಿವ ಜಿ. ಪರಮೇಶ್ವರ್‌ಗೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಪತ್ರ ಬರೆದಿದ್ದರು. ಇನ್‌ಸ್ಪೆಕ್ಟರ್ ಶಿವಕುಮಾರ್ ಆರಂಭದಲ್ಲಿ ಅಸಹಜ ಸಾವು ಎಂದು ಪ್ರಕರಣ ದಾಖಲಿಸಿದ್ದರು. ವಿವಾದ ದೊಡ್ಡದಾದ ಮೇಲೆ ಕೊಲೆ ಎಂದು ಎಫ್‌ಐಆರ್ ದಾಖಲಿಸಿದ್ದಾರೆ. ಮೃತ ಯುವಕನ ಮೇಲೆ ಗಾಯಗಳು ಕಂಡು ಬಂದರು ಸಹ ಅಸಹಜ ಸಾವು ಪ್ರಕರಣವೆಂದು ದಾಖಲಿಸಿ ಕೊಂಡಿದ್ದರು.

## ಅತ್ಯಾಚಾರ, ಕೊಲೆ ಆರೋಪಿ ಎನ್‌ಕೌಂಟರ್ ಪ್ರಕರಣ

# ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದಿಂದ ದೂರು ದಾಖಲು

**ಹುಬ್ಬಳ್ಳಿ, ಮೇ.1–** ನಗರದಲ್ಲಿ ನಡೆದ ಅತ್ಯಾಚಾರ ಹಾಗೂ ಕೊಲೆ ಆರೋಪಿ ಎನ್‌ಕೌಂಟರ್ ಪ್ರಕರಣಕ್ಕೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಪ್ರವೇಶ ಕೊಟ್ಟಿದೆ.

ಮಾಧ್ಯಮಗಳಲ್ಲಿ ಬಂದ ವರದಿಯನ್ನು ಆಧರಿಸಿ ಸ್ವಯಂ ಪ್ರೇರಿತವಾಗಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದಿಂದ ದೂರು ದಾಖಲಿಸಿಕೊಳ್ಳಲಾಗಿದೆ. ಐದು ವರ್ಷದ ಬಾಲಕಿ ಮೇಲೆ ರಿತೇಶ ಕುಮಾರ್ ಎಂಬ ಆರೋಪಿ ರೇಪ್ ಆಂಡ್ ಮರ್ಡರ್ ಮಾಡಿದ್ದ. ಈ ಆರೋಪಿಯನ್ನು ಪೋಲೀಸರು ಎನ್ಕೌಂಟರ್ ಮಾಡಿದ್ದರು.

ಈ ಇಬ್ಬರ ಪ್ರಕರಣದಲ್ಲೂ ಮಾನವ ಹಕ್ಕು ಉಲ್ಲಂಘನೆ ಆರೋಪ ಕೇಳಿ ಬಂದ ನಂತರ ಈ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ




ಹಾಗೂ ಪೊಲೀಸ್ ಮಹಾನಿರ್ದೇಶಕರಿಗೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದಿಂದ ನೋಟಿಸ್ ನೀಡಿ ವಿವರವಾದ ವರದಿಯನ್ನು ನಾಲ್ಕು ವಾರಗಳೊಳಗೆ ಕೊಡು ವಂತೆ ಸೂಚನೆ ನೀಡಲಾಗಿದೆ. ಹೀಗಾಗಿ ಈಗ ಮಾನವ ಹಕ್ಕುಗಳ ಆಯೋಗ ತನಿಖೆ ನಡೆಸುತ್ತಿದೆ.

# ಜಗತ್ತಿಗೆ ಪ್ರಜಾಪ್ರಭುತ್ವದ ಪರಿಕಲ್ಪನೆ ನೀಡಿದ್ದು ಬಸವಣ್ಣ: ಈಶ್ವರ್ ಖಂಡ್ರೆ

**ಬೀದರ, ಮೇ.1–** ಜಗತ್ತಿಗೆ ಪ್ರಜಪ್ರಭುತ್ವದ ಪರಿಕಲ್ಪನೆ ನೀಡಿದ್ದು ಮಹಾನ್ ಸಮಾಜ ಸುಧಾರಕ, ಶೋಷಣೆ ಇಲ್ಲದ ಸಮಾನತೆಯ ಸಮಾಜ ನಿರ್ಮಿಸಲು ಜೀವನ ಪೂರ್ತಿ ಶ್ರಮಿಸಿದ ದಾರ್ಶನಿಕ ಬಸವಣ್ಣನವರು. ಅವರ ಬದುಕು ಮತ್ತು ಸಂದೇಶಗಳು ಇಂದಿಗೂ ಎಲ್ಲರಿಗೂ ಪ್ರೇರಣೆಯಾಗಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಬಸವಣ್ಣನವರ ಕರ್ಮಭೂಮಿ ಜಿಲ್ಲೆಯ ಬಸವಕಲ್ಯಾಣದಲ್ಲಿ 892ನೇ ಬಸವ ಜಯಂತಿಯ ಅಂಗವಾಗಿ, ಬಸವ ಜಯಂತಿಯ 75ನೇ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಸವಣ್ಣನವರ ಆದರ್ಶ ಮತ್ತು ವಚನಗಳು ಇಡೀ ಸಮಾಜವನ್ನು ಸುಧಾರಿಸುವ ಮತ್ತು ಕೆಳಗಿದ್ದವರನ್ನು ಮೇಲೆ ತರುವ ಉದ್ದೇಶದಿಂದ ಬಸವಣ್ಣನವರು ಅನುಭವ ಮಂಟಪ ನಿರ್ಮಿಸಿ ಎಲ್ಲ ವರ್ಗದವರಿಗೂ ಹಾಗೂ ಲಿಂಗತಾರತಮ್ಯವಿಲ್ಲದೇ ಒಂದೇ ವೇದಿಕೆಗೆ ಕರೆತಂದವರು ಬಸವಣ್ಣನವರು.

ಕಾರಣಾಂತರಗಳಿಂದ ವಚನ ಚಳವಳಿ ಅಲ್ಲಿಗೆ ನಿಂತು ಹೋಗಿತ್ತು. ಅದೀಗ ಪುನರುಜ್ಜೀವನ ಗೊಳಿಸಬೇಕಿದೆ. ಅದಕ್ಕಾಗಿಯೇ ನಮ್ಮ ಸರ್ಕಾರ ಬಸವಕಲ್ಯಾಣದಲ್ಲಿ ಆಧುನಿಕ ಅನುಭವ ಮಂಟಪ ನಿರ್ಮಿಸುತ್ತಿದೆ. ಈಗಾಗಲೇ ಮುಕ್ತಾಯ ಹಂತದಲ್ಲಿರುವ ಅನುಭವ ಮಂಟಪವನ್ನು ಶೀಘ್ರದಲ್ಲೇ ಉದ್ಘಾಟನೆ ನೆರವೇರಲಿದೆ ಎಂದರು.

ಇಂದು ನಮ್ಮ ದೇಶದಲ್ಲಿರುವ ಪಾರ್ಲಿಮೆಂಟ್ ಕೂಡ ಬಸವಣ್ಣನವರ ಅನುಭವ ಮಂಟಪದ ಪರಿಕಲ್ಪನೆಯದ್ದಾಗಿದೆ ಎಂದ ಅವರು, ಲೋಕಸಭೆ, ರಾಜ್ಯಸಭೆಗೆ ಹೇಗೆ ಎಲ್ಲ ಮೂಲೆಗಳಿಂದ ಸದಸ್ಯರು ಆಯ್ಕೆಯಾಗಿ ಭಾಗವಹಿ ಸುತ್ತಾರೋ ಅದೇ ರೀತಿ ಅನುಭವ ಮಂಟಪದಲ್ಲಿ ಲಿಂಗ ತಾರತಮ್ಯವಿಲ್ಲದೇ ಎಲ್ಲ ವರ್ಗದಜನರೂ ಪಾಲ್ಗೊಂಡು ವಚನಗಳ ಮೂಲಕ ಸಮಾಜಕ್ಕೆ ಸಂದೇಶ ನೀಡಿದರು. ಈ ಅತ್ಯಮೂಲ್ಯ ಸಂದೇಶಗಳು ವಚನ ರೂಪದಲ್ಲಿದ್ದು, ಆ ವಚನಗಳು ಇಂದಿಗೂ ಪ್ರಸ್ತುತವಾಗಿದ್ದು, ಇದಕ್ಕೆಲ್ಲ ಕಾರಣರಾದ ನಮ್ಮ ಸಮಾಜ ಬಸವಣ್ಣನವರ ತತ್ವ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯ ಬೇಕೆಂದು ಕರೆ ನೀಡಿದರು.



ಬೀದರ್ ಜಿಲ್ಲೆಯ ಬಸವಣ್ಣನವರ ಕರ್ಮಭೂಮಿ ಬಸವಕಲ್ಯಾಣದಲ್ಲಿ ಆಯೋಜಿಸಿದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದರು. ಶಾಸಕ ಶರಣು ಸಲಗರ, ಪರಿಷತ್ ಸದಸ್ಯ ಮಾರುತಿರಾವ್ ಮುಳೆ ಮತ್ತಿತರ ಪ್ರಮುಖರಿದ್ದರು.

# ಕಾಯಕ ಮಾಸಾಚರಣೆ ಜಾಗೃತಿ, ನರೇಗಾ ಕಾರ್ಮಿಕರ ಉಚಿತ ಆರೋಗ್ಯ ತಪಾಸಣೆ

**ಬಸವಕಲ್ಯಾಣ, ಮೇ.1–** ಜೀವನಕ್ಕೆ ಉತ್ತಮ ಆರೋಗ್ಯ ತುಂಬಾ ಮುಖ್ಯವಾಗಿದೆ. ಆದ್ದರಿಂದ ಪ್ರತಿಯೊಬ್ಬರು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಮುಂಜಾಗೃತ ವಹಿಸಬೇಕು ಎಂದು ಗ್ರಾಮಪಂಚಾಯತ್ ಉಪಾಧ್ಯಕ್ಷ ಚೇತನ ಕಾಡೆ ಹೇಳಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಆರೋಗ್ಯ ಇಲಾಖೆ ಮತ್ತು ಐಇಸಿ ಸಂಯುಕ್ತಾಶ್ರಯದಲ್ಲಿ ನಾರಾಯಣಪೂರ ಗ್ರಾಮದಲ್ಲಿ ಕಾಯಕ ಮಾಸಾಚಾರಣೆ ಜಾಗೃತಿ ಕಾರ್ಯಕ್ರಮ ಮತ್ತು ಕೂಲಿಕಾರ್ಮಿಕರಿಗೆ ಹಮ್ಮಿಕೊಂಡ ಆರೋಗ್ಯ ತಪಾಸಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಪ್ರತಿಯೊಬ್ಬರು ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ಶಿಬಿರದ ಲಾಭ ಪಡೆದುಕೊಳ್ಳಬೇಕು ಎಂದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕವಿತಾ ಶೃಂಗೇರಿ ಅವರು ಮಾತನಾಡಿ, ಬೇಸಿಗೆ ಕಾಲ ಇರುವುದರಿಂದ ಕಾರ್ಮಿಕರು ಬೇಗ ಬಂದು ಬೇಗ ನಿಗಮಗೆ ನೀಡಿರುವ ಕೆಲಸವನ್ನು ಮುಗಿಸಿಕೊಂಡು ಹೋರಬೇಕು ಮತ್ತು ಎನ್.ಎಂ.ಆರ್. ನಲ್ಲಿ ಹೆಸರು ಇರುವ ಕಾರ್ಮಿಕರು ಮಾತ್ರ ಕೆಲಸಕ್ಕೆ ಬರಬೇಕು. ಹೊರತು ಕುಟುಂಬದ ಹೆಸರಿನಲ್ಲಿ ಕೆಲಸ ಬರಬಾರದು ಎಂದು ತಿಳಿಸಿದರು. ನಂತರ ಐಇಸಿ ಸಂಯೋಜಕ ವೀರಾರೆಡ್ಡಿ ಅವರು ಮಾತನಾಡಿ, ಮಹಾತ್ಮ ಗಾಂಧಿ ರಾಷ್ಟ್ರೀಯ ನರೇಗಾ ಯೋಜನೆಯಡಿ ಹೆಚ್ಚು ಕೂಲಿ ಕಾರರಿಗೆ ಕೆಲಸ ನೀಡುವ ಉದ್ದೇಶ ದಿಂದ ಮೇ–31 ವರೆಗೆ ಕಾಯಕ ಮಾಸಾಚಾರಣೆ ಹಮ್ಮಿಕೊಳ್ಳ ಲಾಗಿದ್ದು, ಒಂದು ತಿಂಗಳ ಅವಧಿಯಲ್ಲಿ ಕಾಯಕ ಮಾಸಾ ಚಾರಣೆ ಎಂದು ಆಚರಿಸುವ ಮೂಲಕ ಜಿಲ್ಲೆಯಲ್ಲಿ ಒಂದು ಲಕ್ಷ ಕೂಲಿಕಾರರಿಗೆ ಕೆಲಸ ನೀಡುವ ಉದ್ದೇಶ ಹೊಂದಲಾಗಿದೆ ಎಂದರು.



ಬಸವಕಲ್ಯಾಣ ತಾಲ್ಲೂಕಿನ ನಾರಾಯಣಪುರದಲ್ಲಿ ನರೇಗಾ ಯೋಜನೆ, ಆರೋಗ್ಯ ಇಲಾಖೆ ಮತ್ತು ಐಇಸಿ ಸಂಯುಕ್ತಾಶ್ರಯದಲ್ಲಿ ಕಾಯಕ ಮಾಸಾಚರಣೆ ಜಾಗೃತಿ ಕಾರ್ಯಕ್ರಮದಡಿ ಕೂಲಿ ಕಾರ್ಮಿಕರ ಆರೋಗ್ಯ ತಪಾಸಣೆ ನಡೆಯಿತು.

# ಸಜ್ಜನರ ಸ್ನೇಹ ಹೆಜ್ಜೇನು ಸವಿದಂತೆ: ಕೈದಿಗಳಿಗೆ ಚಿಂತಕ ಪಾವಗಡ ಡಾ.ಪ್ರಕಾಶರಾವ್ ಸಲಹೆ



ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಶಿಕ್ಷಾ ಬಂದಿಗಳಿಗೆ ಸೋಕೇರ್ ಇಂಡ್ ಸಂಸ್ಥೆ, ಅದಾನಿ ಸಂಸ್ಥೆ ಹಾಗೂ ಕೇಂದ್ರ ಕಾರಾಗೃಹ ಸಹಯೋಗದೊಂದಿಗೆ ಕಂಪ್ಯೂಟರ್ ತರಬೇತಿ ಪಡೆದ ಬಂದಿಗಳಿಗೆ ಅದ್ವೈತ ಮಹಾ ಮಂಡಳದ ಅಧ್ಯಕ್ಷರೂ ಆದ ಡಾ.ಪಾವಗಡ ಪ್ರಕಾಶರಾವ್ ಅವರು ಪ್ರಮಾಣಪತ್ರ ವಿತರಿಸಿದರು. ಕೇಂದ್ರ ಕಾರಾಗೃಹದ ಮುಖ್ಯಸ್ಥೆ ಡಾ.ಅನಿತಾ ಆರ್ ಇದ್ದರು.

**ಕಲಬುರಗಿ, ಮೇ.1–** ಸಜ್ಜನರ ಸಂಗ ಹೆಜ್ಜೆನು ಸವಿದಂತೆ" ಸತ್ಯವಂತರ ಒಳ್ಳೆಯವರ ಜೊತೆ ಒಡನಾಟವನ್ನು ಬೆಳಿಸಿ ಸಹೋದರತ್ವವನ್ನು ಬೆಳಸಿಕೊಂಡು ಒಳ್ಳೆಯವರಾಗಿ ಉತ್ತಮ ಜೀವನವನ್ನು ನಡೆಸಿ ಎಂದು ಬೆಂಗಳೂರಿನ ಅದ್ವೈತ ಮಹಾ ಮಂಡಳದ ಅಧ್ಯಕ್ಷ ಹಾಗೂ ಪ್ರವಚನ ಚಕ್ರವರ್ತಿ ಡಾ. ಪಾವಗಡ ಪ್ರಕಾಶರಾವ್ ಅವರು ಹಾರೈಸಿದರು.

ನಗರದ ಕೇಂದ್ರ ಕಾರಾಗೃಹದ ಶಿಕ್ಷಾ ಬಂದಿಗಳಿಗೆ ಸೋಕೇರ್ ಇಂಡ್ ಸಂಸ್ಥೆ, ಅದಾನಿ ಸಂಸ್ಥೆ ವಾಡಿ ಹಾಗೂ ಕೇಂದ್ರ ಕಾರಾಗೃಹ ಸಹಯೋಗದೊಂದಿಗೆ ಕಂಪ್ಯೂಟರ್ ತರಬೇತಿದಾರರಿಗೆ ಪ್ರಮಾಣ ಪತ್ರ, ಕಿಟ್ ವಿತರಿಸುವ ಹಾಗೂ ಪ್ರವಚನ (ಉಪನ್ಯಾಸ) ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ನಾವು ನಮ್ಮ ಪ್ರಮಾದಗಳಿಂದ ಜೀವನದಲ್ಲಿ ಏರಿಳಿತಗಳನ್ನು ಕಾಣುತ್ತೇವೆ. ನಾವು ನಮ್ಮ ಪೂರ್ವ ಜನ್ಮದ ಕರ್ಮಗಳನ್ನು ಇಂದು ಅನುಭವಿಸುತ್ತಿದ್ದೇವೆ. ಅದಕ್ಕಾಗಿ ನಾವುಗಳು ಒಳ್ಳೆಯ ನಡತೆಯನ್ನು ಹೊಂದಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಮುಖ್ಯಸ್ಥೆ ಶ್ರೀಮತಿ ಡಾ. ಅನಿತಾ ಆರ್., ಅವರು ಮಾತನಾಡಿ, ಖ್ಯಾತ ಪ್ರವಚನಕಾರ ಡಾ. ಪಾವಗಡ್ ಪ್ರಕಾಶರಾವ್ ಅವರು ಆಗಮಿಸಿದ ವಿಷಯವನ್ನು ತಿಳಿದು, ಬಂದಿಗಳಿಗೆ ಹಿತನುಡಿಯನ್ನು ನೀಡಿ ಅವರನ್ನು ಒಳ್ಳೆಯ ವ್ಯಕ್ತಿಯಾಗಿ ಮಾನಸಿಕ ದೈಹಿಕವಾಗಿ ಸದೃಡವಾದ ಶರೀರವನ್ನು ಕಾಪಡಿಕೊಳ್ಳುವಂತಹ ವಾತಾವರಣವನ್ನು ಕಲ್ಪಿಸಲು ಅವರಲ್ಲಿ ಕೋರಲಾಯಿತು. ಅದರಂತೆ ಗುರುಗಳು ಆಗಮಿಸಿ ಬಂದಿಗಳಿಗೆ ಉತ್ತಮ ಚಾರಿತ್ರಿಕ ಹೊಂದುವ ಉಪನ್ಯಾಸವನ್ನು ನೀಡಿ ಬಂದಿಗಳಲ್ಲಿ ನವ ಉಲ್ಲಾಸ, ಸ್ಪೂರ್ತಿಯ ಚಿಲುಮೆಯನ್ನು ತುಂಬಿ ಅವರ ಬದುಕಿಗೆ ಉತ್ತಮ ರಸವತ್ತಾದ ಆಮ್ಲಜನಕವನ್ನು ನೀಡಿ ಅವರಲ್ಲಿ ಭರವಸೆ ಮೂಡಿಸಿ ಇಲ್ಲಿಂದ ಬಿಡುಗಡೆ ಹೊಂದಿ ಸಮಾಜ ಮುಖಿಯಾಗಿ ತಮ್ಮ ಕರ್ತವ್ಯವನ್ನು ನೀಡುವ ವಾತಾವರಣವನ್ನು ನಿರ್ಮಾಣವನ್ನು ಮಾಡಿದ್ದಾರೆ ಎಂದು ಶ್ಲಾಘಿಸಿದರು.

# ವಿವಿಧ ಕಾಮಗಾರಿ, ಅತಿಕ್ರಮಣ ಪ್ರದೇಶಗಳ ಸ್ಥಳ ಪರಿಶೀಲನೆ



**ವಿಜಯಪುರ ಮೇ.01–** ಜಿಲ್ಲಾಧಿಕಾರಿ ಟಿ.ಭೂಬಾಲನ್ ನಗರದ ವಿವಿಧೆಡೆ ಕೈಗೊಂಡಿರುವ ಕಾಮಗಾರಿ ಹಾಗೂ ಅತಿಕ್ರಮಣ ವಾಗಿರುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತಹಶೀಲ್ದಾರ ಕಚೇರಿ ಹಿಂಭಾಗ ದಲ್ಲಿರುವ ಖಾಲಿ ಜಾಗವನ್ನು ಪರಿಶೀಲನೆ ನಡೆಸಿದ ಅವರು, ಸದರಿ ಸ್ಥಳದಲ್ಲಿರುವ ತಗ್ಗು ಗುಂಡಿಗಳನ್ನು ದುರಸ್ತಿಗೊಳಿಸಿ, ಸಮತಟ್ಟುಗೊಳಿಸಿ ಪಾಲಿಕೆ ಆಯುಕ್ತರಿಗೆ ಸೂಚಿಸಿದ ಅವರು, ನಗರದಾದ್ಯಂತೆ ವಿವಿಧೆಡೆ 10 ಸಾವಿರ ಗಿಡಗಳನ್ನು ಬೆಳೆಸುವ ಮೂಲಕ ಹಸಿರು ವಲಯಕ್ಕೆ ಕ್ರಮ ವಹಿಸುವಂತೆ ಅರಣ್ಯಾಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ನಗರದ ರಿಂಗ್ ರಸ್ತೆ ಶ್ರಿ ನೇತಾಜಿ ಸುಭಾಷಚಂದ್ರ ಬೋಸ ವೃತ್ತದಿಂದ ಸೊಲ್ಲಾಪುರ ರಾಷ್ಟ್ರೀಯ ಹೆದ್ದಾರಿ ವರೆಗೆ ಕೈಗೊಂಡಿರುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ತ್ವರಿತಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ, ಸಾರ್ವಜನಿಕರ ಸುಗಮ ಸಂಚಾರಕ್ಕೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು. ನಗರದ ದರ್ಗಾ ರಸ್ತೆಯಲ್ಲಿ ಸೋಲಾಪುರ ಹಳೆಯ ಬೈಪಾಸ್‌ದಿಂದ ದರ್ಗಾ (ಇಟ್ಟಂಗಿಹಾಳ) ರಸ್ತೆವರೆಗೆ ಮುಖ್ಯ ರಸ್ತೆಯಲ್ಲಿರುವ ಅನಧಿಕೃತ– ಒತ್ತುವರಿಯಾಗಿರುವ ಕಟ್ಟಡ–ಶೆಡ್‌ಗಳನ್ನು ತೆರವುಗೊಳಿಸಿ ರಸ್ತೆ ಅಗಲೀಕರಣಕ್ಕಾಗಿ ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ವಿಜಯಪುರ ನಗರದ ಆಶ್ರಮಗೆ ಹೋಗುವ ಮುಖ್ಯ ರಸ್ತೆಯಲ್ಲಿ ಒತ್ತುವರಿ ಮಾಡಿಕೊಂಡು ನಿರ್ಮಿಸಿ ಕೊಂಡ ವಸತಿ ಹಾಗೂ ವಾಣಿಜ್ಯ ಕಟ್ಟಡಗಳು, ಶೆಡ್‌ಗಳನ್ನು ತೆರವು ಗೊಳಿಸಲು ಸ್ಥಳ ಪರಿಶೀಲನೆ ನಡೆಸಿ, ನಿಯಮಾನುಸಾರ ಒತ್ತುವರಿ ತೆರವುಗೊಳಿಸಿ ರಸ್ತೆ ಅಗಲೀಕರಣ ಕಾರ್ಯಕ್ಕೆ ಅವರು ಸೂಚನೆ ನೀಡಿದರು.

# ಅಂಚೆ ಕಚೇರಿಯಲ್ಲಿ ಜ್ಞಾನ್ ಪೋಸ್ಟ್ ಸೇವೆ ಆರಂಭ–ಪದ್ಮಶಾಲಿ ಚಿದಾನಂದ

**ಬಳ್ಳಾರಿ, ಮೇ.1–** ಭಾರತ ಸರ್ಕಾರದ ಅಂಚೆ ಇಲಾಖೆ "ಜ್ಞಾನ ಪೋಸ್ಟ್" ಎಂಬ ಹೆಸರಿನ ಹೊಸ ಅಂಚೆ ಸೇವೆಯನ್ನು 1 ಮೇ 2025 ರಿಂದ ಪ್ರಾರಂಭಿಸಿದೆ.

ಇದು ವಿದ್ಯಾರ್ಥಿಗಳು, ಸ್ಪರ್ಧಾತ್ಮಕ ಪರೀಕ್ಷಾ ಆಸಕ್ತರು ಮತ್ತು ಸಮಾಜ–ಸಂಸ್ಕೃತಿ– ಧಾರ್ಮಿಕ ಸಂಬಂಧಿತ ಸಾಹಿತ್ಯವನ್ನು ತಲುಪಿಸಲು ಬಳಸಬಹುದಾದ ಕೈಗೆಟುಕುವ ದರದಲ್ಲಿ ಸಿಗುವ ವಿಶೇಷ ಅಂಚೆ ರವಾನೆ ಸೇವೆ ಯಾಗಿದೆ ಎಂದು ಈ ಸೇವೆಯನ್ನು ಬಳ್ಳಾರಿ ಪ್ರಧಾನ ಅಂಚೆ ಕಚೇರಿಯಲ್ಲಿ ಉದ್ಘಾಟಿಸಿದ ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರಾದ ಪದ್ಮಶಾಲಿ ಚಿದಾನಂದ ಅವರು ತಿಳಿಸಿದರು.

ಜ್ಞಾನ ಪೋಸ್ಟ್‌ನ ಮುಖ್ಯ ಲಕ್ಷಣಗಳು:–ಪಠ್ಯಪುಸ್ತಕಗಳು, ಶಾಸ್ತ್ರೀಯ/ಸಾಂಸ್ಕೃತಿಕ/ಧಾರ್ಮಿಕ ಪುಸ್ತಕಗಳು, ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿತ ಪುಸ್ತಕಗಳನ್ನು ಮಾತ್ರ ಕಳುಹಿಸಬಹುದಾಗಿದೆ. ಕೇವಲ ಮುದ್ರಿತ ಪುಸ್ತಕಗಳು (ಮ್ಯಾಗಜೀನು, ಜರ್ನಲ್ ಅಲ್ಲ) ಪಾರ್ಸೆಲ್ ನ ಹೊರಭಾಗದಲ್ಲಿ "Gyan Post" ಎಂದು ನಮೋದಿಸಿರಬೇಕು. ಕನಿಷ್ಠ ತೂಕ 30 ಗ್ರಾಂ ಮತ್ತು ಗರಿಷ್ಠ 5 ಕೆಜಿ ವರೆಗೂ ಕಳುಹಿಸಬಹುದು.

ಸ್ಪೀಡ್ ಪೋಸ್ಟ್ ಮತ್ತು ನೋಂದಾಯಿತ ಅಂಚೆಯಂತೆ ಇದು ಸಹ ಬುಕ್ ಮಾಡಿದಾಗಿನಿಂದ ವಿಳಾಸಕ್ಕೆ ತಲುಪುವವರೆಗೂ online ನಲ್ಲಿ ಟ್ರ್ಯಾಕ್ ಮಾಡಬಹುದು. (ಪಾರ್ಸೆಲ್ ಟ್ರ್ಯಾಕಬಲ್ ಆಗಿದ್ದು ಸಾಮಾನ್ಯ ಅಂಚೆಯಾಗಿ ಕಳುಹಿಸಲು ಅನುಮತಿ ಇಲ್ಲ). ಕಳುಹಿಸುವವರು ಮತ್ತು ಸ್ವೀಕರಿಸುವವರ ವಿಳಾಸ ಸ್ಪಷ್ಟವಾಗಿ ಇರಬೇಕು.

**ಸೇವಾ ಶುಲ್ಕದ ಉಲ್ಲೇಖ:** 300 ಗ್ರಾಂವರೆಗೆ 20, 301 ರಿಂದ 500 ಗ್ರಾಂ 25, 501 ರಿಂದ 1000 ಗ್ರಾಂ 35, ಗರಿಷ್ಠ 5000 ಗ್ರಾಂವರೆಗೆ 100. ಈ ಸೇವೆ ಯಲ್ಲಿ ನೋಂದಣಿ, ತಲುಪಿದ್ದಕ್ಕೆ ಪುರಾವೆ ಹಾಗೂ ವಿಮಾ ಸೇವೆಗಳನ್ನು ಹೆಚ್ಚುವರಿ ಶುಲ್ಕದೊಂದಿಗೆ ಪಡೆಯ ಬಹುದು.

ಇದು ವಿದ್ಯಾರ್ಥಿಗಳು, ಓದುಗರು ಮತ್ತು ಪಠ್ಯಪುಸ್ತಕ ಪ್ರಕಾಶಕರುಗಳಿಗೆ ಉಪಯುಕ್ತ ವಾಗುವಂತೆ ರೂಪಿಸಲಾಗಿದೆ. ಸಾರ್ವಜನಿಕರು ಇದರ ಸದು ಪಯೋಗ ಪಡೆಯ ಬೇಕೆಂದು ಕೋರಿದರು. ಈ ಸೇವೆಗೆ ಬಳ್ಳಾರಿ ಪ್ರಧಾನ ಅಂಚೆ ಕಚೇರಿಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ನಿಷ್ಠಿ ರುದ್ರಪ್ಪ ಅವರು ಒಂದು ಪುಸ್ತಕವನ್ನು ರವಾನಿಸುವ ಮುಖಾಂತರ ಮೊದಲ ಗ್ರಾಹಕರಾದರು.

ಈ ಕಾರ್ಯಕ್ರಮದಲ್ಲಿ ಪ್ರಧಾನ ಅಂಚೆ ಪಾಲಕರಾದ ಎ ಜೆ ಭೀಮಸೇನ್, ಮಾರುಕಟ್ಟೆ ಅಧಿಕಾರಿ ಹನುಮಂತರೆಡ್ಡಿ ಮತ್ತು ಕಚೇರಿಯ ಸಹಾಯಕರಾದ ಅಲ್ಲಾಸಾಬ್ ಹಾಗೂ ಕಚೇರಿಯ ಸಿಬ್ಬಂದಿಗಳು ಹಾಜರಿದ್ದರು.






ಬೆಳಗಾವಿಯಲ್ಲಿ ಗುರುವಾರ ನಡೆದ ಛತ್ರಪತಿ ಶಿವಾಜಿ ಜಯಂತಿ ಮೆರವಣಿಗೆಯ ದೃಶ್ಯ.


# ವಿಜಯಪುರದಲ್ಲಿ ದಸಂಸ ವತಿಯಿಂದ ಅಂಬೇಡ್ಕರ್ ದಿನಾಚರಣೆ



**ವಿಜಯಪುರ, ಮೇ 1:** ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ಜಿಲ್ಲಾ ಸಮಿತಿ ವಿಜಯಪುರ ವತಿಯಿಂದ ಕಾರ್ಮಿಕ ದಿನಾಚರಣೆಯನ್ನು ವಿಶ್ವರತ್ನ ವಿಶ್ವಜ್ಞಾನಿ ಪರಮಪೂಜ್ಯ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಅತಿ ವಿಜೃಂಭನೆಯಿಂದ ನಡೆಸಲಾಯಿತು. ಸಭೆಯ ಅಧ್ಯಕ್ಷತೆಯನ್ನು ವಹಿಸಿ ಬೆಳಗಾವಿ ವಿಭಾಗಿಯ ಸಂಚಾಲಕರಾದ ಸಂಜು ವಾಯ್. ಕಂಬಾಗಿ ಮಾತನಾಡಿ, ಡಾ॥ ಬಿ.ಆರ್. ಅಂಬೇಡ್ಕರ್‌ವರು 1973 ರಲ್ಲಿ ಮೇ ದಿನವನ್ನು ಕರ್ಮಿಕರ ದಿನವನ್ನಾಗಿ ಘೋಷಿಸಿದರು. ಹಾಗೆನೆ ಕಾರ್ಮಿಕರ ಕೆಲಸ 12 ಘಂಟೆಯ ಕೆಲಸವನ್ನು 8 ಘಂಟೆಗೆ ಇಳಿಸಿದಂತ ಕೀರ್ತಿ ಡಾ॥ ಅಂಬೇಡ್ಕರ್‌ರವರಿಗೆ ಸಲ್ಲುಸತ್ತದೆ ಹಾಗೆ ಸಮಾನ ಕೆಲಸಕ್ಕೆ ಸಮಾನ ವೇತ ಇಎಸ್‌ಐ ಪಿಎಫ್ ಗಳನ್ನು ಕಾರ್ಮಿಕರಿಗೆ ಸಿಗುವಂತೆ ಮಾಡಿದರು. ಹೆಣ್ಣು ಮಕ್ಕಳಿಗೆ ಹೆರಿಗೆ ರಜೆಯನ್ನು ಮಾಡಿದರು ಅಂಬೇಡ್ಕರ್‌ರವರು ಆದ್ದರಿಂದ ಪ್ರತಿಯೊಬ್ಬ ಮಹಿಳೆಯರು ಅಂಬೇಡ್ಕರ್‌ರವರನ್ನು ನೆನೆಯಲೇ ಬೇಕು ಜಾತಿ ಮತ ಪಂತ ಯಾವುದನ್ನು ನೋಡದೇ ಎಲ್ಲಾ ಹೆಣ್ಣು ಮಕ್ಕಳಿಗೆ ಸ್ವತಂತ್ರವನ್ನು ಕೊಟ್ಟವರು ದೇಶದ ಪ್ರತಿಯೊಂದು ಹೆಣ್ಣು ಮಕ್ಕಳು ಅಂಬೇಡ್ಕರವರನ್ನು ಗೌರವಿಸಬೇಕಾದ್ದು, ಅವರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಸಂಚಾಲಕ ಶಂಕರ ಚಲವಾದಿ, ಜಿಲ್ಲಾ ಸಂಘಟನಾ ಸಂಚಾಲರಕಾದ ಮಹಾಂತೇಶ ರಾಠೋಡ, ಶ್ರೀಮಂತ ಪವಾರ, ಯಲ್ಲಪ್ಪ ಚಾಡೇಕರ, ಅಲ್ವರ ಅತ್ತಾರ ಮೊಸಿನ ಆಲಮೇಲ, ಸುರೇಶ ಚಾಡೇಕರ, ಸುರೇಶ ತಳಕೇರಿ, ಸಚೀನ ಕಾಂಬಳೆ, ಬಸವರಾಜ ಕಾಂಬಳೆ, ನಾಗರಾಜ ಕಾಂಬಳೆ, ಭೀಮಶಿ ಗೊಲ್ಲರ ಸುರೇಶ ಗೊಲ್ಲರ, ದೇವೆಂದ್ರ ಗೊಲ್ಲರ, ವಿಜಯಕುಮಾರ ಮೇತ್ರಿ, ಶುಭಂ ಕಾಂಬಳೆ ಮುಂತಾದವರು ಇದ್ದರು.

# ಮಾರ್ಗಮಧ್ಯೆ ಬಸ್ ನಿಲ್ಲಿಸಿ ನಮಾಜು ಚಾಲಕ ಎಆರ್ ಮುಲ್ಲಾ ಅಮಾನತು



**ಹುಬ್ಬಳ್ಳಿ, ಮೇ 1–** ಪ್ರಯಣಿಕರು ಇರುವಾಗಲೇ ವಾಯುವ್ಯ ಸಾರಿಗೆ ಸಂಸ್ಥೆಯ ಬಸ್ ಮಾರ್ಗಮಧ್ಯೆ ನಿಲ್ಲಿಸಿ ಬಸ್‌ನಲ್ಲೇ ನಮಾಜ್ ಮಾಡಿದ್ದ ಚಾಲಕನನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.


ಏಪ್ರಿಲ್ 29 ರಂದು ಹುಬ್ಬಳ್ಳಿಯಿಂದ ಹಾವೇರಿಗೆ ತೆರಳುತ್ತಿದ್ದ ಬಸ್‌ನಲ್ಲಿ ಈ ಘಟನೆ ನಡೆದಿದ್ದು, ಬಸ್ ಚಾಲಕ ಕಮ್ ನಿರ್ವಾಹಕ ಎ.ಆರ್.ಮುಲ್ಲಾ ಬಸ್‌ನಲ್ಲೇ ನಮಾಜ್ ಮಾಡುತ್ತಿರುವ ವಿಡಿಯೋ ಪ್ರಯಾಣಿಕ ರೊಬ್ಬರು ಮೊಬೈಲ್‌ನಲ್ಲಿ ಚಿತ್ರಿಸಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು.

ಈ ವಿಡಿಯೋ ವ್ಯಾಪಕ ವೈರಲ್ ಆಗಿದ್ದು ಚಾಲಕನ ನಡೆಗೆ ಆಕ್ರೋಶ ವ್ಯಕ್ತವಾಗಿತ್ತು. ಅಲ್ಲದೆ ಚಾಲಕನ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನೆಟ್ಟಿಗರು ಆಗ್ರಹಿಸಿದ್ದರು. ಈ ಘಟನೆ ನಂತರ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರೂ ಸಹ ವಿಡಿಯೋ ನೋಡಿ, ಎಲ್ಲರಿಗೂ ತಮ್ಮ ತಮ್ಮ ಧರ್ಮ ಆಚರಿಸಲು ಅಧಿಕಾರವಿದೆ. ಆದರೆ, ಕರ್ತವ್ಯ ದಲ್ಲಿರುವಾಗ ಅದನ್ನು ಬದಿಗಿರಿಸಿ ಧರ್ಮಾಚರಣೆ ಮಾಡುವುದು ಅಪರಾಧವಾಗುತ್ತದೆ ಎಂದು ತನಿಖೆಗೆ ಆದೇಶಿಸಿದ್ದರು.

ಇದೀಗ ಹಾನಗಲ್ ಘಟಕದ ಚಾಲಕ ಎಆರ್ ಮುಲ್ಲಾನನ್ನು ಕರ್ತವ್ಯಲೋಪ ಅಡಿಯಲ್ಲಿ ಕೆಲಸ ದಿಂದ ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ.

**ಮಂಗಳವಾರ ಅಂದರೆ ಏಪ್ರಿಲ್–29ರಂದು ಸಂಜೆ ಹುಬ್ಬಳ್ಳಿಯಿಂದ ಹಾವೇರಿಗೆ ಹೋಗುವ ಬಸ್‌ನ ಚಾಲಕ–ಕಂ–ನಿರ್ವಾಹಕ ಎಆರ್ ಮುಲ್ಲಾ ಮಾರ್ಗ ಮಧ್ಯೆ ಬಸ್ ನಿಲ್ಲಿಸಿ ನಮಾಜ್ ಮಾಡಿದ್ದಾರೆ. ಚಾಲಕ–ಕಂ–ನಿರ್ವಾಹಕ ನಮಾಜ್ ಮಾಡುತ್ತಿರುವುದನ್ನು ಪ್ರಯಾಣಿಕರೊಬ್ಬರು ಮೊಬೈಲ್ ಕ್ಯಾಮೆರಾದಲ್ಲಿ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದರು. ಈ ವಿಡಿಯೋ ಸಾಕಷ್ಟು ವೈರಲ್ ಆಗುತ್ತಿದ್ದಂತೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿಯವರು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗ ಎಂ. ಅವರಿಗೆ ಪತ್ರ ಬರೆದು ತನಿಖೆಗೆ ಆದೇಶಿಸಿದ್ದರು.**

# ವಿಜಯಪುರದ ಐತಿಹಾಸಿಕ ಬಾವಿಗಳ ಪುನಶ್ಚೇತನಗೊಳಿಸಿ ನೀರು ಪೂರೈಕೆಗೆ ಕ್ರಮ




**ವಿಜಯಪುರ ಮೇ.01** ವಿಜಯಪುರ ನಗರದಲ್ಲಿನ ವಿವಿಧ ಐತಿಹಾಸಿಕ ಬಾವಿಗಳನ್ನು ಮಹಾನಗರ ಪಾಲಿಕೆ ವತಿಯಿಂದ ಪುನಶ್ಚೇತನ ಗೊಳಿಸಿ, ಬಾವಡಿಯಲ್ಲಿರುವ ನೀರನ್ನು ಗೃಹ ಬಳಕೆಗಾಗಿ ಸಾರ್ವಜನಿಕರಿಗೆ ಪೂರೈಸುವ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮಹಾನರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ತಿಳಿಸಿದ್ದಾರೆ.

ವಿಜಯಪುರ ನಗರದಲ್ಲಿರುವ ಗಚ್ಚಿನಕಟ್ಟಿ ಕಾಲನಿ ಬಾವಡಿ, ಪೋಸ್ಟ್ ಆಫೀಸ್ ಆವರಣದಲ್ಲಿರುವ ಬಾವಡಿ, ಭರತ ಬಾವಡಿ, ಚಂದಾಬಾವಡಿ, ಸೈಟಲೈಟ್ ಬಸ್ ನಿಲ್ದಾಣದ ಹತ್ತಿರದ ರೂಮಾಲ ಬಾವಡಿ, ಆಕೃತಿ ಕಾಲನಿ ಬಾವಡಿ, ಕಣಕಿ ಬಜಾರ ಹತ್ತಿರದ ಸಕ್ರಿ ಬಾವಡಿ, ಚಪ್ಪರಬಂದ ಗಲ್ಲಿಯಲ್ಲಿರುವ ಮುಕ್ರಿ ಬಾವಡಿ, ಝುಂಡಾ ಕಟ್ಟಾ ಹತ್ತಿರವಿರುವ ಪೇಟಿ ಬಾವಡಿ, ಬಸರಿ ಬಾವಡಿ, ಬಾವಡಿ, ರಂಭಾಪುರ ಬಾವಡಿ, ವಾರ್ಡ ನಂ.32ರ ಲಿಂಗೇಶ್ವರ ದೇವಸ್ಥಾನದ ಹತ್ತಿರವಿರುವ ಬಾವಡಿ ಹಾಗೂ ಶಾಹು ನಗರದ ಗುಂಡ ಬಾವಡಿಯನ್ನು ಪುನಶ್ಚೇತನ ಗೊಳಿಸಲಾಗಿದೆ. ಈ ಬಾವಡಿಗಳು ನೀರಿನಿಂದ ಸಮೃದ್ಧ ವಾಗಿದ್ದು, ಈ ಬಾವಡಿಗಳ ಪೈಕಿ ಈಗಾಗಲೇ 6 ಬಾವಡಿಗಳ ನೀರು ಪೂರೈಕೆ ಮಾಡಲಾಗುತ್ತಿದೆ, ಇನ್ನುಳಿದ ಬಾವಿಗಳಿಂದಲೂ ಸಹ 10 ದಿನ ಗಳೊಳಗಾಗಿ ನೀರು ಪೂರೈಕೆಗೆ ಕ್ರಮ ವಹಿಸಲಾಗುತ್ತಿದೆ.

ಜಿಲ್ಲಾ ಉಸ್ತುವಾರಿ ಸಚಿವರ ನಿರ್ದೇಶನದಂತೆ ಹಾಗೂ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ 2024–25ನೇ ಸಾಲಿನ 15ನೇ ಹಣಕಾಸು ಅನುದಾನದಲ್ಲಿ 96.06 ಲಕ್ಷ ರೂ.ಗಳಲ್ಲಿ 6 ಬಾವಿಗಳನ್ನು ಸ್ವಚ್ಛಗೊಳಿಸಿ ಪುನಶ್ಚೇತನಗೊಳಿ ಸಲಾಗಿದೆ. 13 ಲಕ್ಷ ರೂ.ಗಳ ಪಾಲಿಕೆಯ ಅನುದಾನದಲ್ಲಿ 11 ಬಾವಿಗಳ ಸ್ವಚ್ಛತೆ ಕಾಮಗಾರಿ ಕೈಗೊಳ್ಳಲಾಗಿದೆ. ಸನ್ 2025–26ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಲ್ಲಿ 50 ಲಕ್ಷ ರೂ. ಅನುದಾನ ಮೀಸಲಿರಿಸ ಲಾಗಿದ್ದು, ಒಟ್ಟು ಹೊಸದಾಗಿ 4 ಬಾವಿಗಳ ಪುನಶ್ಚೇತನ ಕಾರ್ಯ ಪ್ರಗತಿಯಲ್ಲಿದೆ 50 ಲಕ್ಷ ರೂ.ಗಳ ಹೆಚ್ಚುವರಿ ಅನುದಾನದಲ್ಲಿ ನಗರದಲ್ಲಿ ಹೊಸದಾಗಿ ಗುರುತಿಸಲಾದ ವಿವಿಧ ಬಾವಿಗಳು ಹಾಗೂ ಹಿಂದಿನ ಅವಧಿಯಲ್ಲಿ ಸ್ವಚ್ಛಗೊಳಿಸಿದ ಬಾವಿಗಳು ಸೇರಿದಂತೆ ಅವುಗಳಿಗೆ ವಿದ್ಯುತ್ ಮೋಟರ್ ಅಳವಡಿಕೆ, ಪೈಪ್‌ಗಳು ಹಾಗೂ ಸಿಸ್ಟರ್ನಗಳನ್ನು ಅಳವಡಿಸಿ ಬಾವಿಗಳ ಪುನಶ್ಚೇತನ ಕಾರ್ಯ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಗಡಿಯಲ್ಲಿ ಉದ್ವಿಗ್ನತೆ ತಗ್ಗಿಸಲು ಅಮೆರಿಕ ಒತ್ತಾಯ



**ವಾಷಿಂಗ್ಟನ್, ಮೇ 01:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಭಾರತ ಮತ್ತು ಪಾಕಿಸ್ತಾನಗಳು ತಮ್ಮ ಉದ್ವಿಗ್ನತೆಯನ್ನು ಕಡಿಮೆ ಮಾಡಿಕೊಳ್ಳುವಂತೆ ಅಮೆರಿಕ ಒತ್ತಾಯಿಸಿದೆ. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ವಿದೇಶಾಂಗ ಸಚಿವ ಎಸ್. ಜೈಶಂಕರ್ ಮತ್ತು ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅವರೊಂದಿಗೆ ಪ್ರತ್ಯೇಕ ಫೋನ್ ಸಂಭಾಷಣೆ ನಡೆಸಿ ಮತ್ತಷ್ಟು ಉಲ್ಬಣಗೊಳ್ಳುವುದನ್ನು ತಪ್ಪಿಸುವ ಬಗ್ಗೆ ಒತ್ತಿ ಹೇಳಿದರು.

ಬುಧವಾರ ರಾತ್ರಿ ಜೈಶಂಕರ್ ಅವರೊಂದಿಗಿನ ತಮ್ಮ ಫೋನ್ ಸಂಭಾಷಣೆಯಲ್ಲಿ, ರುಬಿಯೊ ಭಯಾನಕ ಭಯೋತ್ಪಾದಕ ದಾಳಿಯಲ್ಲಿ ಸಾವನ್ನಪ್ಪಿದ ಜೀವಗಳಿಗೆ ತಮ್ಮ ದುಃಖ ವ್ಯಕ್ತಪಡಿಸಿದರು ಮತ್ತು ಭಯೋತ್ಪಾದನೆಯ ವಿರುದ್ಧ ಭಾರತದೊಂದಿಗೆ ಸಹಕರಿಸಲು ಅಮೆರಿಕದ ಬದ್ಧತೆಯನ್ನು ಪುನರುಚ್ಚರಿಸಿದರು ಎಂದು ಅಮೆರಿಕ ವಿದೇಶಾಂಗ ಇಲಾಖೆ ತಿಳಿಸಿದೆ. 26 ನಾಗರಿಕರನ್ನು ಕೊಂದ ಆತ್ಮಸಾಕ್ಷಿಯಿಲ್ಲದ ದಾಳಿಯ ತನಿಖೆಯಲ್ಲಿ ಇಸ್ಲಾಮಾಬಾದ್ನ ಸಹಕಾರಕ್ಕಾಗಿ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಷರೀಫ್ ಅವರಿಗೆ ಕರೆ ನೀಡಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ದುಷ್ಕರ್ಮಿಗಳು, ಬೆಂಬಲಿಗರು ಮತ್ತು ಯೋಜಕರನ್ನು ಕಟಕಟೆಗೆ ತರಬೇಕು ಎಂದು ಜೈಶಂಕರ್ ರುಬಿಯೊಗೆ ತಿಳಿಸಿದರು.



'ಉಗ್ರ ದಾಳಿಗೆ ಕಾರಣರಾದವರನ್ನು, ಯೋಜನೆ ರೂಪಿಸಿದವರನ್ನು ಗುರುತಿಸಿ ತಕ್ಕ ಶಿಕ್ಷೆ ಕೊಡಿಸುವವರೆಗೆ ಮಾತುಕತೆ ಸಾಧ್ಯವಿಲ್ಲ' – ಸಚಿವ ಎಸ್ ಜೈಶಂಕರ್

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ನಿನ್ನೆ ರುಬಿಯೋ ಜೊತೆ ಚರ್ಚಿಸಲಾಗಿದೆ. ಅದರ ಅಪರಾಧಿಗಳು, ಬೆಂಬಲಿಗರು ಮತ್ತು ಯೋಜಕರನ್ನು ಕಟಕಟೆಗೆ ತರಬೇಕು ಎಂದು ವಿದೇಶಾಂಗ ಸಚಿವರು ಎಕ್ಸ್ ನಲ್ಲಿ ಹೇಳಿದರು. ಏಪ್ರಿಲ್ 22 ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತವು ಪ್ರತೀಕಾರ ತೀರಿಸಿಕೊಳ್ಳುವ ಸಾಧ್ಯತೆಯ ಬಗ್ಗೆ ಊಹಾಪೋಹಗಳ ನಡುವೆ ಜೈಶಂಕರ್–ರುಬಿಯೊ ಫೋನ್ ಸಂಭಾಷಣೆ ನಡೆದಿದೆ. ಪಹಲ್ಗಾಮ್ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಜೀವಗಳಿಗೆ ಕಾರ್ಯದರ್ಶಿ ತಮ್ಮ ದುಃಖವನ್ನು ವ್ಯಕ್ತಪಡಿಸಿದರು ಮತ್ತು ಭಯೋತ್ಪಾದನೆಯ ವಿರುದ್ಧ ಭಾರತದೊಂದಿಗೆ ಸಹಕಾರಕ್ಕೆ ಅಮೆರಿಕದ ಬದ್ಧತೆಯನ್ನು ಪುನರುಚ್ಚರಿಸಿದರು" ಎಂದು ಯುಎಸ್ ವಿದೇಶಾಂಗ ಇಲಾಖೆಯ ವಕ್ತಾರ ಟ್ಯಾಮಿ ಬ್ರೂಸ್ ಹೇಳಿದ್ದಾರೆ.

# ಐಎಸ್ಐ ಮುಖ್ಯಸ್ಥ ಪಾಕಿಸ್ತಾನದ ನೂತನ ರಾಷ್ಟ್ರೀಯ ಭದ್ರತಾ ಸಲಹೆಗಾರ



**ಇಸ್ಲಮಾಬಾದ್, ಮೇ 01:** ಪಹಲ್ಗಾಮ್ ದಾಳಿಯ ನಂತರ ಭಾರತ ಹಾಗೂ ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಹೆಚ್ಚುತ್ತಿದೆ. ಇದರ ನಡುವೆ ಪಾಕಿಸ್ತಾನದ ಇಂಟರ್–ಸರ್ವೀಸಸ್ ಇಂಟೆಲಿಜೆನ್ಸ್ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಮೊಹಮ್ಮದ್ ಅಸಿಮ್ ಮಲಿಕ್ನನ್ನು ದೇಶದ ನೂತನ ರಾಷ್ಟ್ರೀಯ ಭದ್ರತಾ ಸಲಹೆಗಾರನನ್ನಾಗಿ ಪಾಕ್ ನೇಮಿಸಿದೆ. ಸೆಪ್ಟೆಂಬರ್ 2024 ರಿಂದ ಮಲಿಕ್ ಐಎಸ್ಐ ಮುಖ್ಯಸ್ಥನಾಗಿ ಕಾರ್ಯ ನಿರ್ವಹಿಸುತ್ತಿದ್ದ. ಈ ಹುದ್ದೆಯ ಹೊರತಾಗಿಯೂ ರಾಷ್ಟ್ರೀಯ ಭದ್ರತಾ ಸಲಹೆಗಾರನನ್ನಾಗಿ ನೇಮಿಸಲಾಗಿದೆ ಎಂದು ವರದಿಯಾಗಿದೆ.

ಐಎಸ್ಐ ಮಹಾನಿರ್ದೇಶಕನಾಗಿ ಸೇವೆ ಸಲ್ಲಿಸುವ ಮೊದಲು, ಮಲಿಕ್ ಪಾಕಿಸ್ತಾನ ಸೇನೆಯ ಪ್ರಧಾನ ಕಚೇರಿಯಲ್ಲಿ ಅಡ್ಜುಟಂಟ್ ಜನರಲ್ ಆಗಿ ಸೇವೆ ಸಲ್ಲಿಸುತ್ತಿದ್ದ. ಕಾನೂನು ಮತ್ತು ಶಿಸ್ತಿನ ವಿಷಯಗಳನ್ನು ಒಳಗೊಂಡಂತೆ ಮಿಲಿಟರಿ ಆಡಳಿತ ವ್ಯವಹಾರಗಳನ್ನು ನೋಡಿಕೊಳ್ಳುತ್ತಿದ್ದ. ಅಡ್ಜುಟಂಟ್ ಜನರಲ್ ಆಗಿ ಅಧಿಕಾರ ವಹಿಸಿಕೊಂಡಾಗ ನಡೆದ ಪ್ರಮುಖ ಘಟನೆಗಳಲ್ಲಿ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಬಂಧನ ಮತ್ತು ಅವರ ಬೆಂಬಲಿಗರ ಪ್ರತಿಭಟನೆಗಳು ಸೇರಿವೆ. ಈ ಪ್ರತಿಭಟನೆಯನ್ನು ಮಲಿಕ್ ನಿಭಾಯಿಸಿದ್ದ. ಅಲ್ಲದೇ ಬಲೂಚಿಸ್ತಾನ್ ಮತ್ತು ದಕ್ಷಿಣ ವಜೀರಿಸ್ತಾನದಲ್ಲಿ ವಿಭಾಗಗಳನ್ನು ಸಹ ಮಲಿಕ್ ಕಮಾಂಡ್ ಮಾಡಿದ್ದ. ಪಹಲ್ಗಾಮ್ ದಾಳಿಯ ನಂತರ ಭಾರತ ಪಾಕ್ ನಡುವೆ ಯುದ್ಧದ ವಾತಾವರಣ ನಿರ್ಮಾಣವಾಗಿದೆ. ಇದರಿಂದ ಮಲಿಕ್ನನ್ನು ರಾಷ್ಟ್ರೀಯ ಭದ್ರತಾ ಸಲಹೆಗಾರನನ್ನಾಗಿ ನೇಮಕಾತಿ ಮಾಡಲಾಗಿದೆ ಎಂದು ವರದಿಯಾಗಿದೆ.

ಪಾಕ್ನಿಂದ ಇಂದು (ಮೇ 1) ಸಹ ಗಡಿ ನಿಯಂತ್ರಣ ರೇಖೆಯಲ್ಲಿ ಕದನ ವಿರಾಮ ಉಲ್ಲಂಘನೆ ಮುಂದುವರೆದಿದೆ. ಬುಧವಾರ ಜಮ್ಮು ಮತ್ತು ಕಾಶ್ಮೀರದ ಅಖ್ನೂರ್ ಸೆಕ್ಟರ್ನ ಅಂತರರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ತಾನದ ಕಡೆಯಿಂದ ಅಪ್ರಚೋದಿತ ಗುಂಡಿನ ದಾಳಿ ನಡೆದಿರುವುದು ವರದಿಯಾಗಿತ್ತು.

ಏ.22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದರು. ಈ ದಾಳಿಯಲ್ಲಿ 26 ಮಂದಿ ಸಾವನ್ನಪ್ಪಿದ್ದರು. ಕರ್ನಾಟಕ ಮೂಲದ ಇಬ್ಬರು ಸಾವಿಗೀಡಾಗಿದ್ದರು.

# ಆರ್ಥಿಕ ಒಪ್ಪಂದಕ್ಕೆ ಅಮೆರಿಕ–ಉಕ್ರೇನ್ ಸಹಿ

**ವಾಷಿಂಗ್ಟನ್, ಮೇ 01:** ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸತತ ಒತ್ತಡಕ್ಕೆ ಮಣಿದಿರುವ ಉಕ್ರೇನ್ ಅಮೆರಿಕದ ಜೊತೆಗೆ ಆರ್ಥಿಕ ಒಪ್ಪಂದಕ್ಕೆ ಸಹಿ ಹಾಕಿದೆ. ರಷ್ಯಾದ ಅತಿಕ್ರಮಣ ಎದುರಿಸಲು ಸೇನಾ ಮತ್ತು ಆರ್ಥಿಕ ನೆರವು ನೀಡಿದ್ದನ್ನು ಸರಿತೂಗಿಸಲು ಆರ್ಥಿಕ ಒಪ್ಪಂದಕ್ಕೆ ಒಳಪಡಬೇಕು ಎಂದು ಟ್ರಂಪ್ ಅವರು ಒತ್ತಡ ಹೇರಿದ್ದರು. ಉಕ್ರೇನ್ನ ಮರುನಿರ್ಮಾಣಕ್ಕೆ ಅಗತ್ಯ ಹೂಡಿಕೆ ಜೊತೆಗೆ ಉಕ್ರೇನ್‌ನಲ್ಲಿ ಇರುವ ಖನಿಜನಿಕ್ಷೇಪಗಳು ಸೇರಿದಂತೆ ಪ್ರಾಕೃತಿಕ ಸಂಪನ್ಮೂಲ ಬಳಕೆಗೆ ಅಮೆರಿಕಕ್ಕೆ ಈ ಒಪ್ಪಂದ ಅನುವು ಮಾಡಿಕೊಡಲಿದೆ. ಒಪ್ಪಂದ ಕುರಿತು 'ಎಕ್ಸ್'ನಲ್ಲಿ ವಿಡಿಯೊ ಹಂಚಿಕೊಂಡಿರುವ ಆರ್ಥಿಕ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಅವರು, 'ಉಕ್ರೇನ್‌ನಲ್ಲಿ ಹೂಡಿಕೆಗೆ ಈ ಪಾಲುದಾರಿಕೆ ನೆರವಾಗಲಿದೆ' ಎಂದಿದ್ದಾರೆ. 'ಇದು, ಒಟ್ಟು ಆರ್ಥಿಕ ಒಪ್ಪಂದ. ಕೇವಲ ಖನಿಜ ನಿಕ್ಷೇಪಕ್ಕೆ ಸೀಮಿತವಲ್ಲ. ಮೂಲಸೌಕರ್ಯ, ಇಂಧನ ಕ್ಷೇತ್ರದ ಪ್ರಗತಿಯೂ ಸೇರಿದೆ. ಉಭಯತ್ರರಿಗೂ ಸಮಾನ ಲಾಭವಿದೆ' ಎಂದು ಬೆಸೆಂಟ್ ಅವರು ವಿವರಿಸಿದರು. ಅಮೆರಿಕದ ಪ್ರತಿಭೆ, ಬಂಡವಾಳ, ಆಡಳಿತವನ್ನು ಬಳಸಿಕೊಂಡು ಉಕ್ರೇನ್ನಲ್ಲಿ ಹೂಡಿಕೆ ವಾತಾವರಣ ವೃದ್ಧಿ. ಆರ್ಥಿಕ ಚೇತರಿಕೆಗೆ ಈ ಒಪ್ಪಂದ ಸಹಕಾರಿಯಾಗಿದೆ ಎಂದಿದ್ದಾರೆ. ಇತ್ತೀಚೆಗೆ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ಸಂದರ್ಭದಲ್ಲೂ ಉಕ್ರೇನ್ ಅಧ್ಯಕ್ಷ ಝೆಲೆನ್ ಅವರೊಂದಿಗೆ ಟ್ರಂಪ್ ಅವರು ಚರ್ಚೆ ನಡೆಸಿದ್ದರು. ಒಪ್ಪಂದ ಕುರಿತು ಸಂತಸ ವ್ಯಕ್ತಪಡಿಸಿರುವ ಉಕ್ರೇನ್‌ನ ಸಚಿವ ಯುಲಿಯಾ, 'ದೇಶಕ್ಕೆ ಜಾಗತಿಕ ಹೂಡಿಕೆಯನ್ನು ಸೆಳೆಯಲು ಅಮೆರಿಕದ ಜೊತೆಗೂಡಿ ನಾವು ಕಾರ್ಯನಿರ್ವಹಿಸಲಿದ್ದೇವೆ' ಎಂದು ಪ್ರತಿಕ್ರಿಯಿಸಿದ್ದಾರೆ.



# ಸೂಪರ್‌ಬೆಟ್ ಚೆಸ್: ಫೆಡೋಸೀವ್‌ಗೆ ಪ್ರಶಸ್ತಿ

**ವಾರ್ಸಾ, ಮೇ 01:** ನಿರೀಕ್ಷೆಯಂತೆ ಸೊವೇನಿಯಾದ ಗ್ರಾಂಡ್ ಮಾಸ್ಟರ್ ವ್ಲಾದಿಮಿರ್ ಫೆಡೊಸೀವ್ ಅವರು ಬುಧವಾರ ಮುಕ್ತಾಯಗೊಂಡ ಸೂಪರ್‌ಬೆಟ್ ಬ್ಯಾಪಿಡ್ ಮತ್ತು ಬಿಟ್ಸ್ ಚೆಸ್ ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡರು. ಭಾರತದ ಗ್ರಾಂಡ್ ಮಾಸ್ಟರ್ ಆರ್.ಪ್ರಜ್ಞಾನಂದ ಮೂರನೇ ಸ್ಥಾನ ಗಳಿಸಿದರು. ಬಿಟ್ಸ್ ವಿಭಾಗದಲ್ಲಿ ನಿರಾಶೆ ಅನುಭವಿಸಿದ ಭಾರತದ ಇನ್ನೊಬ್ಬ ಆಟಗಾರ ಅರವಿಂದ ಚಿದಂಬರಂ ಅವರು ಹತ್ತು ಮಂದಿ ಆಟಗಾರರಿದ್ದ ಕಣದಲ್ಲಿ ಜಂಟಿ ಏಳನೇ ಸ್ಥಾನಕ್ಕೆ ಸರಿದರು. ಗ್ರಾಂಡ್ ಚೆಸ್ ಟೂರ್ ಭಾಗವಾಗಿರುವ ಈ ಟೂರ್ನಿ ಅರವಿಂದ್ ಅವರ ಪಾಲಿಗೆ ಮೊದಲನೆಯದಾಗಿತ್ತು.

ಮಂಗಳವಾರದ ಕೊನೆಗೆ 3.5 ಅಂಕಗಳ ಮುನ್ನಡೆ ಹೊಂದಿದ್ದ ಫೆಡೊಸೀವ್ ಸಂಭವನೀಯ 36ರಲ್ಲಿ 26.5 ಅಂಕ ಸಂಗ್ರಹಿಸಿದರು. ಅಗ್ರಸ್ಥಾನಕ್ಕಾಗಿ ಸುಮಾರು ?34 ಲಕ್ಷ ನಗದು ಬಹುಮಾನ ಅವರ ಪಾಲಾಯಿತು. ಅವರು ವೈಲ್ಡ್ ಕಾರ್ಡ್ ಪ್ರವೇಶ ಪಡೆದಿದ್ದರು.

ಫ್ರಾನ್ಸ್ ನ ಮಾಕ್ಸಿಂ ವೇಷಿಯರ್ ಲಗ್ರಾವ್ 21.5ಅಂತ ಸಂಗ್ರಹಿಸಿ ಎರಡನೇ ಸ್ಥಾನ ಪಡೆದು ?25 ಲಕ್ಷ ಜೇಬಿಗಿಳಿಸಿದರು. ಪ್ರಜ್ಞಾನಂದ 20.5 ಅಂಕ ಕಲೆಹಾಕಿ ?21ಲಕ್ಷ ಬಹುಮಾನ ಪಡೆದರು. ಈ ಟೂರ್ನಿಯಲ್ಲಿ ರಾಪಿಡ್ ಪಂದ್ಯದ ಗೆಲುವಿಗಾಗಿ ಎರಡು ಹಾಗೂಬ್ಬಿಟ್ಸ್ ಪಂದ್ಯದ ಗೆಲುವಿಗೆ ಒಂದು ಅಂಕ ನೀಡಲಾಗುತ್ತದೆ. ಮಾಜಿ ವಿಶ್ವ ಚಾಂಪಿಯನ್, ಬಲ್ಗೇರಿಯಾದ ವ್ಯಾಸಲಿನ್ ಟೊಪಲೋವ್ (10 ಅಂಕ) ಕೊನಯ ಸ್ಥಾನ ಪಡೆದರು. ಅರವಿಂದ್ ಮತ್ತು ಆತಿಥೇಯ ಪೋಲೆಂಡ್ ಯಾನ್ ಕ್ರಿಸ್ಟೋಫ್ ಡೂಡಾ ತಲಾ 17 ಅಂಕ ಪಡೆದರು. ಡೂಡಾ ಉತ್ತಮ ಪ್ರೊಗ್ರೆಸಿವ್ ಸ್ಕೋರ್ ನಿಂದ ಏಳನೇ ಸ್ಥಾನ ವಡೆದರು. ಗ್ರಾಂಡ್ ಚೆಸ್ ಟೂರ್ ಸರಣಿಯ ಮುಂದಿನ ಟೂರ್ನಿ ರುಮೇನಿಯಾದಬುಕಾರೆಸ್ಟ್‌ನಲ್ಲಿ ಮೇ7ರಿಂದ ನಡೆಯಲಿದೆ. ಕ್ಲಾಸಿಕಲ್ ಮಾದರಿಯ ಈ ಟೂರ್ನಿಯಲ್ಲಿ ಪ್ರಜ್ಞಾನಂದ ಜೊತೆ ವಿಶ್ವ ಚಾಂಪಿಯನ್ ಡಿ. ಗುಕೇಶ್ ಅವರೂ ಪಾಲ್ಗೊಳ್ಳುವರು. ಒಬ್ಬರು ವೈಲ್ಡ್ ಕಾರ್ಡ್ ಪ್ರವೇಶ ಪಡೆಯಲಿದ್ದಾರೆ. ಅಮೆರಿಕದ ವ್ಯಾಬಿಯಾನೂ ಕರುವಾನ ವೆಸ್ಲಿ, ಸೂ ಜೊತೆಗೆ ಉಜ್ಬೇತಿಸ್ತಾನದ ಅ ಬ್ದು ಸ ತ್ತಾ ರೋ ವ್ ಅವರೂ ಆಡಲಿದ್ದಾರೆ.





ಸ್ಪೇನ್‌ನ ಮ್ಯಾಡ್ರಿಡ್‌ನಲ್ಲಿ ನಡೆದ ಮ್ಯಾಡ್ರಿಡ್ ಓಪನ್ ಟೆನಿಸ್ ಪಂದ್ಯಾವಳಿಯಲ್ಲಿ ಬೆಲಾರಸ್‌ನ ಅರಿನಾ ಸಬಲೆಂಕಾ ಮತ್ತು ಉಕ್ರೇನ್‌ನ ಮಾರ್ಟಾ ಕೊಸ್ಟ್ಯುಕ್ ನಡುವಿನ ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ರೈನಾ ಸಬಲೆಂಕಾ ಸಂಭ್ರಮಿದರು.

# ಭಾರತಕ್ಕೆ 131 ದಶಲಕ್ಷ ಡಾಲರ್ ಮೌಲ್ಯದ ಮಿಲಿಟರಿ ಹಾರ್ಡ್‌ವೇರ್ ಪೂರೈಕೆಗೆ ಅಮೆರಿಕ ಅನುಮೋದನೆ

**ವಾಷಿಂಗ್ಟನ್, ಮೇ 01:** ಪಹಲ್ಯಾಮ್ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಅಮೆರಿಕವು ನವದೆಹಲಿಗೆ 131 ಮಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ನಿರ್ಣಾಯಕ ಮಿಲಿಟರಿ ಹಾರ್ಡ್ ವೇರ್ ಮತ್ತು ಲಾಜಿಸ್ಟಿಕ್ಸ್ ಬೆಂಬಲ ಸ್ವತ್ತುಗಳನ್ನು ಪೂರೈಸುವ ಪ್ರಸ್ತಾಪವನ್ನು ಅನುಮೋದಿಸಿದೆ.

ಈ ಬೆಳವಣಿಗೆ ಅಮೆರಿಕ ಮತ್ತು ಭಾರತದ ನಡುವಿನ ಕಾರ್ಯತಂತ್ರದ ಸಂಬಂಧಕ್ಕೆ ಅನುಗುಣವಾಗಿದೆ. ಅಮೆರಿಕದ ವರದಿಯ ಪ್ರಕಾರ, ಪೆಂಟಗನ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ರಕ್ಷಣಾ ಭದ್ರತಾ ಸಹಕಾರ ಸಂಸ್ಥೆ (ಆಖಅಂ) ಮಿಲಿಟರಿ ಸರಬರಾಜುಗಳಿಗೆ ಅಗತ್ಯವಾದ ಪ್ರಮಾಣೀಕರಣವನ್ನು ನೀಡಿದೆ ಮತ್ತು ಸಂಭಾವ್ಯ ಮಾರಾಟದ ಬಗ್ಗೆ ಯುಎಸ್ ಕಾಂಗ್ರೆಸ್ಗೆ ತಿಳಿಸಿದೆ.

ಡೊನಾಲ್ಡ್ ಟ್ರಂಪ್ ಆಡಳಿತವು ಅಮೆರಿಕದಿಂದ ಮಿಲಿಟರಿ ಖರೀದಿಯನ್ನು ಹೆಚ್ಚಿಸುವಂತೆ ನವದೆಹಲಿಯ ಮೇಲೆ ಒತ್ತಡ ಹೇರುತ್ತಿರುವ ಸಮಯದಲ್ಲಿ ಭಾರತಕ್ಕೆ ರಕ್ಷಣಾ ಸಾಮಗ್ರಿಗಳಿಗೆ ಅನುಮೋದನೆ ದೊರೆತಿದೆ.



ಮಾಲ್ಟಾದ ಸ್ಲೀಮಾದಲ್ಲಿ ನಡೆದ ಮಾಲ್ಟಾ ಅಂತರರಾಷ್ಟ್ರೀಯ ಪಟಾಕಿ ಉತ್ಸವದ ಅದ್ದೂರಿ ಸಮಾರೋಪ ಸಮಾರಂಭದಲ್ಲಿ ಪಟಾಕಿ ಪ್ರದರ್ಶನ.

# ಭಾರತದಿಂದ ದಾಳಿ ಭೀತಿ; ಯುದ್ಧವನ್ನು ಅಲ್ಲಾನೇ ನಿಲ್ಲಿಸಬೇಕು: ಪಾಕ್ ರಕ್ಷಣಾ ಸಚಿವ



**ಇಸ್ಲಮಾಬಾದ್, ಮೇ 01:** ಭಾರತ ಮತ್ತು ಪಾಕ್ ನಡುವಿನ ಸಂಘರ್ಷದ ಸಾಧ್ಯತೆಗಳು ಹೆಚ್ಚುತ್ತಿವೆ. ಅಲ್ಲಾಹುನೇ ಈ ಯುದ್ಧ ನಿಲ್ಲಿಸಬೇಕು ಎಂದು ಪಾಕಿಸ್ತಾನ ರಕ್ಷಣಾ ಸಚಿವ ಖ್ವಾಜಾ ಆಸೀಫ್ ಹೇಳಿಕೆ ನೀಡಿದ್ದಾರೆ.

ನೆರೆಯ ರಾಷ್ಟ್ರಗಳ ನಡುವಿನ ಉದ್ವಿಗ್ನತೆಯನ್ನು ಶಮನಗೊಳಿಸಲು ಇತರ ದೇಶಗಳು ಪ್ರಯತ್ನಗಳನ್ನು ಮಾಡಿದರೂ, ಕಾಲ ಕಳೆದಂತೆ ಭಾರತದೊಂದಿಗೆ ಸಂಘರ್ಷದ ಸಾಧ್ಯತೆಗಳು ಹೆಚ್ಚುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಇತ್ತೀಚಿನ ಭದ್ರತಾ ಪರಿಸ್ಥಿತಿಯ ಬಗ್ಗೆ ಗಮನಹರಿಸಿದಾಗ, ಕಾಲ ಕಳೆದಂತೆ ಸಂಘರ್ಷದ ಸಾಧ್ಯತೆ ಹೆಚ್ಚುತ್ತಿದ್ದು, ಕಡಿಮೆಯಾಗುತ್ತಿಲ್ಲ. ಆದರೂ ಅನೇಕ ದೇಶಗಳು ಪರಿಸ್ಥಿತಿಯನ್ನು ತಪ್ಪಿಸಲು ಪ್ರಯತ್ನಿಸುತ್ತಿವೆ ಎಂದು ತಿಳಿಸಿದ್ದಾರೆ. ಒಂದು ವೇಳೆ ಪಾಕಿಸ್ತಾನ ದಾಳಿ ಎದುರಿಸಿದರೆ ಸೂಕ್ತ ಪ್ರತಿಕ್ರಿಯೆ ನೀಡುವುದು ನಿಶ್ಚಿತ. ಭಾರತದಿಂದ ಉಲ್ಲಂಘನೆಯಾದರೆ, ನಾವು ಪ್ರತಿಕ್ರಿಯಿಸುತ್ತೇವೆ.

ನಮ್ಮ ಪ್ರತಿಕ್ರಿಯೆಯ ಸ್ವರೂಪವು ಭಾರತದ ಕ್ರಮದಿಂದ ನಿರ್ಧರಿಸಲ್ಪಡುತ್ತದೆ. ನಮ್ಮ ಪ್ರತಿಕ್ರಿಯೆಯ ಬಗ್ಗೆ ಯಾವುದೇ ಸಂದೇಹ ಇಲ್ಲ ಎಂದು ಹೇಳಿಕೆ ನೀಡಿದ್ದಾರೆ.

ಸಂಘರ್ಷದ ಪರಿಸ್ಥಿತಿಯನ್ನು ತಪ್ಪಿಸಲು ದೇವರು ಸಹಾಯ ಮಾಡಲಿ. ಪಾಕಿಸ್ತಾನದ ಪ್ರತಿಕ್ರಿಯೆಯ ಬಗ್ಗೆ ನಾನು ಊಹಿಸಲು ಬಯಸುವುದಿಲ್ಲ. ಆದರೆ ಅದು ಭಾರತದ ಕ್ರಮಕ್ಕಿಂತ ದೊಡ್ಡದಾಗಿರುತ್ತದೆ ಎಂದು ತಿಳಿಸಿದ್ದಾರೆ.

# ರಷ್ಯಾ, ಉಕ್ರೇನ್ ಪರಸ್ಪರ ಡ್ರೋನ್ ದಾಳಿ: 9 ಸಾವು

**ಕೀವ್, ಮೇ 01:** ರಷ್ಯಾ ಮತ್ತು ಉಕ್ರೇನ್ ಗುರುವಾರ ಪರಸ್ಪರನ ನೆಲೆ ಗುರಿಯಾಗಿಸಿ ಡ್ರೋನ್ ದಾಳಿ ನಡೆಸಿದ್ದು, ಒಟ್ಟು 9 ಮಂದಿ ಸತ್ತಿದ್ದಾರೆ. ಹಲವರು ಗಾಯಗೊಂಡಿದ್ದಾರೆ. ಉಕ್ರೇನ್ ನಡೆಸಿದ ಡ್ರೋನ್ ದಾಳಿಯಲ್ಲಿ ಏಳು ಮಂದಿ ಸತ್ತಿದ್ದರೆ, ರಷ್ಯಾದ ಸೇನೆಯು ಉಕ್ರೇನ್‌ನ ಒಡೆಸಾ ಬಂದರು ನಗರ ಗುರಿಯಾಗಿಸಿ ನಡೆಸಿದ ದಾಳಿಯಲ್ಲಿ ಇಬ್ಬರು ಸತ್ತಿದ್ದು, 15 ಮಂದಿ ಗಾಯಗೊಂಡರು. ಅಮೆರಿಕ ಮತ್ತು ಉಕ್ರೇನ್ ನಡುವೆ ಆರ್ಥಿಕ ಒಪ್ಪಂದ ಏರ್ಪಟ್ಟಿರುವ ಹಿಂದೆಯೇ ಈ ದಾಳಿ ನಡೆದಿರುವುದು ಗಮನಾರ್ಹವಾಗಿದೆ. ಉಕ್ರೇನ್ ಸೇನೆಯು ರಷ್ಯಾ ಆಕ್ರಮಿಕ ಒಲೆ ನಗರ ಗುರಿಯಾಗಿಸಿ ದಾಳಿ ನಡೆಸಿತು. ಏಳು ಮಂದಿ ಸತ್ತು, 20 ಮಂದಿ ಗಾಯಗೊಂಡರು ಎಂದು ರಷ್ಯಾದ ನೇಮಿಸಿರುವ ಗವರ್ನರ್ ವ್ಯಾಡಿಮಿರ್ ಸಾಲ್ಡೊ ತಿಳಿಸಿದರು. 'ರಷ್ಯಾ ನಡೆಸಿದ ಡ್ರೋನ್ ದಾಳಿಯಲ್ಲಿ ವಸತಿ ಸಂಕೀರ್ಣವು ಭಾಗಶಃ ತೀವ್ರ ಹಾನಿಗೊಂಡಿದೆ. ಮನೆ, ಸೂಪರ್‌ಮಾರ್ಕೆಟ್ ಹಾಗೂ ಶಾಲೆ ಕಟ್ಟಡಗಳಿಗೂ ಹಾನಿಯಾಗಿದೆ' ಎಂದು ಒಡೆಸಾ ಗವರ್ನರ್ ಒಲಿ ಕೀಪರ್ ತಿಳಿಸಿದ್ದಾರೆ. ದಾಳಿಯ ಬಳಿಕ ಕಟ್ಟಡಗಳಲ್ಲಿ ಬೆಂಕಿ ಹೊತ್ತಿ ಉರಿಯುತ್ತಿರುವ ವಿಡಿಯೊವನ್ನು ಅವರು ಟೆಲಿಗ್ರಾಂ ಚಾನೆಲ್‌ನಲ್ಲಿಯೂ ಹಂಚಿಕೊಂಡಿದ್ದಾರೆ. 'ಉಕ್ರೇನ್‌ನ ಎರಡನೇ ದೊಡ್ಡ ನಗರ ಹಾರ್ಕಿವನ ಪೆಟ್ರೋಲ್ ಬಂಕ್ ಗುರಿಯಾಗಿಸಿ ದಾಳಿ ನಡೆದಿದೆ. ಹಾನಿ ಸಂಭವಿಸಿಲ್ಲ' ಎಂದು ಇಲ್ಲಿನ ಮೇಯರ್ ಇಹೊರ್ ತೆರೆಕೋವ್ ತಿಳಿಸಿದ್ದಾರೆ.

'ಉಕ್ರೇನ್‌ನ ಐದು ಪ್ರಾಂತ್ಯಗಳ ವಿವಿಧೆಡೆ ಮೇಲೆ ರಷ್ಯಾ ಗುರುವಾರ 170 ಡ್ರೋನ್‌ಗಳ ದಾಳಿ ನಡೆಸಿತ್ತು. ಈ ಪೈಕಿ 74ಅನ್ನು ಹೊಡೆದುರುಳಿಸಲಾಗಿದೆ' ಎಂದು ಉಕ್ರೇನ್ನ ಸೇನೆ ತಿಳಿಸಿದೆ.

ಕ್ರೀಡೆ

# ಜೂನಿಯರ್ ಬಾಕ್ಸಿಂಗ್: ಭಾರತಕ್ಕೆ 43 ಪದಕ

**ಅಮ್ಮಾನ್, ಜೋರ್ಡನ್, ಮೇ 01:** ಭಾರತದ ಉದಯೋನ್ಮುಖ ಬಾಕ್ಸರ್‌ಗಳು ಇಲ್ಲಿ ನಡೆದ ಜೂನಿಯರ್ ಏಷ್ಯನ್ ಚಾಂಪಿಯನ್‌ಷಿಪ್‌ನಲ್ಲಿ ಕೊನೆಯ ದಿನವಾದ ಗುರುವಾರ 17 ವರ್ಷದೊಳಗಿನವರ ವಿಭಾಗದಲ್ಲಿ ನಾಲ್ಕು ಚಿನ್ನದ ಪದಕಗಳನ್ನು ಗೆದ್ದು, ಪದಕ ಪಟ್ಟಿಯಲ್ಲಿ ಎರಡನೇ ಸ್ಥಾನದೊಂದಿಗೆ ಅಭಿಯಾನ ಮುಗಿಸಿದರು. ಕೂಟದಲ್ಲಿ ಭಾರತವು 15 ಚಿನ್ನ, 6 ಬೆಳ್ಳಿ ಮತ್ತು 22 ಕಂಚಿನ ಪದಕವನ್ನು ಗೆದ್ದಿದೆ. ಪದಕ ಪಟ್ಟಿಯಲ್ಲಿ ಕಜಕಸ್ತಾನ ಅಗ್ರಸ್ಥಾನ ಪಡೆದರೆ, ಉಜೇಕಿಸ್ತಾನ ಮೂರನೇ ಸ್ಥಾನ ಗಳಿಸಿತು. 17 ವರ್ಷದೊಳಗಿನವರ ವಿಭಾಗದಲ್ಲಿ ಭಾರತದ ಸ್ಪರ್ಧಿಗಳು ನಾಲ್ಕು ಚಿನ್ನ ಗೆದ್ದರು. ಈ ಎಲ್ಲಾ ಪದಕಗಳು ಬಾಲಕಿಯರೇ ಜಯಿಸಿದ್ದು ವಿಶೇಷ.



ಖುಷಿ ಚಂದ್ (46 ಕೆ.ಜಿ) ಫೈನಲ್ ಹಣಾಹಣಿಯಲ್ಲಿ 3–2 ಅಂತರದಿಂದ ಮಂಗೋಲಿಯಾದ ಅಂಜುಲ್ ಅಂಗದಾಸ್ ಅವರನ್ನು ಮಣಿಸಿದರು.

ಅಹಾನಾ ಶರ್ಮಾ (50 ಕೆ.ಜಿ) ಮತ್ತು ಜನ್ನತ್ (54 ಕೆ.ಜಿ) ಅವರು ತಲಾ 5–0 ಅಂತರದಿಂದ ಉಜ್ಬೆಕಿಸ್ತಾನದ ಎದುರಾಳಿಗಳ ವಿರುದ್ಧ ಗೆಲುವು ಸಾಧಿಸಿದರು. ಅಂತಿಮ ಚಿನ್ನವನ್ನು ಅನ್ನಿಕಾ (80+ ಕೆ.ಜಿ) ಗೆದ್ದರು. ಅವರು ಜೋರ್ಡಾನ್‌ನ ಜನ ಅಲಮ್ನಹ್ ಎದುರು ವಿಜಯಶಾಲಿಯಾದರು. ಸಿಮ್ರನ್‌ಜೀತ್ ಕೌರ್ (60 ಕೆ.ಜಿ) ಮತ್ತು ಹರ್ಷಿಕಾ (63 ಕೆ.ಜಿ) ಬೆಳ್ಳಿ ಪದಕ ಗೆದ್ದರು. ಐದು ಬಾಲಕಿಯರು ಕಂಚಿನ ಪದಕಗಳನ್ನು ತಮ್ಮದಾಗಿಸಿಕೊಂಡರು. ಬಾಲಕರ ವಿಭಾಗದಲ್ಲಿ ದೇವಾಂಶ್ (80 ಕೆ.ಜಿ) 0–5ರಿಂದ ಕಜಕಸ್ತಾನದ ಮುಖಮಡಲಿ ರುಸ್ಟೆಂಬೆಕ್ ವಿರುದ್ಧ ಸೋತು ಬೆಳ್ಳಿಗೆ ಕೊರಳೊಡ್ಡಿದರು. ಆರು ಬಾಲಕರು ಕಂಚಿನ ಪದಕ ಗೆದ್ದರು. 15 ವರ್ಷದೊಳಗಿನವರ ವಿಭಾಗದಲ್ಲಿ ಭಾರತದ ಬಾಕ್ಸರ್‌ಗಳು 11 ಚಿನ್ನ, 3 ಬೆಳ್ಳಿ ಮತ್ತು 11 ಕಂಚು ಸೇರಿದಂತೆ ಒಟ್ಟು 25 ಪದಕಗಳನ್ನು ಬುಧವಾರ ಗೆದ್ದಿದ್ದರು.

# ಹಾಕಿ: ಆಸ್ಟ್ರೇಲಿಯಾಕ್ಕೆ ಮಣಿದ ಭಾರತದ ವನಿತೆಯರು

ಪರ್ತ್: ಭಾರತದ ವನಿತೆಯರು ಗುರುವಾರ ನಡೆದ ಹಾಕಿ ಪಂದ್ಯದಲ್ಲಿ 0–2 ಗೋಲುಗಳಿಂದ ಆಸ್ಟ್ರೇಲಿಯಾ ವಿರುದ್ಧ ಪರಾಭವಗೊಂಡರು. ಈ ಮೂಲಕ ಮೂರು ಪಂದ್ಯಗಳ ಸರಣಿಯಲ್ಲಿ ಆತಿಥೇಯ ತಂಡವು 1–0 ಮುನ್ನಡೆ ಪಡೆಯಿತು. ಪರ್ತ್ ಹಾಕಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಹರೇಂದ್ರ ಸಿಂಗ್ ಮಾರ್ಗದರ್ಶನದ ಭಾರತ ತಂಡವು ಕಠಿಣ ಹೋರಾಟ ನಡೆಸಿದರೂ, ಎದುರಾಳಿ ತಂಡದ ಸಾಂಘಿಕ ಆಟದ ಮುಂದೆ ನಿರುತ್ತರರಾದರು. ಪಂದ್ಯದ ಒಂಬತ್ತನೇ ನಿಮಿಷದಲ್ಲಿ ಕೋರ್ಟ್ನಿ ಸ್ಕೋನಲ್ ಅವರು ಫೀಲ್ಡ್ ಗೋಲು ಮೂಲಕ ಆತಿಥೇಯ ತಂಡಕ್ಕೆ ಮುನ್ನಡೆ ಒದಗಿಸಿದರು. ಎರಡು ಮತ್ತು ಮೂರನೇ ಕ್ವಾರ್ಟರನಲ್ಲಿ ಯಾವುದೇ ತಂಡಕ್ಕೆ ಗೋಲು ಸಿಗಲಿಲ್ಲ. ಕೊನೆಯ ಕಾರ್ಟನ್ರನಲ್ಲಿ ಗ್ರೇಸ್ ಸ್ಟಿವರ್ಟ್ (52ನೇ ನಿಮಿಷ) ಚೆಂಡನ್ನು ಗುರಿ ಸೇರಿಸಿ ಆಸ್ಟ್ರೇಲಿಯಾ ತಂಡದ ಮುನ್ನಡೆಯನ್ನು ಹೆಚ್ಚಿಸಿದರು. ಇದಕ್ಕೂ ಮೊದಲು ಎರಡು ಅಭ್ಯಾಸ ಪಂದ್ಯದಲ್ಲಿ ಭಾರತ ತಂಡವು ಕ್ರಮವಾಗಿ 3–5, 2–3ರಿಂದ ಆಸ್ಟ್ರೇಲಿಯಾ 'ಎ' ವಿರುದ್ಧ ಸೋತಿತ್ತು. ಆಸ್ಟ್ರೇಲಿಯಾದ ಪ್ರಮುಖ ತಂಡದ ವಿರುದ್ಧವೂ ಸಲೀಮಾ ಟೆಟೆ ಬಳಗ ನಿರಾಸೆ ಅನುಭವಿಸಿತು. ಎರಡನೇ ಕ್ವಾರ್ಟ್ರನ್ನಲ್ಲಿ ಸಿಕ್ಕ ಎರಡು ಪನಾತ್ಮ ಕಾರ್ನರ್ ಅವಕಾಶವನ್ನು ಕೈಚೆಲ್ಲಿದ್ದು ಭಾರತಕ್ಕೆ ದುಬಾರಿಯಾಯಿತು. ಎರಡನೇ ಪಂದ್ಯ ಶನಿವಾರ ನಡೆಯಲಿದೆ.